

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ವೇಣು ಸಾರಥ್ಯದಲ್ಲಿ...

ಸಂಪುಟ: 22, ಸಂಚಿಕೆ: 39, ಪುಟಗಳು: 8, ಮಂಗಳವಾರ, 19 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3




ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS | PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




### ಸುಭಾಷಿತ

ಜೀವನದಲ್ಲಿ ಪ್ರತಿ ಹಂತದಲ್ಲಿಯೂ ಪ್ರೀತಿ, ಕಾಳಜಿ, ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವ ಪುರುಷ ಪ್ರತಿ ಕುಟುಂಬದ ನಿಜವಾದ ಹೀರೋ.

### ಪಂಚಾಂಗ

(ಮಂಗಳವಾರ 19, ನವೆಂಬರ್-2024)

- ಕ್ರೋಧಿನಾಮ ಸಂವತ್ಸರ, ಶರದ್ ಋತ್
- ದಕ್ಷಿಣಾಯನ, ಕಾರ್ತಿಕ ಮಾಸ
- ತಿಥಿ: ಪಂಚಮಿ, ತದಿಗೆ ಮೃಗಶಿರಾ ನಕ್ಷತ್ರ
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

## ಸಂಕ್ಷಿಪ್ತ ಸುದ್ದಿ

### ವೃದ್ಧೆ ಮೇಲೆ ಭಿಕ್ಷಾಟನೆ ಮಾಡುತ್ತಿದ್ದ ಯುವಕನಿಂದ ಅತ್ಯಾಚಾರ

**ಕಲಬುರಗಿ:** 75 ವರ್ಷದ ನಿಸ್ಸಹಾಯಕ ವೃದ್ಧೆಯ ಮೇಲೆ ಭಿಕ್ಷಾಟನೆ ಮಾಡುತ್ತಾ ಊರೂರು ಸುತ್ತುತ್ತಿದ್ದ ಯುವಕ ಅತ್ಯಾಚಾರವೆಸಗಿರುವ ಘಟನೆ ಕಲಬುರಗಿ ಜಿಲ್ಲೆ ಚಿಂಚೋಳಿ ತಾಲೂಕಿನ ಚಂದ್ರಪಳ್ಳಿ ಗ್ರಾಮದಲ್ಲಿ ನಡೆದಿದೆ.



ಪಕ್ಕದ ಐನೊಳ್ಳಿ ಗ್ರಾಮದ ಫಕೀರ ತಯ್ಯಬ್ ಎಂಬ ಯುವಕ ಅತ್ಯಾಚಾರ ಎಸಗಿರುವ ಆರೋಪ ಕೇಳಿಬಂದಿದೆ. ಮನೆಯಲ್ಲಿ ಯಾರೂ ಇಲ್ಲದ ವೇಳೆ ಮನೆಯೊಳಗೆ ನುಗ್ಗಿ ವೃದ್ಧೆಯ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ಆರೋಪಿಸಲಾಗಿದೆ.

ತಯ್ಯಬ್ ಭಿಕ್ಷಾಟನೆ ಮಾಡುತ್ತಾ ಊರೂರು ಸುತ್ತುತ್ತಿದ್ದ. ಸದ್ಯ ಪರಾರಿಯಾಗಿರುವ ತಯ್ಯಬ್‌ನನ್ನು ಪತ್ತೆಹಚ್ಚುವ ಸಲುವಾಗಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ತೀವ್ರ ಅಸ್ವಸ್ಥಗೊಂಡ ವೃದ್ಧೆಯನ್ನು ಬೀದರ್‌ನ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

### ಸಿಪಿ ಯೋಗೇಶ್ವರ್ ವಿರುದ್ಧ ಸಹಿ ನಕಲು ಆರೋಪ, ದೂರು ದಾಖಲು



**ರಾಮನಗರ:** ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ ಉಪ ಚುನಾವಣೆ ಫಲಿತಾಂಶಕ್ಕೂ ಮುನ್ನವೇ ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ್ ಅವರಿಗೆ ಸಂಕಷ್ಟ ಶುರುವಾಗಿದೆ. ಪುತ್ರ ಶ್ರವಣ್ ಅವರ ಸಹಿ ನಕಲು ಮಾಡಿದ ಆರೋಪದಡಿ ಸಿಪಿ ಯೋಗೇಶ್ವರ್ ವಿರುದ್ಧ ಬೆಂಗಳೂರಿನ ಸಿಟಿ ಸಿವಿಲ್ ಕೋರ್ಟ್ ನಲ್ಲಿ ದಾವೆ ಹೂಡಿದ್ದಾರೆ. ಪ್ರಕರಣದ ವಿಚಾರಣೆ ಬುಧವಾರ (ನ.20) ನಡೆದಿದೆ.

**ಏನಿದು ಸಹಿ ನಕಲು ವಿವಾದ:** ಸಿಪಿ ಯೋಗೇಶ್ವರ ಅವರ ಮೊದಲ ಪತ್ನಿ ಮತ್ತು ಪುತ್ರ ಶ್ರವಣ್ ಅವರು ಎರಡೂವರೆ ವರ್ಷದ ಹಿಂದೆ ಬೆಂಗಳೂರಿನಲ್ಲಿ ಮನೆ ಖರೀದಿಸಿದ್ದರು. ಈ ಮನೆ ಸಿಪಿ ಯೋಗೇಶ್ವರ್ ಮೊದಲ ಪತ್ನಿ ಹಾಗೂ ಶ್ರವಣ್ ಹೆಸರಲ್ಲಿದೆ. ಶ್ರವಣ್ ಹಾಗೂ ಶ್ರವಣ್ ತಾಯಿ ಇಬ್ಬರೂ ಸೇರಿ ಮನೆಯನ್ನು ನಿಶಾಗೆ ಉಡುಗೊರೆಯಾಗಿ ನೀಡಿದ್ದಾರೆ. ಪುಟ 2

### ಸಿದ್ದರಾಮಯ್ಯಗೆ ಮುಡಾ ಸಂಕಷ್ಟ!

## ಮಾಜಿ ಆಯುಕ್ತರಿಗೆ ಲೋಕಾಯುಕ್ತ ನೋಟಿಸ್

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎನ್ನುವ ಆರೋಪ ಕೇಳಿ ಬಂದಾಗಿನಿಂದ ಮುಡಾ ಹಗರಣ ರಾಜ್ಯಾದ್ಯಂತ ಭಾರೀ ಸದ್ದು ಮಾಡುತ್ತಿದೆ. ಇದು ರಾಜ್ಯದ ಮುಖ್ಯಮಂತ್ರಿಗಳ ಸುತ್ತ ಗಿರಕಿಹೊಡೆಯುತ್ತಿದ್ದು, ಇದೀಗ ಮತ್ತೆ ಸಿದ್ದರಾಮಯ್ಯ ಅವರಿಗೆ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಪುಟ 2



## ವಿಆರ್‌ಎಸ್ ತೆಗೆದೊಕೊಳ್ಳಿ ಅಥವಾ ವರ್ಗಾವಣೆಯಾಗಿ ಹಿಂದೂಯೇತರ ಸಿಬ್ಬಂದಿ ಬೇಡ: ತಿರುಪತಿ ಬೋರ್ಡ್

**ತಿರುಪತಿ:** ಹೊಸದಾಗಿ ರಚನೆಯಾಗಿರುವ ತಿರುಮಲ ತಿರುಪತಿ ದೇವಸ್ಥಾನಂ ಮಂಡಳಿ ಉದ್ಯೋಗದಲ್ಲಿರುವ ಹಿಂದೂಯೇತರರು ಸ್ವಯಂ ನಿವೃತ್ತಿ ತೆಗೆದುಕೊಳ್ಳಬೇಕು ಅಥವಾ ಆಂಧ್ರಪ್ರದೇಶದ ಇತರ ಸರ್ಕಾರಿ ಇಲಾಖೆಗಳಿಗೆ ವರ್ಗಾವಣೆಯನ್ನು ಆರಿಸಿಕೊಳ್ಳಬೇಕೆಂದು ನಿರ್ಣಯವನ್ನು ಅಂಗೀಕರಿಸಿದೆ.

ಟಿಟಿಡಿ ಅಧ್ಯಕ್ಷ ಬಿಆರ್ ನಾಯ್ಡು ಅವರು ಸೋಮವಾರ ಈಗ ನಿರ್ಧಾರವನ್ನು ದೃಢಪಡಿಸಿದ್ದಾರೆ. ಹಿಂದೂಯೇತರ ಉದ್ಯೋಗಿಗಳ ನಿಖರ ಸಂಖ್ಯೆಯನ್ನು ಬಹಿರಂಗಪಡಿಸಲು ನಿರಾಕರಿಸಿದ್ದಾರೆ. ಮಂಡಳಿಯ 7 ಸಾವಿರ ಖಾಯಂ



ಉದ್ಯೋಗಿಗಳ ಪೈಕಿ ಸುಮಾರು 300 ಮಂದಿಗೆ ಈ ಕ್ರಮವು ಪರಿಣಾಮ ಬೀರಲಿದೆ ಎಂದು ಮೂಲಗಳು ತಿಳಿಸಿವೆ. ಟಿಟಿಡಿಯು ಸುಮಾರು 14,000 ಗುತ್ತಿಗೆ ಕಾರ್ಮಿಕರನ್ನು ಸಹ ನೇಮಿಸಿಕೊಂಡಿದೆ. ಪುಟ 2

### ಉಡುಪಿಯ ಕಬ್ಬಿನಾಲೆಯಲ್ಲಿ ಎನ್‌ಕೌಂಟರ್

# ನಕ್ಸಲ್ ನಾಯಕ ವಿಕ್ರಂಗೌಡ ಹತ್ಯೆ

**ಉಡುಪಿ:** ಪಶ್ಚಿಮ ಘಟ್ಟದ ತಪ್ಪಲಿನಲ್ಲಿ ಮತ್ತೆ ಗುಂಡಿನ ಸದ್ದು ಕೇಳಿಸಿದ್ದು, ಹೆಬ್ರಿ ಠಾಣಾ ವ್ಯಾಪ್ತಿಯ ಕಬ್ಬಿನಾಲೆ ಅರಣ್ಯ ಪ್ರದೇಶದಲ್ಲಿ ನಕ್ಸಲ್ ಕಾರ್ಯಕರ್ತ ವಿಕ್ರಂ ಗೌಡನನ್ನು ಎನ್ ಕೌಂಟರ್ ಮಾಡಿ ಹತ್ಯೆ ಮಾಡಲಾಗಿದೆ.

ನಕ್ಸಲ್ ನಿಗ್ರಹ ದಳ ಮತ್ತು ನಕ್ಸಲರ ಮಧ್ಯೆ ಮಂಗಳವಾರ ನಸುಕಿನ ಜಾವ ಗುಂಡಿನ ಕಾಳಗ ನಡೆದಿದೆ. ಈ ಘಟನೆಯಲ್ಲಿ ಓರ್ವ ಹತನಾಗಿದ್ದಾನೆ ಎಂಬ ವಿಚಾರ ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ. ಎನ್‌ಕೌಂಟರ್ ಬಗ್ಗೆ ಎಎನ್‌ಎಫ್ ಅಧಿಕೃತ ಮಾಹಿತಿ ನೀಡಿಲ್ಲ.

ಕಳೆದ 15 ದಿನಗಳಿಂದ ಚಿಕ್ಕಮಗಳೂರು, ಉಡುಪಿ, ದಕ್ಷಿಣ ಕನ್ನಡದ ಅರಣ್ಯ ಭಾಗದಲ್ಲಿ ಎಎನ್‌ಎಫ್ ಕೂಂಬಿಂಗ್ ನಡೆಸುತ್ತಿದೆ. ಸೋಮವಾರ ರಾತ್ರಿ ಐದು ಮಂದಿ ಇದ್ದ ನಕ್ಸಲರ ತಂಡ ಗ್ರಾಮಕ್ಕೆ ದಿನಸಿ ಸಾಮಗ್ರಿ ಖರೀದಿಗೆಂದು ಬಂದಿದ್ದಾಗ ನಕ್ಸಲ್ ನಿಗ್ರಹ ಪಡೆ ಕಾರ್ಯಾಚರಣೆ ನಡೆಸಿದೆ. ಅಷ್ಟರಲ್ಲಿ ನಕ್ಸಲರು ಎಎನ್‌ಎಫ್ ಮೇಲೆ ದಾಳಿ ನಡೆಸಿದ್ದಾರೆ. ದಾಳಿ-ಪ್ರತಿದಾಳಿಯಲ್ಲಿ ಓರ್ವ ಸಾವನ್ನಪ್ಪಿದ್ದಾನೆ. ಉಳಿದವರು ಪರಾರಿಯಾಗಿದ್ದು ಶೋಧ ಕಾರ್ಯ ನಡೆಯುತ್ತಿದೆ.



ಕೆಲ ದಿನಗಳ ಹಿಂದೆ ಚಿಕ್ಕಮಗಳೂರು ಜಿಲ್ಲೆಯ ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯ ಕೆಲ ಮನೆಗಳಿಗೆ ನಕ್ಸಲರು ಭೇಟಿ ನೀಡಿದ್ದರು. ಕೊಪ್ಪ ತಾಲೂಕಿನ ಯಡಗುಂದ ಗ್ರಾಮಕ್ಕೆ ನಕ್ಸಲರು ಭೇಟಿ ನೀಡಿ, ಅರಣ್ಯ ಒತ್ತುವರಿ ಮತ್ತು ಕಸ್ತೂರಿ ರಂಗನ್ ವರದಿ ಜಾರಿ ವಿರೋಧಿಸಿ ಚರ್ಚಿಸಿದ್ದರು.

ಲೋಕಸಭಾ ಚುನಾವಣೆ ಸಮಯದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕಡಬದ ಮನೆಗೆ ನಕ್ಸಲರು ಬಂದಿದ್ದ ಶಂಕೆ ವ್ಯಕ್ತವಾಗಿತ್ತು. ಕೊಂಬಾರು ಗ್ರಾಮದ ಚೆರು ಗ್ರಾಮದ ಮನೆಗೆ ತಡರಾತ್ರಿ, ಬಂದ 6 ಮಂದಿ ಎರಡು ಗಂಟೆಗಳ ಕಾಲ ಇದ್ದು ಮನೆಯಲ್ಲಿ ಊಟ ಮಾಡಿ ದಿನಸಿ ಸಾಮಾಗ್ರಿಗಳನ್ನು ಪಡೆದ ಮಾಹಿತಿ ಲಭ್ಯವಾಗಿತ್ತು. ಈ ವಿಚಾರ ತಿಳಿದ ಬೆನ್ನಲ್ಲೇ ನಕ್ಸಲ್ ನಿಗ್ರಹ ದಳಮನೆಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸಿತ್ತು. ಪುಟ 2

### ಸೋಮವಾರ ಸಂಜೆ ಎನ್‌ಕೌಂಟರ್

## ದೃಢಪಡಿಸಿದ ಪರಮೇಶ್ವರ್

**ಬೆಂಗಳೂರು:** ವಿಕ್ರಂ ಗೌಡ ಎಂಬ ಗ್ರೇಡೆಡ್ ನಕ್ಸಲ್ ನನ್ನು ಪೊಲೀಸರು ಸೋಮವಾರ ಸಂಜೆ ಎನ್‌ಕೌಂಟರ್ ಮಾಡಿದ್ದಾರೆ ಎಂದು ಗೃಹಸಚಿವ ಜಿ ಪರಮೇಶ್ವರ್ ಸ್ಪಷ್ಟನೆ ನೀಡಿದ್ದಾರೆ.



ಮೋಸ್ಟ್ ವಾಂಟೆಡ್ ನಕ್ಸಲ್ ನಾಯಕ ವಿಕ್ರಂ ಗೌಡ ಎನ್‌ಕೌಂಟರ್ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಳೆದ 20 ವರ್ಷಗಳಿಂದ ವಿಕ್ರಂನನ್ನು ಪೊಲೀಸರು ಹುಡುಕುತ್ತಿದ್ದರು. ಆದರೆ ವಿಕ್ರಂ ತಪ್ಪಿಸಿಕೊಂಡು ಓಡಾಡುತ್ತಿದ್ದ. ಅನೇಕ ಎನ್‌ಕೌಂಟರ್‌ಗಳಲ್ಲಿ ವಿಕ್ರಂ ಗೌಡ ತಪ್ಪಿಸಿಕೊಂಡಿದ್ದ. ಸೋಮವಾರ ಸಂಜೆ ವಿಕ್ರಂ ಗೌಡ ಎನ್‌ಕೌಂಟರ್ ಆಗಿದೆ. ಸೋಮವಾರ ಪೊಲೀಸರ ಮೇಲೆ ವಿಕ್ರಂ ಶೂಟ್ ಮಾಡಿದ್ದ. ಪೊಲೀಸರು ಪ್ರತಿದಾಳಿ ನಡೆಸಿ ಎನ್‌ಕೌಂಟರ್ ಮಾಡಿದ್ದಾರೆ. ವಿಕ್ರಂ ಜೊತೆಯಲ್ಲಿದ್ದ ಇಬ್ಬರು ಮೂವರು ಓಡಿ ಹೋಗಿದ್ದಾರೆ. ಆ ಭಾಗದಲ್ಲಿ ಕೂಂಬಿಂಗ್ ಮುಂದುವರಿದಿದೆ. ವಿಕ್ರಂ ಗೌಡ ಸಕ್ರಿಯರಾಗಿದ್ದ ಎಂದು ಪೊಲೀಸರು ಆತನನ್ನು ಹುಡುಕುತ್ತಿದ್ದರು ಎಂದರು.

ವಿಕ್ರಂ ಗೌಡ ಚಲನವಲನಗಳನ್ನು ಪೊಲೀಸರು ಗಮನಿಸುತ್ತಿದ್ದು, ಆತನ ಮೇಲೆ ನಿಗಾ ಇಟ್ಟಿದ್ದರು. ಈಗ ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ಮಾಡಿದ್ದಾರೆ. ನಾವು ರಾಜ್ಯದಲ್ಲಿ ನಕ್ಸಲ್ ಕಾಲ ಮುಗೀತು ಅಂದುಕೊಂಡಿದ್ದೆವು. ಆದರೆ ಕಳೆದ ವಾರ ರಾಜು ಮತ್ತು ಲತಾ ಎಂಬ ನಕ್ಸಲರು ಪತ್ತೆ ಆಗಿದ್ದಾರೆ. ಅವರಿಬ್ಬರೂ ತಪ್ಪಿಸಿಕೊಂಡು ಹೋಗಿದ್ದಾರೆ ಎಂದು ಕೂಂಬಿಂಗ್ ನಡೆಸಲಾಯಿತು. ಪುಟ 2

## ಕರ್ನಾಟಕದ ಯಾತ್ರಿಕರಿದ್ದ ಬಸ್ ಪಲ್ಟಿ ಹಲವರಿಗೆ ಗಾಯ

**ಬೆಂಗಳೂರು:** ಶಬರಿಮಲೆಯಿಂದ ಕರ್ನಾಟಕಕ್ಕೆ ವಾಪಸಾಗುತ್ತಿರುವಾಗ ಯಾತ್ರಿಕರನ್ನು ಹೊತ್ತಿದ್ದ ಬಸ್ ಕೇರಳದ ವಯನಾಡಿನಲ್ಲಿ ಪಲ್ಟಿಯಾಗಿದ್ದು, ಹಲವು ಮಂದಿ ಗಾಯಗೊಂಡಿದ್ದಾರೆ. ಇಂದು ಬೆಳಗಿನ ಜಾವ 6 ಗಂಟೆಗೆ ಘಟನೆ ನಡೆದಿದೆ. ಕಿರಿದಾದ ತಿರುನೆಲ್ಲಿ ಥೆಟ್ಟು ರಸ್ತೆಯಲ್ಲಿ ಇಂದು ಮುಂಜಾನೆ ಈ ಘಟನೆ ನಡೆದಿದೆ. ಅಪಘಾತದಲ್ಲಿ ಹಲವಾರು ಪ್ರಯಾಣಿಕರಿಗೆ ಗಾಯಗಳಾಗಿವೆ. ಶಬರಿಮಲೆಗೆ ಭೇಟಿ ನೀಡಿ ಹಿಂತಿರುಗುತ್ತಿದ್ದ ಕರ್ನಾಟಕದ ಯಾತ್ರಾರ್ಥಿಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಬೆಳಗ್ಗೆ 6 ಗಂಟೆ ಸುಮಾರಿಗೆ ಅಪಘಾತಕ್ಕೀಡಾಗಿದೆ.

ಬಸ್ ನಿಯಂತ್ರಣ ತಪ್ಪಿ ರಸ್ತೆಗೆ ಅಡ್ಡಲಾಗಿ ಪಲ್ಟಿಯಾಗಿದೆ. ಬಸ್‌ನಲ್ಲಿ 50ಕ್ಕೂ ಹೆಚ್ಚು



ಪ್ರಯಾಣಿಕರಿದ್ದರು ಎಂದು ಅಂದಾಜಿಸಲಾಗಿದೆ. ಗಾಯಾಳುಗಳನ್ನು ವಿವಿಧ ವಾಹನಗಳಲ್ಲಿ ಮಾನಂತವಾಡಿ ವೈದ್ಯಕೀಯ ಕಾಲೇಜಿಗೆ ಸಾಗಿಸಲಾಯಿತು. ಸಹ ಪ್ರಯಾಣಿಕರು ಮತ್ತು ಸ್ಥಳೀಯ ನಿವಾಸಿಗಳು ಕೂಡಲೇ ರಕ್ಷಣಾ ಕಾರ್ಯಗಳನ್ನು ನಡೆಸಿದರು. ಪುಟ 2

### ಸಚಿವ ಸ್ಥಾನಕ್ಕೆ ಬೇಡಿಕೆಯಲ್ಲ

## ನನ್ನ ಹಕ್ಕು

**ಮಂಡ್ಯ:** ಕರ್ನಾಟಕ ಕಾಂಗ್ರೆಸ್ ಸರ್ಕಾರದಲ್ಲಿ ಮತ್ತೆ ಸಚಿವ ಸ್ಥಾನಕ್ಕಾಗಿ ಕೂಗು ಜೋರಾಗಿದೆಯೇ? ಮಂಡ್ಯದಲ್ಲಿ ಮಳವಳ್ಳಿ ಕಾಂಗ್ರೆಸ್



ಶಾಸಕ ನರೇಂದ್ರ ಸ್ವಾಮಿ ನೀಡಿರುವ ಹೇಳಿಕೆ ಇಂಥದ್ದೊಂದು ಅನುಮಾನಕ್ಕೆ ಕಾರಣವಾಗಿದೆ. ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಸಚಿವ ಸ್ಥಾನ ಸಿಗದಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ಸಚಿವ ಸ್ಥಾನಕ್ಕೆ ಬೇಡಿಕೆ ಇಡುವುದಲ್ಲ, ನನ್ನ ಹಕ್ಕು ಅದು ಎಂದರು.

ಸಚಿವ ಸ್ಥಾನ ನೀಡುವ ಬಗ್ಗೆ ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಅವರಿಗೂ ಹೈಕಮಾಂಡ್‌ನಿಂದ ಅನುಮತಿ ಸಿಗಬೇಕು. ಮಂಡ್ಯದಲ್ಲಿ ನಾನೇ ಹಿರಿಯ ಶಾಸಕನಿದ್ದೇನೆ. ಕಾಂಗ್ರೆಸ್‌ನಲ್ಲಿ ಇಲ್ಲಿ ಯಾರು ಸೀನಿಯರ್ ಹೇಳಿ? ಪಕ್ಷ ಕಟ್ಟಿದವರು ಯಾರು ಹೇಳಿ. ನಾನೇ ಅಲ್ವಾ? ಪುಟ 2

## ನಾಳೆ ಎಣ್ಣೆ ಹೊಡೆಯೋರಿಗೆ 'ಡ್ರೈ' ಡೇ!



**ಬೆಂಗಳೂರು:** ಅಬಕಾರಿ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ನಾಳೆ ರಾಜ್ಯಾದ್ಯಂತ ಮದ್ಯ ಮಾರಾಟ ಬಂದ್‌ಗೆ ಫೆಡರೇಷನ್ ಆಫ್ ವೈನ್ ಮರ್ಚಂಟ್ಸ್ ಅಸೋಸಿಯೇಶನ್ ಕರ್ನಾಟಕ ಕರೆ ನೀಡಿದೆ.

ಕರ್ನಾಟಕದ ಬಾರ್ ಮಾಲೀಕರು ಹಾಗೂ ರಾಜ್ಯ ಸರ್ಕಾರದ ನಡುವೆ ಸಂಘರ್ಷ ತೀವ್ರಗೊಂಡಿದ್ದು, ಪುಟ 2

### ವಿಜಯಪುರದಲ್ಲಿ ವಕ್ಫ್ ಬಳಿಕ ಬಿಪಿಎಲ್ ದಂಗಲ್

## 4 ಸಾವಿರಕ್ಕೂ ಅಧಿಕ ಕಾರ್ಡ್ ರದ್ದು

**ವಿಜಯಪುರ:** ಜಿಲ್ಲೆಯಲ್ಲಿ ವಕ್ಫ್ ದಂಗಲ್ ಕಿಚ್ಚು ಹತ್ತಿ ರಾಜ್ಯಾದ್ಯಂತ ವ್ಯಾಪಿಸಿತ್ತು. ಇದೀಗ ಜಿಲ್ಲೆಯಲ್ಲಿ ಬಿಪಿಎಲ್ ದಂಗಲ್ ಶುರುವಾಗಿದೆ. ರಾಜ್ಯ ಸರ್ಕಾರ ಮತ್ತೊಂದು ಯಡವಟ್ಟು ಮಾಡಿ, ಬಡಜನರ ಕೆಂಗಣ್ಣಿಗೆ ಗುರಿಯಾಗಿದೆ.

ವಿಜಯಪುರದಲ್ಲಿ ವಕ್ಫ್ ದಂಗಲ್ ಮುಗಿಯುವ ಮುನ್ನವೇ ಬಿಪಿಎಲ್ ಕಾರ್ಡ್ ಸಮಸ್ಯೆ ಶುರುವಾಗಿದೆ. ಜಿಲ್ಲೆಯಲ್ಲಿ ಒಟ್ಟು 4,359 ಬಿಪಿಎಲ್ ಕಾರ್ಡ್ ರದ್ದಾಗಿವೆ. ಐಟಿ ರಿಟರ್ನ್ ಮಾಡಿದ 1,932 ಜನರು ಸೇರಿದಂತೆ ಸರ್ಕಾರಿ ನೌಕರರ 1,71,012 ರೂ. ಗಿಂತ ಹೆಚ್ಚು ಆದಾಯ ಹೊಂದಿರುವ 2,256 ಜನರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲಾಗಿದೆ. ಆದರೆ ಇದರಲ್ಲಿ ಕೆಲ ಬಡ ಜನರ ಬಿಪಿಎಲ್ ಕಾರ್ಡ್‌ಗಳು ರದ್ದಾಗಿವೆ.

ನಗರದ ಜಾಡರ ಓಣಿಯ ಮುಸ್ಲಿಂ ಬಡ ಕುಟುಂಬ ಅನವರಬೀ ಗಿರಗಾವ ಎಂಬುವವರ ಬಿಪಿಎಲ್ ಕಾರ್ಡ್ ರದ್ದಾಗಿದೆ. ಅನವರಬೀ ಅವರ ಪತಿ ಹಾಸಿಂಸಾಬ ಗಿರಗಾವ ಕಳೆದ 7 ವರ್ಷ ಹಿಂದೆ ತೀರಿ ಹೋಗಿದ್ದಾರೆ. ಸದ್ಯ ಅನವರಬೀ ಮಗ ಮೋತಿಲಾಲ ಸೇರಿದಂತೆ 7 ಜನರು



ಕುಟುಂಬಸ್ಥರು ಇದ್ದಾರೆ. ಅನವರಬೀ ಮಗ ಮೋತಿಲಾಲ ಬಟ್ಟೆ ಅಂಗಡಿಯಲ್ಲಿ ಕೂಲಿ ಕೆಲಸಕ್ಕೆ ಹೋಗುತ್ತಾನೆ.

ಮನೆಯಲ್ಲಿ ಉಳಿದರ್‍ಯಾರು ಕೆಲಸ ಮಾಡಲ್ಲ. ಬಿಪಿಎಲ್ ಕಾರ್ಡ್‌ನ ರೇಷನ್‌ನಿಂದ, ಗೃಹಲಕ್ಷ್ಮಿಯ ಹಣದಿಂದ ಬಡ ಕುಟುಂಬ ನೆಮ್ಮದಿಯ ಜೀವನ ಸಾಗಿಸುತ್ತಿದ್ದರು. ಆದರೆ 15 ವರ್ಷದ ಕೆಳಗೆ ಅನವರಬೀ ಅವರ ಪತಿ ಹಾಸಿಂಸಾಬ ಮಾರುಕಟ್ಟೆಯ ರಸ್ತೆ ಬದಿ ಬಟ್ಟೆ ವ್ಯಾಪರ ಮಾಡುತ್ತಿದ್ದರಂತೆ. ಯಾರೋ ಹೇಳಿದ್ದಕ್ಕೆ ಜಿಎಸ್‌ಟಿ ಕಟ್ಟಿದ್ದರಂತೆ. ಈಗ ಜಿಎಸ್‌ಟಿ ಕಟ್ಟಿದ ಆಧಾರದ ಮೇಲೆ ಇವರ ಬಿಪಿಎಲ್ ಕಾರ್ಡ ರದ್ದಾಗಿದೆ ಎಂದು ಹೇಳಿದ್ದಾರೆ. ಮನೆಗೆ ಬಂದು ಸರಿಯಾಗಿ ಪರಿಶೀಲನೆ ಮಾಡದೆ ಏಕಾಏಕಿ ನಮ್ಮ ಕಾರ್ಡ್ ರದ್ದು ಮಾಡಿರುವುದು ವಿಪರ್ಯಾಸ. ಬಿಪಿಎಲ್ ಕಾರ್ಡ್ ರೇಷನ್ ನಂಬಿ ಬದುಕುತ್ತಿದ್ದ ಜನರು ಮುಂದೆ ಜೀವನ ಸಾಗಿಸುವುದು ಕಷ್ಟ ಎಂದು ರಾಜ್ಯ ಸರ್ಕಾರಕ್ಕೆ ಶಾಪ ಹಾಕುವಂತಾಗಿದೆ.

### ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಸಿಗದ ಕ್ಯಾಬ್

## ಪ್ರಯಾಣಿಕರ ಪರದಾಟ!

**ಬೆಂಗಳೂರು:** ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಪೀಕ್ ಅವರ್‌ನಲ್ಲಿ ನೂರಾರು ಜನ ಟ್ಯಾಕ್ಸಿಗಾಗಿ ಕ್ಯಾಬ್ ಸ್ಟಾಂಡ್‌ನಲ್ಲಿ ಸರತಿ ಸಾಲಿನಲ್ಲಿ ನಿಂತಿರುತ್ತಾರೆ. ಆದರೆ, ಗಂಟೆಗಟ್ಟಲೆ ಕಾದರೂ ಟ್ಯಾಕ್ಸಿಗಳ ಸಂಖ್ಯೆ ತೀರ ವಿರಳವಾಗಿದೆ. ಬೇಡಿಕೆ ಹೆಚ್ಚಾಗಿದ್ದು, ಟ್ಯಾಕ್ಸಿ ಸೇವೆಯಲ್ಲಿ ಸಮಸ್ಯೆ ಉಂಟಾಗಿದೆ. ಏರ್‌ಪೋರ್ಟ್‌ನಿಂದ ನಿತ್ಯ ಸಾವಿರಾರು ಜನ ಕ್ಯಾಬ್‌ಗಳ ಮೂಲಕವೇ ಸಂಚರಿಸುತ್ತಿದ್ದು, ಕಡಿಮೆ ಬೆಲೆಗೆ ಸಿಗುವ ಆಪ್ ಆಧಾರಿತ ಕ್ಯಾಬ್‌ಗಳಿಗೆ ಹೆಚ್ಚಿನ ಬೇಡಿಕೆ ಇದೆ. ಜೊತೆಗೆ ಮೊದಲೆಲ್ಲ ಪ್ರಯಾಣಿಕರ ಸಂಖ್ಯೆಗೆ ತಕ್ಕಂತೆ ಕ್ಯಾಬ್‌ಗಳು ಏರ್ಪೋರ್ಟ್‌ಗೆ ಬರುತ್ತಿದ್ದವು. ಆದರೆ, ಕಳೆದ ಒಂದು ತಿಂಗಳಿಂದ ಮಾತ್ರ ಕ್ಯಾಬ್‌ಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿಲ್ಲ. ಹೀಗಾಗಿ ನಿತ್ಯ ದೇಶ-ವಿದೇಶಗಳಿಂದ ಬರುವ ಸಾವಿರಾರು ಜನ ಪ್ರಯಾಣಿಕರು ಏರ್



ಪೋರ್ಟ್‌ನಿಂದ ಸಿಲಿಕಾನ್ ಸಿಟಿಗೆ ತೆರಳಲು ಪರದಾಡುವಂತಾಗಿದೆ.

ಭಾನುವಾರ ಮತ್ತು ಸೋಮವಾರ ಇತರೆ ರಾಜ್ಯಗಳಿಗೆ ತೆರಳಿದ್ದ ಪ್ರಯಾಣಿಕರು ರಾತ್ರಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಬೆಂಗಳೂರಿಗೆ ಬಂದಿದ್ದು, ವಿಮಾನ ನಿಲ್ದಾಣದಲ್ಲಿ ಕ್ಯಾಬ್‌ಗಳಿಲ್ಲದೆ ಗಂಟ್ಟೆಗಟ್ಟಲೆ ಸರದಿಯಲ್ಲಿ ನಿಂತು ಪರದಾಡಿದರು. ಪುಟ 2

## ಮಹಾರಾಷ್ಟ್ರ ಸರ್ಕಾರದ ಮೇಲೆ ಕೇಸ್ ಹಾಕುತ್ತೇವೆ: ಸಿದ್ದರಾಮಯ್ಯ

**ಬೆಂಗಳೂರು:** ಗ್ಯಾರಂಟಿಗಳ ಬಗ್ಗೆ ಅಪಪ್ರಚಾರ ಮಾಡಿರುವ ಮಹಾರಾಷ್ಟ್ರ ಸರ್ಕಾರದ ಮೇಲೆ ಕಾನೂನು ಹೋರಾಟ ಮಾಡ್ತೀವಿ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಕರ್ನಾಟಕದಲ್ಲಿ ಗ್ಯಾರಂಟಿಗಳು ಸರಿಯಾಗಿ ಕೊಡ್ತಿಲ್ಲ ಎಂದು ಮಹಾರಾಷ್ಟ್ರ ಚುನಾವಣೆಯಲ್ಲಿ ಪ್ರಧಾನಿ ಮೋದಿ ಪ್ರಚಾರ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪ್ರಧಾನಿ ಮೋದಿ ಸುಳ್ಳು ಹೇಳುತ್ತಿದ್ದಾರೆ. ಮಹಾರಾಷ್ಟ್ರ ಜನರನ್ನು ದಾರಿ ತಪ್ಪಿಸಲು ಹೇಳುತ್ತಿದ್ದಾರೆ. ಮತ ಪಡೆಯಲು ಸುಳ್ಳು ಹೇಳುತ್ತಿದ್ದಾರೆ. ಸುಳ್ಳು ಜಾಹೀರಾತು ಅಲ್ಲಿನ ಬಿಜೆಪಿ ಸರ್ಕಾರ ನೀಡಿದೆ. ಮಹಾರಾಷ್ಟ್ರ ಸರ್ಕಾರದ ವಿರುದ್ಧ ಕಾನೂನು ಹೋರಾಟ ಮಾಡಲು ಕಾನೂನು ತಜ್ಞರ ಜೊತೆ ಚರ್ಚೆ ಮಾಡುತ್ತಿದ್ದೇನೆ ಎಂದರು. ಮಹಾರಾಷ್ಟ್ರ ಸರ್ಕಾರದ ಮೇಲೆ ಕೇಸ್ ಹಾಕಲು ಯೋಚನೆ ಮಾಡುತ್ತಿದ್ದೇವೆ. ಯಾಕೆಂದರೆ ಸುಳ್ಳು ಜಾಹೀರಾತು ಕೊಟ್ಟಿದ್ದಾರೆ. ಕಾನೂನು ಹೋರಾಟದ ಬಗ್ಗೆ ಯೋಚನೆ ಮಾಡ್ತಿದ್ದೇವೆ ಎಂದು ತಿಳಿಸಿದರು.



## ಜಮೀರ್ ಹೇಳಿಕೆಯನ್ನ ಸಮಾಜ ಒಪ್ಪಲ್ಲ : ಬೊಮ್ಮಾಯಿ

**ಬೆಂಗಳೂರು:** ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಕುರಿತು ವಸತಿ ಸಚಿವ ಜಮೀರ್ ಅಹಮದ್ ನೀಡಿರುವ ಹೇಳಿಕೆ ನಾಗರೀಕ ಸಮಾಜ ಒಪ್ಪುವಂಥದ್ದಲ್ಲ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಲ್ಲರಿಗೂ ಒಂದು ಗೌರವ ಇದ್ದೇ ಇರುತ್ತದೆ. ಶ್ರೀಮಂತ ಇರಲಿ, ಬಡವ ಇರಲಿ, ಎಲ್ಲರಿಗೂ ಅವರದ್ದೇ ಆದ ಗೌರವ ಇರುತ್ತದೆ. ಹಾಗಾಗಿ ಯಾರೂ ಯಾರನ್ನೂ ಕೊಂಡುಕಳ್ಳಲು ಆಗುವುದಿಲ್ಲ. ಇದರ ಅರಿವು ಇರುವವರು ಯಾರೂ ಹೀಗೆ ಮಾತನಾಡುವುದಿಲ್ಲ ಎಂದಿದ್ದಾರೆ. ಹಿಂದಿನ ಬಿಜೆಪಿ



ಸರ್ಕಾರದ ವಿರುದ್ಧ ಕಾಂಗ್ರೆಸ್ ಮಾಡಿದ್ದ 40% ಕಮಿಷನ್ ಆರೋಪ ಸುಳ್ಳು ಎಂದು ಲೋಕಾಯುಕ್ತ ವರದಿಯಲಿ ಉಲ್ಲೇಖ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ನಾನು ಆ ವಿಚಾರದ ಬಗ್ಗೆ ಈಗ ಮಾತನಾಡುವುದಿಲ್ಲ. ಈಗಾಗಲೇ ನಮ್ಮ ರಾಜ್ಯಾಧ್ಯಕ್ಷರು, ವಿಪಕ್ಷ ನಾಯಕರು ಮಾತನಾಡಿದ್ದಾರೆ. ಉಪಚುನಾವಣೆ ಫಲಿತಾಂಶ ಬಂದ ನಂತರ ನಾನು ಮಾತನಾಡುತ್ತೇನೆ. ಅಲ್ಲೀವರೆಗೂ ನಾನು ಮಾತನಾಡುವುದಿಲ್ಲ ಎಂದಿದ್ದಾರೆ. 40% ಕಮಿಷನ್ ಆರೋಪದ ಬಗ್ಗೆ ಯಾವುದು ಸತ್ಯ ಯಾವುದು ಅಸತ್ಯ ಎನ್ನುವ ಬಗ್ಗೆ ನ.23ರ ನಂತರ, ಉಪ ಚುನಾವಣಾ ಫಲಿತಾಂಶ ಬಂದ ನಂತರವೇ ಮಾತನಾಡುತ್ತೇನೆ ಎಂದು ಹೇಳಿದ್ದಾರೆ.

# ಆರೋಗ್ಯ ಕೇಂದ್ರಗಳಲ್ಲಿ ಔಷಧ ಕೊರತೆ ಇಲ್ಲ, ಟೆಂಡರ್ ವಿಳಂಬ ನಿಜ

**ಬೆಂಗಳೂರು:** ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ, ಆರೋಗ್ಯ ಕೇಂದ್ರಗಳಲ್ಲಿ ಔಷಧ ಕೊರತೆ ಇಲ್ಲ ಎಂದು ಕರ್ನಾಟಕ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು. 250ಕ್ಕೂ ಹೆಚ್ಚು ಔಷಧಗಳು ಔಟ್ ಆಫ್ ಸ್ಟಾಕ್ ಎಂಬ ವರದಿ ಬಗ್ಗೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ಆರೋಗ್ಯ ಕೇಂದ್ರಗಳಲ್ಲಿ ಔಷಧಗಳ ಕೊರತೆ ಇಲ್ಲ. ನಮ್ಮ ಸರ್ಕಾರ ಬಂದ ಆರಂಭದಲ್ಲಿ ಕೇವಲ ಶೇ 40 ರಷ್ಟು ಔಷಧ ಮಾತ್ರ ಸಿಗುತ್ತಿತ್ತು. ಉಳಿದ ಔಷಧಗಳನ್ನು ಆಸ್ಪತ್ರೆಗಳಲ್ಲೇ ಖರೀದಿ ಮಾಡಲಾಗುತ್ತಿತ್ತು. ಈಗ ಶೇ 75 ರಷ್ಟು ವೈದ್ಯಕೀಯ ಸರಬರಾಜು ನಿಗಮದಿಂದಲೇ ಔಷಧ ಪೂರೈಕೆಯಾಗುತ್ತಿದೆ ಎಂದರು.



ತಾಂತ್ರಿಕ ಕಾರಣದಿಂದ ಟೆಂಡರ್ ವಿಳಂಬವಾಗಿದೆ ಎಂದ ಅವರು, ಈ ವರ್ಷವೂ ಇಂಡೆಂಟ್ ಪ್ರಕಾರವೇ ಔಷಧ ಖರೀದಿಗೆ ವ್ಯವಸ್ಥೆ ಮಾಡಲಾಗುತ್ತಿದೆ. ಸದ್ಯ, ಆರೋಗ್ಯ ಕೇಂದ್ರಗಳಲ್ಲಿ ಸಾಕಷ್ಟು ಪ್ರಮಾಣದ ಔಷಧ ಇದೆ ಎಂದರು.

ಸರ್ಕಾರಿ ಆಸ್ಪತ್ರೆಗಳಲ್ಲಿ, ಆರೋಗ್ಯ ಕೇಂದ್ರಗಳಲ್ಲಿ ಯಾವ ಔಷಧ ಇಲ್ಲವೋ ಅಂಥವನ್ನು ಸ್ಥಳೀಯವಾಗಿ ಖರೀದಿಸಲು ಸೂಚನೆ ನೀಡಲಾಗಿದೆ. ಈ ಮೂಲಕ, ಔಷಧ ಕೊರತೆಯಾಗದಂತೆ ನೋಡಿಕೊಳ್ಳಲು ಸೂಚಿಸಲಾಗಿದೆ ಎಂದು ಆರೋಗ್ಯ ಸಚಿವರು ತಿಳಿಸಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ 250ಕ್ಕೂ ಹೆಚ್ಚು ಔಷಧಗಳು ಅಗತ್ಯ ಔಷಧಗಳು ಇಲ್ಲದಿರುವುದು ಲಭ್ಯ ದಾಖಲೆಗಳಿಂದ ತಿಳಿದುಬಂದಿತ್ತು. ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮದ ಔಷಧ ಸಂಗ್ರಹ ದಾಖಲೆಗಳಿಂದ ತಿಳಿದುಬಂದಿತ್ತು. ವಿಶೇಷವೆಂದರೆ, ಇದೀಗ ಆರೋಗ್ಯ ಸಚಿವರು ಔಷಧ ಕೊರತೆಯನ್ನು ನಿರಾಕರಿಸಿದ್ದಾರೆ.

# ಲಕ್ಷಾಂತರ ಮೌಲ್ಯದ ಅಡಿಕೆ ಕಳ್ಳತನ ಐವರು ಆರೋಪಿಗಳು ಅರೆಸ್ಟ್

**ಶಿವಮೊಗ್ಗ:** ಲಕ್ಷಾಂತರ ಮೌಲ್ಯದ ಅಡಿಕೆ ಕಳ್ಳತನ ಮಾಡಿದ್ದ ಐವರು ಕಳ್ಳರನ್ನು ಶಿವಮೊಗ್ಗ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಂಧಿತರನ್ನು ಆರ್.ಅನಿಲ್ ಅಲಿಯಾಸ್ ಜಾಕ್(26), ಲೋಕೇಶ್ ಅಲಿಯಾಸ್ ವಿಜಯ್(27), ಮನೋಜ್ ಅಲಿಯಾಸ್ ಮುರಗೋಡು(20), ಪಿ.ನವೀನ್ ಅಲಿಯಾಸ್ ನುಗ್ಗೆ (23) ಹಾಗೂ ಎಸ್.ಚಂದು ಅಲಿಯಾಸ್ ಸುಣ್ಣ (20) ಎಂದು ಗುರುತಿಸಲಾಗಿದೆ.



ಆರೋಪಿಗಳು ಹಾಡೋನಹಳ್ಳಿ ಗ್ರಾಮದ ಗೋಡೌನಲ್ಲಿ ಸಂಗ್ರಹಿಸಿದ್ದ ಒಣ ಅಡಿಕೆಯನ್ನು ಕಳ್ಳತನ ಮಾಡಿದ್ದರು. ಅಲ್ಲದೇ ಪ್ರತ್ಯೇಕ ಮೂರು ಕಳ್ಳತನ ಪ್ರಕರಣಗಳಲ್ಲಿ ಆರೋಪಿಗಳು 7.35 ಲಕ್ಷ ರೂ. ಮೌಲ್ಯದ ಒಣ ಅಡಿಕೆಯನ್ನು ಕಳ್ಳತನ ಮಾಡಿದ್ದರು.

ಬಂಧಿತರಿಂದ 7.35 ಲಕ್ಷ ರೂ. ಮೌಲ್ಯದ ಅಡಿಕೆ ಸೇರಿದಂತೆ 10.25 ಲಕ್ಷ ರೂ. ಮೌಲ್ಯದ ಮಾಲನ್ನು ಜಪ್ತಿ ಮಾಡಲಾಗಿದೆ. ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಸತ್ಯನಾರಾಯಣ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದೆ.

## ಈವರೆಗೂ ನನ್ನನ್ನ ಯಾರು ಸಂಪರ್ಕ ಮಾಡಿಲ್ಲ

# ಬಿಜೆಪಿಯಿಂದ 100 ಕೋಟಿ ಆಫರ್

**ಚಿಕ್ಕಮಗಳೂರು:** ಈವರೆಗೂ ನನ್ನನ್ನ ಯಾರು ಆ ರೀತಿ ಸಂಪರ್ಕ ಮಾಡಿಲ್ಲ ಎಂದು ಕಾಂಗ್ರೆಸ್ ಶಾಸಕ ರವಿ ಗಣಿಗ ಆಫರ್ ಆರೋಪಕ್ಕೆ ಚಿಕ್ಕಮಗಳೂರು ಶಾಸಕ ತಮ್ಮಯ್ಯ ಸ್ಪಷ್ಟನೆ ನೀಡಿದ್ದಾರೆ.



ರವಿ ಗಣಿಗ ಹೇಳಿಕೆಗೆ ಚಿಕ್ಕ ಮಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಶಾಸಕ ತಮ್ಮಯ್ಯ ಮಾತನಾಡಿ, ನನಗೆ ಈವರೆಗೂ ಯಾರೂ ಸಂಪರ್ಕ ಮಾಡಿಲ್ಲ. ನಾನು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಶಾಸಕನಾಗಿದ್ದೇನೆ. ಸಿದ್ದರಾಮಯ್ಯ, ಖರ್ಗೆ, ಡಿಕೆಶಿ ನೇತೃತ್ವದಲ್ಲಿ 5 ವರ್ಷ ಸರ್ಕಾರ ಆಳಲು ಜನ ನನ್ನನ್ನು ಗೆಲ್ಲಿಸಿದ್ದಾರೆ. ರವಿ ಗಣಿಗ ಏನು ಮಾತಾಡಿದ್ದಾರೆ ಅದರ ಬಗ್ಗೆ ನನಗೆ ಮಾಹಿತಿ ಇಲ್ಲ. ಇದರಲ್ಲಿ ನನ್ನ ಹೆಸರು ಏಕೆ ಬಂತು ಎಂದು ನನಗೆ ಗೊತ್ತಿಲ್ಲ. ಈವರೆಗೂ ನನ್ನನ್ನ ಯಾರು ಆ ರೀತಿ ಸಂಪರ್ಕ ಮಾಡಲಿಲ್ಲ. ನಾನು 18 ವರ್ಷ ಬಿಜೆಪಿಯಲ್ಲಿ ಇದ್ದೆ. ಬಿಜೆಪಿಯವರು ಸಿಕ್ಕಿದಾಗ ಆತ್ಮೀಯವಾಗಿ ಮಾತನಾಡುತ್ತಾರೆ ಅಷ್ಟೇ ಬಿಟ್ರೆ ಬೇರೆ ಯಾರೂ ನನ್ನನ್ನು ಸಂಪರ್ಕ ಮಾಡಲಿಲ್ಲ. ಅವರನ್ನೇ ಕೇಳಬೇಕು ಎಂದು ಹೇಳಿದರು.

**ಗಣಿಗ ರವಿ ಹೇಳಿದ್ದೇನು?:** ಸರ್ಕಾರ ಕೆಡವಲು ಬಿಜೆಪಿಯಿಂದ 50 ಕೋಟಿ ಅಲ್ಲ 100 ಕೋಟಿ ರೂ. ಆಫರ್ ನೀಡಿದ್ದಾರೆ. ಇದಕ್ಕೂ ಮುನ್ನ ಬಿಜೆಪಿಯಿಂದ ಕಾಂಗ್ರೆಸ್ ಶಾಸಕರಿಗೆ 50 ಕೋಟಿ ಆಫರ್ ನೀಡಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು. ಬಿಜೆಪಿಯನ್ನು ಇಬ್ಬರು ಕಾಂಗ್ರೆಸ್ ಶಾಸಕರು ಸಂಪರ್ಕಿಸಿದ್ದಾರೆ. ಶೀಘ್ರದಲ್ಲೇ ಆಪರೇಷನ್ ಕಮಲದ ಸಾಕ್ಷಿ ಬಿಡುಗಡೆ ಮಾಡುತ್ತೇನೆ. ಬಿಜೆಪಿ-ಜೆಡಿಎಸ್ ಸರ್ಕಾರ ಬೀಳಿಸುವ ತವಕದಲ್ಲಿದ್ದಾರೆ. ಕಾಂಗ್ರೆಸ್‌ನ 50 ಶಾಸಕರಿಗೆ ಆಮಿಷ ಒಡ್ಡಲಾಗಿದೆ. ಕಾಂಗ್ರೆಸ್ ಶಾಸಕರು 50 ಕೋಟಿ ರೂ.ಗೆ ಬಗ್ಗಿಲ್ಲ ಎಂದು ಶಾಸಕರಿಗೆ ತಲಾ 100 ಕೋಟಿ ಆಫರ್ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.

ಕಳೆದ ಸರ್ಕಾರದಲ್ಲಿ ಲೂಟಿ ಮಾಡಿರುವ ಹಣದಿಂದ ಕಾಂಗ್ರೆಸ್ ಸರ್ಕಾರ ಕೆಡವಲು ಬಿಜೆಪಿ ಪ್ಲಾನ್ ಮಾಡಿದೆ. ಕೆಲವರು ಪೆನ್‌ಡ್ರೈವ್ ತೋರಿಸಿ ರಿವಿಲ್ ಮಾಡಿಲ್ಲ, ನಾವು ತೋರಿಸಿದರೆ ಖಂಡಿತ ರಿವಿಲ್ ಮಾಡುತ್ತೇವೆ. ನಮ್ಮ ಬಳಿ ಆಪರೇಷನ್ ಕಮಲಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳಿವೆ. ಕಿತ್ತೂರು ಶಾಸಕ ಬಾಬು, ಚಿಕ್ಕಮಗಳೂರು ಶಾಸಕ ತಮ್ಮಯ್ಯರನ್ನ ಯಾಕೆ ಸಂಪರ್ಕಿಸಿದ್ದರು? ಯಾವ್ಯಾವ ಹೋಟೆಲ್, ಏರ್ ಪೋರ್ಟ್, ಗೆಸ್ಟ್ ಹೌಸ್‌ನಲ್ಲಿ ಸಂಪರ್ಕಿಸಿದ್ದಾರೆ ಎಂಬ ಮಾಹಿತಿ ಇದೆ. ಈ ಬಗ್ಗೆ ಆಡಿಯೋ, ವಿಡಿಯೋ, ಸಿಡಿ, ಪೆನ್‌ಡ್ರೈವ್ ಸೇರಿದಂತೆ ಮುಂದುವರಿದು ಐ ಕ್ಲೌಡ್ ಕೂಡ ಇದೆ ಎಂದರು.

ನಮ್ಮ ಶಾಸಕರನ್ನ ಎಲ್ಲೆಲ್ಲಿ ಸಂಪರ್ಕಿಸಿದ್ದರು? ಏನೇನು ಆಫರ್ ಮಾಡಿದ್ದರು? ಎನ್ನುವುದನ್ನು ಶೀಘ್ರದಲ್ಲೇ ಮಾಧ್ಯಮಗಳ ಮೂಲಕ ದಾಖಲೆ ಬಿಡುಗಡೆ ಮಾಡುತ್ತೇವೆ. ಸರ್ಕಾರ ಕೆಡವಲು ಪ್ರಯತ್ನಿಸದವರು ಈ ಬಗ್ಗೆ ತನಿಖೆ ಮಾಡಿಸಿ ಎನ್ನುತ್ತಾರೆ. ಪ್ರಯತ್ನದಲ್ಲಿರುವವರು ಯಾರು ತನಿಖೆ ಮಾಡಿಸಿ ಎನ್ನುವುದಿಲ್ಲ. ನಮ್ಮ ಶಾಸಕರರು ಬಿಜೆಪಿ ಆಮಿಷಗಳಿಗೆ ಬಲಿಯಾಗಲ್ಲ. ನಾವೆಲ್ಲಾ ಒಗ್ಗಟ್ಟಾಗಿದ್ದೇವೆ, ಸರ್ಕಾರವೂ ಸ್ಥಿರವಾಗಿದೆ ಎಂದು ಹೇಳಿದರು.

# ಬಿಜೆಪಿಗೆ ಕಾಂಗ್ರೆಸ್ ಶಾಸಕರನ್ನು ಕಳುಹಿಸಿದ್ದೇ ಸಿದ್ದರಾಮಯ್ಯ: ಜೋಶಿ ಬಾಂಬ್

**ಧಾರವಾಡ:** ಬಿಜೆಪಿ ಸರ್ಕಾರ ರಚನೆಗೆ ಕೆಲ ಶಾಸಕರನ್ನೇ ಸಿದ್ದರಾಮಯ್ಯನವರೇ ಕಳುಹಿಸಿದ್ದರು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆಯ ಸಚಿವ ಪ್ರಹ್ಲಾದ್ ಜೋಶಿ ಬಾಂಬ್ ಸಿಡಿಸಿದ್ದಾರೆ.



ಬಿಜೆಪಿ ಆಪರೇಷನ್ ಕಮಲ ಮಾಡಲು ಮುಂದಾಗುತ್ತಿದೆ ಎಂಬ ಕಾಂಗ್ರೆಸ್ ಆರೋಪಕ್ಕೆ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯಿಸಿದ ಅವರು, ಕಳೆದ ಬಾರಿ ಬಿಜೆಪಿ ಸರ್ಕಾರ ರಚನೆ ಮಾಡೋವಾಗ ಶಾಸಕರನ್ನು ಕಳುಹಿಸಿದ್ದೆ ಕಾಂಗ್ರೆಸ್ ಎಂದು ಸ್ಫೋಟಕ ವಿಚಾರ ತಿಳಿಸಿದರು.

ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿ ಮುಂದುವರೆಯಬಾರದು ಎನ್ನುವ ಕಾರಣಕ್ಕೆ ಸಿದ್ದರಾಮಯ್ಯನವರೇ ಕೆಲ ಶಾಸಕರನ್ನು ಕಳುಹಿಸಿದ್ದರು. ಹೀಗಾಗಿ ನಾವು ಸರ್ಕಾರ ರಚನೆ ಮಾಡಿದ್ದೆವು. ಈ ಬಾರಿ ಅವರಿಗೆ ಬಹುಮತ ಇದೆ. ನಾವು ವಿರೋಧ ಪಕ್ಷವಾಗಿ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು. ಬಿಜೆಪಿ 100 ಕೋಟಿ ನೀಡಿದ ಆಫರ್ ಬಗ್ಗೆ ದಾಖಲೆ ಇದ್ದರೆ ರವಿ ಗಾಣಿಗ ದಾಖಲೆ ಬಿಡುಗಡೆ ಮಾಡಲಿ. ವಿಷಯನ್ನು ಬೇರೆ ಕಡೆಗೆ ತಿರುಗಿಸಲು ಸುಮ್ಮನೆ ಮಾತನಾಡುತ್ತಿದ್ದಾರೆ. ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ಸಿಕ್ಕಿ ಹಾಕಿಕೊಂಡಿದ್ದಾರೆ. ಹೀಗಾಗಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

100 ಕೋಟಿ ಅಲ್ಲ, 500 ಕೋಟಿ ಬಗ್ಗೆ ಮಾತಾಡಲಿ. ದಾಖಲೆ ಇದ್ದರೆ ಕೊಡಿ ನಮ್ಮ ಸರ್ಕಾರ ಕ್ರಮ ಕೈಗೊಳ್ಳುತ್ತೆ. ಬರೀ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ದೂರಿದರು.

# ಏರ್‌ಪೋರ್ಟ್ ಮಾದರಿಯಲ್ಲಿ ಮೆಜೆಸ್ಟಿಕ್ ರೈಲ್ವೇ ನಿಲ್ದಾಣ ಅಭಿವೃದ್ಧಿ: ಸೋಮಣ್ಣ

**ಬೆಂಗಳೂರು:** ಮೆಜೆಸ್ಟಿಕ್ ರೈಲ್ವೇ ನಿಲ್ದಾಣವನ್ನು ವಿಮಾನ ನಿಲ್ದಾಣದ ಮಾದರಿಯಲ್ಲಿ ಅಭಿವೃದ್ಧಿ ಮಾಡುವುದಾಗಿ ಕೇಂದ್ರ ರೈಲ್ವೆ ರಾಜ್ಯ ಖಾತೆಯ ಸಚಿವ ಸೋಮಣ್ಣ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತಾನಾಡಿದ ಅವರು, ಮೆಜೆಸ್ಟಿಕ್ ರೈಲ್ವೇ ನಿಲ್ದಾಣವನ್ನ ಅಭಿವೃದ್ಧಿ ಪಡಿಸಲು ನಿರ್ಧಾರ ಮಾಡಲಾಗಿದೆ. ವಿಮಾನ ನಿಲ್ದಾಣ ಮಾದರಿಯಲ್ಲಿ ಮೆಜೆಸ್ಟಿಕ್ ರೈಲ್ವೇ ನಿಲ್ದಾಣ ಅಭಿವೃದ್ಧಿ ಮಾಡುತ್ತೇವೆ. ಇದಕ್ಕಾಗಿ 1500 ಕೋಟಿ ರೂ. ವೆಚ್ಚವಾಗಲಿದ್ದು ಈಗಾಗಲೇ ಸಮಗ್ರ ಯೋಜನಾ ವರದಿ (ಡಿಪಿಆರ್) ರಚಿಸಲಾಗಿದೆ ಎಂದರು.

ಯೋಜನೆಯ ಬಗ್ಗೆ ಬೋರ್ಡ್ ಮುಂದೆ ಇಟ್ಟಾಗ ಕೆಲವೊಂದು ಸ್ಪಷ್ಟನೆ ಕೇಳಿದ್ದರು. ಹೀಗಾಗಿ ಮುಂದಿನ ರೈಲ್ವೇ ಬೋರ್ಡ್ ಸಂಬಂಧ ಚರ್ಚೆ ಮಾಡುತ್ತೇವೆ. ಪ್ರಧಾನಿ ಮೋದಿ ಅವರು ಗ್ರೀನ್ ಸಿಗ್ನಲ್ ನೀಡಿದ್ದಕ್ಕೆ ಕೆಲಸ ಆಗುತ್ತಿದೆ. 3-4 ದಿನಗಳಲ್ಲಿ ಸಚಿವ ಅಶ್ವಿನಿ ವೈಷ್ಣವ್ ಅವರೊಂದಿಗೆ ಮಾತನಾಡಿ ಆದಷ್ಟು ಬೇಗ ಕೆಲಸ ಆರಂಭ ಮಾಡುತ್ತೇವೆ. ನಾನೇ ಬೆಂಗಳೂರಿಗೆ ಬಂದು ಘೋಷಣೆ ಮಾಡುತ್ತೇನೆ ಎಂದು ಹೇಳಿದರು.



## ಮೊದಲನೇ ಪುಟದಿಂದ...

## ವಿಕ್ರಂಗೌಡ ಹತ್ಯೆ

**ಯಾರು ಈ ವಿಕ್ರಂ ಗೌಡ?:** ಕರ್ನಾಟಕದ ಮೋಸ್ಟ್ ವಾಂಟೆಡ್ ನಕ್ಸಲ್ ಆಗಿರುವ ವಿಕ್ರಂ ಗೌಡನ ಮೂಲ ಉಡುಪಿ ಹೆಬ್ರಿ ತಾಲೂಕಿನ ಕೂಡ್ಲು ನಾಡ್ವಾಲು ಗ್ರಾಮ. ದಕ್ಷಿಣ ಭಾರತದಲ್ಲಿ ನಕ್ಸಲ್ ಸಂಘಟನೆಯ ನಾಯಕತ್ವ ತಮಿಳುನಾಡು ಮೂಲದ ಕುಪ್ಪುಸ್ವಾಮಿ ವಹಿಸಿಕೊಂಡಿದ್ದರೆ, ರಾಜ್ಯದಲ್ಲಿನ ಜವಾಬ್ದಾರಿ ವಿಕ್ರಂ ಗೌಡ ಹೆಗಲಿಗೆ ಬಿದ್ದಿತ್ತು.

20ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಬೇಕಾಗಿರುವ ವಿಕ್ರಂ ಗೌಡ ಕಳೆದ 20 ವರ್ಷಗಳಿಂದ ನಕ್ಸಲ್ ಚಟುವಟಿಕೆಯಲ್ಲಿ ಭಾಗಿಯಾಗಿದ್ದಾನೆ. ಕಾರ್ಮಿಕ ಸಂಘಟನೆಯಿಂದ ಬಂದಿದ್ದ ವಿಕ್ರಂ ಗೌಡ ಮೂರು ಬಾರಿ ಕರ್ನಾಟಕ ಪೊಲೀಸರ ಕೈಯಿಂದ ಪರಾರಿಯಾಗಿದ್ದ. 2016ರಲ್ಲಿ ಕೇರಳ ಪೊಲೀಸರಿಗೂ ಚಳ್ಳೆಹಣ್ಣು ತಿನ್ನಿಸಿದ್ದ.

ನಕ್ಸಲರನ್ನು ಮುಖ್ಯವಾಹಿನಿಗೆ ಕರೆತರುವ ಸರ್ಕಾರದ ಯೋಜನೆಗೆ ವಿಕ್ರಂ ಗೌಡ ವಿರೋಧ ಹೊಂದಿದ್ದ. ಅಷ್ಟೇ ಅಲ್ಲದೇ ಈ ಯೋಜನೆಯಲ್ಲಿ ಮುಖ್ಯ ಪಾತ್ರವನ್ನು ವಹಿಸಿದ್ದಕ್ಕೆ ಗೌರಿ ಲಂಕೇಶ್ ವಿರುದ್ಧ ಚಿಕ್ಕಮಗಳೂರು ಜಿಲ್ಲೆಯಲ್ಲಿ ಭಿತ್ತಿಪತ್ರಗಳನ್ನೂ ಕೂಡ ಹಂಚಿದ್ದ.

## ದೃಢಪಡಿಸಿದ ಪರಮೇಶ್ವರ್

ಕಳೆದ ಒಂದು ವಾರದಿಂದ ಕೂಂಬಿಂಗ್ ನಡೆಯುತ್ತಿತ್ತು. ಆಗ ಇದ್ದಕಿದ್ದಂತೆ ವಿಕ್ರಂ ಗೌಡ ಬರುವ ಮಾಹಿತಿ ಸಿಕ್ಕಿತ್ತು. ಆ ಸಂದರ್ಭದಲ್ಲಿ ಪೊಲೀಸರಿಗೆ ವಿಕ್ರಂ ಗೌಡನನ್ನು ಎನ್‌ಕೌಂಟರ್ ಮಾಡುವುದು ಅನಿವಾರ್ಯವಾಯಿತು ಎಂದು ತಿಳಿಸಿದರು.

## ಲೋಕಾಯುಕ್ತ ನೋಟಿಸ್

ಏಕೆಂದರೆ ಮುಡಾ 50:50 ಅನುಪಾತದಲ್ಲಿ ನಿವೇಶನ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಮುಡಾ ಮಾಜಿ ಆಯುಕ್ತ ನಟೇಶ್ ಅವರಿಗೆ ಲೋಕಯುಕ್ತ ನೋಟಿಸ್ ನೀಡಿದೆ.

ಮುಡಾ ನಿವೇಶನಗಳನ್ನು 50:50 ಅನುಪಾತದಲ್ಲಿ ಕಾನೂನು ಬಾಹಿರ ಸೈಟು ಹಂಚಿಕೆ ಮಾಡಿರುವ ಆರೋಪ ನಟೇಶ್ ಅವರ ಮೇಲಿದೆ. ಖುದ್ದು ಲೋಕಾಯುಕ್ತಕ್ಕೆ ವಿಚಾರಣೆಗೆ ಬರುವಂತೆ ಲೋಕ ಎಸ್ಪಿ ಉದೇಶ್ ಅವರು ನೋಟಿಸ್ ಜಾರಿ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ವಿಚಾರಣೆಗೆ ಹಾಜರಾಗಲಿದ್ದಾರೆ.

ಈಗಾಗಲೇ ಎ1 ಎ2 ಎ3 ಎ4 ಆರೋಪಿಗಳಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಿದ್ದ ಲೋಕಾಯುಕ್ತ, ಇಂದು ನಟೇಶ್ ವಿಚಾರಣೆ ನಡೆಸಲಿದೆ. ಇಂದು ವಿಚಾರಣೆಗೆ ಹಾಜರಾಗಲಿದ್ದಾರೆ.

ಮುಡಾ ಮಾಜಿ ಆಯುಕ್ತ ಡಿಬಿ ನಟೇಶ್ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯ ಗೃಹ ಇಲಾಖೆ ಅನುಮತಿ ನೀಡಿದೆ. ರಾಜ್ಯ ಸರ್ಕಾರ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಬೆನ್ನಲ್ಲೇ ಲೋಕಾಯುಕ್ತ ಪೊಲೀಸರು ಆರೋಪಿ ನಟೇಶ್ ಗೆ ನೋಟಿಸ್ ಜಾರಿ ಮಾಡಿದ್ದು, ಇಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ.

ಸರ್ಕಾರಿ ಅಧಿಕಾರಿ ವಿಚಾರಣೆ ನಡೆಸಲು ಸರ್ಕಾರದ ಅನುಮತಿ ಕಡ್ಡಾಯವಾಗಿದೆ. ಹೀಗಾಗಿ 17(ಎ) ಅಡಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಒಂದು ತಿಂಗಳ ಹಿಂದೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿದ್ದರು. ಇದೀಗ ಅನುಮತಿ ನೀಡಿದ್ದು, ನಟೇಶ್ ಅವರಿಗೆ ಮುಂದಿನ ವಾರ ವಿಚಾರಣೆಗೆ ಹಾಜರಾಗುವಂತೆ ಲೋಕಾಯುಕ್ತ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ.

ಈ ಹಿಂದೆ ಮುಡಾ ಆಯುಕ್ತರಾಗಿದ್ದ ನಟೇಶ್ ಅವರು, ಸೈಟ್ ಮರು ಹಂಚಿಕೆಯಲ್ಲಿ ಭ್ರಷ್ಟಾಚಾರ ಎಸಗಿದ್ದಾರೆ ಎಂಬ ಆರೋಪ ಎದುರಿಸುತ್ತಿದ್ದಾರೆ. ನಟೇಶ್ ಅವರು ಈಗಾಗಲೇ ಇಡಿ ಅಧಿಕಾರಿಗಳ ಮುಂದೆ ಮೂರು ಬಾರಿ ವಿಚಾರಣೆಗೆ ಹಾಜರಾಗಿದ್ದಾರೆ.

ಇನ್ನು ಇತ್ತೀಚೆಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಮಲ್ಲೇಶ್ವರಂನ 10ನೇ ಕ್ರಾಸ್ ನಲ್ಲಿರುವ ನಟೇಶ್ ಮನೆ ಮೇಲೆ ಇಡಿ ಅಧಿಕಾರಿಗಳು ದಾಳಿ ಮಾಡಿದ್ದರು. ಸತತ 33 ಗಂಟೆಗಳ ಕಾಲ ದಾಖಲೆ ಪರಿಶೀಲನೆ ಮಾಡಿ 4 ಬ್ಯಾಗ್ ಕೊಂಡೊಯ್ದಿದ್ದರು. ಬಳಿಕ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದರು.

## ತಿರುಪತಿ ಬೋರ್ಡ್

ಈ ನಿರ್ಧಾರವು ಆಂಧ್ರಪ್ರದೇಶದ ದತ್ತಿ ಕಾಯ್ದೆಮತ್ತು ಟಿಟಿಡಿ ಕಾಯ್ದೆಯೊಂದಿಗೆ ಹೊಂದಿಕೆಯಾಗುತ್ತದೆ ಎಂದು ಹೇಳಿರುವ ಟಿಟಿಡಿ ವಿವಿಧ ನೌಕರರ ಸಂಘಗಳಿಂದ ಬೆಂಬಲವನ್ನು ಪಡೆದುಕೊಂಡಿದೆ. ಅಕ್ಟೋಬರ್ 31 ರಂದು ಟಿಟಿಡಿ ಅಧ್ಯಕ್ಷರಾಗಿ ನೇಮಕಗೊಂಡ ನಂತರ ನಾಯ್ಡು ಅವರು ದೇವಸ್ಥಾನವನ್ನು ಹಿಂದೂಗಳು ಮಾತ್ರ ನಡೆಸಬೇಕು ಎಂದು ತಮ್ಮ ನಿಲುವನ್ನು ವ್ಯಕ್ತಪಡಿಸಿದ್ದರು.

ತಿರುಮಲದಲ್ಲಿ ಕೆಲಸ ಮಾಡುತ್ತಿರುವ ಹಿಂದೂಯೇತರರ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯುತ್ತೇವೆ. ಟಿಟಿಡಿ ಹಿಂದೂ ಧಾರ್ಮಿಕ ಸಂಸ್ಥೆಯಾಗಿದ್ದು, ದೇವಸ್ಥಾನದಲ್ಲಿ ಕೆಲಸ ಮಾಡಲು ಹಿಂದೂಯೇತರರನ್ನು ನೇಮಿಸಿಕೊಳ್ಳಬಾರದು ಎಂದು ಮಂಡಳಿ ಅಭಿಪ್ರಾಯಪಟ್ಟಿದೆ. ಅವರನ್ನು ಬೇರೆ ಬೇರೆ ಇಲಾಖೆಗಳಲ್ಲಿ ಸೇರಿಸಿಕೊಳ್ಳಲು ಅಥವಾ ಅವರಿಗೆ ಸ್ವಯಂ ನಿವೃತ್ತಿ ಯೋಜನೆ ನೀಡಲು ನಾವು ಸರ್ಕಾರಕ್ಕೆ ಪತ್ರ ಬರೆಯುತ್ತೇವೆ ಎಂದು ನಾಯ್ಡು ತಿಳಿಸಿದರು.

ಹಲವು ವರ್ಷಗಳಿಂದ, ದೇವಸ್ಥಾನ ಮಂಡಳಿ ಮತ್ತು ಅದರ ಅಂಗ ಸಂಸ್ಥೆಗಳಲ್ಲಿ ಹಿಂದೂಗಳಿಗೆ ಮಾತ್ರ ಉದ್ಯೋಗ ನೀಡಬೇಕು ಎಂದು ಟಿಟಿಡಿ ಕಾಯ್ದೆಯನ್ನು ಮೂರು ಬಾರಿ ತಿದ್ದುಪಡಿ ಮಾಡಲಾಗಿದೆ. 1989 ರಲ್ಲಿ ಹೊರಡಿಸಲಾದ ಸರ್ಕಾರಿ ಆದೇಶವು ಟಿಟಿಡಿ-ಆಡಳಿತದ ಹುದ್ದೆಗಳಿಗೆ ನೇಮಕಾತಿಗಳನ್ನು ಹಿಂದೂಗಳಿಗೆ ಸೀಮಿತಗೊಳಿಸಬೇಕೆಂದು ಆದೇಶಿಸಿತ್ತು. ಈ ನಿಬಂಧನೆಗಳ ಹೊರತಾಗಿಯೂ, ಹಿಂದೂಯೇತರರು ದೇವಸ್ಥಾನದ ಒಳಗಡೆ ಕೆಲಸ ಮಾಡುವುದನ್ನು ಮುಂದುವರೆಸಿದ್ದಾರೆ ಎಂದು ಮೂಲಗಳು ಹೇಳಿವೆ.

## 'ಡ್ರೈ' ಡೇ!

ಕರ್ನಾಟಕದ ಅಬಕಾರಿ ಇಲಾಖೆಯಲ್ಲಿ ವ್ಯಾಪಕ ಭ್ರಷ್ಟಾಚಾರದ ಜತೆಗೆ ವರ್ಗಾವಣೆ ಮತ್ತು ಪ್ರಮೋಷನ್‌ಗೆ ಲಂಚದ ವ್ಯವಹಾರ ನಡೆಯುತ್ತಿದೆ ಎಂದು ಆರೋಪಿಸಲಾಗಿದ್ದು, ಇದರಿಂದಾಗಿ ನಕಲಿ ಮದ್ಯದ ಪ್ರಮಾಣ ಹೆಚ್ಚಾಗಿದೆ ಎನ್ನುವ ಆಪಾದನೆಗಳೂ ಹೇಳಿ ಬಂದಿವೆ.

ಅಬಕಾರಿ ಇಲಾಖೆಯಲ್ಲಿ ವರ್ಗಾವಣೆ, ಪ್ರಮೋಷನ್‌ಗೆ ಸನ್ನದುದಾರರಿಂದ ಮನಸೋ ಇಚ್ಛೆ ಕೋಟಿ ಕೋಟಿ ರೂಪಾಯಿ ಲಂಚ ಕೇಳಲಾಗುತ್ತಿದೆ. ಅಧಿಕಾರಿಗಳ ಲಂಚಾವತಾರದಿಂದ ಅಂತಾರಾಜ್ಯದ ನಕಲಿ ಮದ್ಯ ಹೆಚ್ಚಳವಾಗಿದೆ. ಹೀಗಾಗಿ ಅಬಕಾರಿ ಅಧಿಕಾರಿಗಳ ವಿರುದ್ಧ ಮದ್ಯದಂಗಡಿ ಮಾಲೀಕರು ಸಮರಕ್ಕೆ ಮುಂದಾಗಿದ್ದಾರೆ.

## ನನ್ನ ಹಕ್ಕು

ಸಚಿವ ಸ್ಥಾನ ನನ್ನ ಹಕ್ಕು ಅದು ಎಂದು ಅವರು ಪ್ರತಿಪಾದಿಸಿದರು.

ನನಗೆ ಯೋಗ್ಯತೆ ಇಲ್ಲವಾ, ಅರ್ಹತೆ ಇಲ್ಲವಾ, ಸೀನಿಯಾರಿಟಿ ಇಲ್ಲವಾ? ವಿದ್ಯಾರ್ಥಿ ದೆಸೆಯಿಂದ ಕಾಂಗ್ರೆಸ್ ಪಕ್ಷ ಕಟ್ಟಿದವನು ನಾನು. ನನ್ನ ಅರ್ಹತೆ ಬಗ್ಗೆ ಪ್ರಶ್ನೆ ಮಾಡಲು ಇವತ್ತಿನ ಮಟ್ಟಿಗೆ ಕರ್ನಾಟಕ ಕಾಂಗ್ರೆಸ್‌ನಲ್ಲಿ ಯಾರಿಗೂ ಅರ್ಹತೆ ಇಲ್ಲ ಎಂದರು.

## ಹಲವರಿಗೆ ಗಾಯ

ಪೊಲೀಸರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ಕೂಡ ಘಟನಾ ಸ್ಥಳಕ್ಕೆ ಆಗಮಿಸಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ.

ಶಬರಿಮಲೆ ಯಾತ್ರಾರ್ಥಿಗಳನ್ನು ಬೇರೆ ರಾಜ್ಯಗಳಿಂದ ಕರೆದೊಯ್ಯುವ ಬಸ್‌ಗಳು ಮತ್ತು ಮಿನಿ ಬಸ್‌ಗಳು ತಾಮರಸ್ಸೇರಿ ಘಾಟ್ ಮೂಲಕ ವೇಗವಾಗಿ ಚಲಿಸುವ ಬಗ್ಗೆ ದೂರುಗಳಿವೆ. ಶಬರಿಮಲೆಗೆ ಗರಿಷ್ಠ ಟ್ರಿಪ್‌ಗಳನ್ನು ಮಾಡಲು, ಬಸ್‌ಗಳು, ಮಿನಿಬಸ್‌ಗಳನ್ನು ಮಕ್ಕಳಿದ್ದರೂ ಕೂಡ ಹೆಚ್ಚಿನ ವೇಗದಲ್ಲಿ ಓಡಿಸಲಾಗುತ್ತದೆ.

ಬೇರೆ ರಾಜ್ಯಗಳ ಚಾಲಕರು ಕೆಲವೊಮ್ಮೆ ಘಾಟ್ ಪ್ರದೇಶದ ಸಂಚಾರ ನಿಯಮಗಳನ್ನು ನಿರ್ಲಕ್ಷಿಸುತ್ತಾರೆ. ಬಸ್ಸಿನಲ್ಲಿ 53 ಮಂದಿ ಪ್ರಯಾಣಿಕರಿದ್ದರು. ಗಾಯಾಳುಗಳನ್ನು ವಿವಿಧ ವಾಹನಗಳಲ್ಲಿ ಮಾನಂತವಾಡಿ ವೈದ್ಯಕೀಯ ಕಾಲೇಜಿಗೆ ರವಾನಿಸಲಾಗಿದೆ. ಇಬ್ಬರು ಮಕ್ಕಳು ಸೇರಿದಂತೆ 25 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಇತರ ಪ್ರಯಾಣಿಕರಿಗೂ ಸಣ್ಣಪುಟ್ಟ ಗಾಯಗಳಾಗಿವೆ.

ಜಾಗೃತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು ಸವಾಲಿನ ಸಂಗತಿಯಾಗಿರುವುದರಿಂದ, ಇತರ ರಾಜ್ಯಗಳ ವಾಹನಗಳು ಘಾಟ್ ಮೂಲಕ ಹಾದು ಹೋಗುವಾಗ ಕನಿಷ್ಠ ನಿಯಮಗಳನ್ನು ಪಾಲಿಸುವ ಬಗ್ಗೆ ಬೇಡಿಕೆ ಕೇಳಿಬರುತ್ತಿದೆ.

## ಪ್ರಯಾಣಿಕರ ಪರದಾಟ!

ಟ್ಯಾಕ್ಸಿ ಬುಕ್ ಮಾಡೋಣ ಅಂದರೆ, ಬುಕ್ಕಿಂಗ್ ಸಹ ಆಗುತ್ತಿರಲಿಲ್ಲ. ಟ್ಯಾಕ್ಸಿ ನಂಬಿಕೊಂಡು ಬಂದಾಗ ಈ ರೀತಿಯಾದರೆ ಏನು ಮಾಡುವುದು ಎಂದು ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದರು.

**ವಿಮಾನ ನಿಲ್ದಾಣದಲ್ಲಿ ಟ್ಯಾಕ್ಸಿಗಳ ಕೊರತೆಗೆ ಕಾರಣವೇನು?:** ವಿಮಾನ ನಿಲ್ದಾಣದಲ್ಲಿ ಇದ್ದಕ್ಕಿದ್ದಂತೆ ಟ್ಯಾಕ್ಸಿಗಳ ಕೊರತೆ ಶುರುವಾಗಲು ಕಾರಣ ಚಾಲಕರು ಮತ್ತು ಆಪ್ ಆಧಾರಿತ ಕೆಲ ಸಂಸ್ಥೆಗಳ ನಡುವಿನ ಶೀತಲ ಸಮರ ಎನ್ನಲಾಗಿದೆ. ವಿಮಾನ ನಿಲ್ದಾಣಕ್ಕೆ ಬರುವ ಟ್ಯಾಕ್ಸಿಗಳಿಗೆ ಕೆಲ ಆಪ್ ಆಧಾರಿತ ಸಂಸ್ಥೆಗಳು ಪ್ರಯಾಣಿಕರಿಂದ ಟ್ರಿಪ್‌ಗೆ ಪಡೆಯುವ ಹಣದಲ್ಲಿ ಸಿಂಹಪಾಲನ್ನು ತಾವೇ ಪಡೆದು ಅಲ್ಪ ಸ್ವಲ್ಪ ಹಣವನ್ನು ಚಾಲಕರಿಗೆ ನೀಡುತ್ತಿವೆಯಂತೆ. ಇದರಿಂದಾಗಿ ನಿರ್ವಹಣೆ ಕಷ್ಟವಾಗುತ್ತಿವೆ ಎಂದು ಶೇ.30 ರಷ್ಟು ಕ್ಯಾಬ್‌ಗಳು ವಾರಾಂತ್ಯದಲ್ಲಿ ವಿಮಾನ ನಿಲ್ದಾಣಕ್ಕೆ ಬರುವುದನ್ನೇ ನಿಲ್ಲಿಸಿವೆ.

ವಾರಾಂತ್ಯದಲ್ಲಿ ನಗರದ ಒಳಗೆಯೇ ಬಾಡಿಗೆಗಳು ಹೆಚ್ಚಾಗಿ ಸಿಗ್ತಿದ್ದು, ಕಿಲೋ ಮೀಟರ್ ಲೆಕ್ಕದಲ್ಲಿ ಹೆಚ್ಚು ಬೆಲೆ ಸಿಗುತ್ತದೆ. ಏರ್‌ಪೋರ್ಟ್‌ನಿಂದ ಕಡಿಮೆ ಬೆಲೆ ದೊರೆಯುತ್ತದೆ ಎಂದು ಅಂತ ಟ್ಯಾಕ್ಸಿ ಚಾಲಕರು ಆಪ್ ಆಧಾರಿತ ಸಂಸ್ಥೆಗಳ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ.

ಒಟ್ಟಾರೆಯಾಗಿ, ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ದಿನದಿಂದ ದಿನಕ್ಕೆ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುತ್ತಿದ್ದರೂ ಅದಕ್ಕೆ ಸಮನಾಗಿ ಕ್ಯಾಬ್‌ಗಳು ದೊರೆಯದೇ ಇರುವುದು ವಾರಾಂತ್ಯದಲ್ಲಿ ಪ್ರಯಾಣಿಕರು ಪರದಾಡುವಂತೆ ಮಾಡಿದೆ.

## ದಾಖಲು

ಆದರೆ, ಈ ಮನೆಯಲ್ಲಿ ತನಗೂ ಭಾಗ ಬೇಕು ಎಂದು ಸಿಪಿ ಯೋಗೇಶ್ವರ ನ್ಯಾಯಾಲಯದಲ್ಲಿ ಅರ್ಜಿ ಹಾಕಿದ್ದಾರೆ. ಇಷ್ಟೇ ಅಲ್ಲದೇ, ''ನಾನು ನನ್ನ ಅಕ್ಕನಿಗೆ ಮನೆ ಗಿಫ್ಟ್ ನೀಡಿಲ್ಲ. ಮನೆಯಲ್ಲಿ ನನಗೂ ಭಾಗ ಬೇಕು'' ಅಂತ ಶ್ರವಣ್ ಅವರ ಹೆಸರಿನಲ್ಲಿ ಸಿಪಿ ಯೋಗೇಶ್ವರ ಕೋರ್ಟ್ ನಲ್ಲಿ ಅರ್ಜಿ ಹಾಕಿದ್ದಾರೆ. ಈ ಅರ್ಜಿಯಲ್ಲಿ ಶ್ರವಣ್ ಅವರ ಸಹಿಯನ್ನು ಸಿಪಿ ಯೋಗೇಶ್ವರ್ ಮಾಡಿದ್ದಾರೆ. ಹೀಗೆ, ಸಿಪಿ ಯೋಗೇಶ್ವರ್ ಪುತ್ರ ಶ್ರವಣ ಅವರ ಸಹಿ ನಕಲು ಮಾಡಿದ್ದಾರೆ.

''ಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಿರುವ ಬಗ್ಗೆ ನನಗೆ ಗೊತ್ತಿಲ್ಲ. ಮನೆಯಲ್ಲಿ ಭಾಗ ಬೇಕು ಅಂತ ನಾನು ಕೇಳಿಲ್ಲ. ಈ ಬಗ್ಗೆ ನನಗೆ ಏನೂ ಗೊತ್ತಿಲ್ಲ'' ಎಂದು ಶ್ರವಣ್ ಹೇಳಿದ್ದಾರೆ.

**ಸಹಿ ಮಾಡಿದ್ದು ಒಪ್ಪಿಕೊಂಡ ಸಿಪಿ ಯೋಗೇಶ್ವರ್ :** ಈ ವಿಚಾರವಾಗಿ ಶ್ರವಣ ತಂದೆ ಸಿಪಿ ಯೋಗೇಶ್ವರ್ ಅವರ ಜೊತೆ ದೂರವಾಣಿಯಲ್ಲಿ ಮಾತನಾಡಿದ್ದಾರೆ. ಇಬ್ಬರ ಸಂಭಾಷಣೆ ರೆಕಾರ್ಡ್ ಆಗಿದೆ. ಅದರಲ್ಲಿ, ಸಿಪಿ ಯೋಗೇಶ್ವರ್ ಸಹಿ ನಕಲು ಮಾಡಿದ್ದಾನ್ನು ಒಪ್ಪಿಕೊಂಡಿದ್ದಾರೆ. ಸಿಪಿ ಯೋಗೇಶ್ವರ ಮತ್ತು ಶ್ರವಣ್ ಮಾತನಾಡಿರುವ ಆಡಿಯೋ ಸಂಭಾಷಣೆ ವೈರಲ್ ಆಗಿದೆ.

**ದೂರವಾಣಿ ಸಂಭಾಷಣೆಯಲ್ಲಿ ಏನಿದೆ:** ಶ್ರವಣ್ : ಯಾರೋ ವಕೀಲರು ಕರೆ ಮಾಡಿ, ಆಸ್ತಿ ಸಂಬಂಧಿಸಿದ ದಾಖಲೆ ಕೇಳುತ್ತಿದ್ದಾರೆ. ಸಹಿ ಹೊಂದಾಣಿಕೆಯಾಗುತ್ತಿಲ್ಲ ಎನ್ನುತ್ತಿದ್ದಾರೆ. ನಾನು ಯಾವುದೇ ಆಸ್ತಿ ವಕಾಲತ್ ಗೆ ಸಹಿ ಮಾಡಿಲ್ಲ. ಆದ್ರೆ, ಈ ಮಾಡಿದ್ದು ಯಾರು

ಸಿಪಿವೈ: ಹಿಂದೆ ನೀನೆ ಮಾಡಿದ್ದಿಯಲ್ಲ

ಶ್ರವಣ್ : ಇಲ್ಲ ನಾನು ಮಾಡಿಲ್ಲ

ಸಿಪಿವೈ: ಇರಲಿ, ಅವರು ಏನ್ ಹೇಳುತ್ತಾರೆ ಅದನ್ನು ಮಾಡು

ಶ್ರವಣ್ : ಆದರೆ ನಾನು ಸಹಿ ಮಾಡಿಲ್ಲ, ಯಾರು ಮಾಡಿದ್ದು

ಆಸ್ತಿ ಮಾರಾಟವಾಗಬಾರದು ಅಂತ ನಾನೇ ಮಾಡಿದೆ ಎಂದು ಒಪ್ಪಿಕೊಳ್ಳುತ್ತಾರೆ. ಇದೇ ವಿಚಾರಕ್ಕೆ ಶ್ರವಣ್ ನ್ಯಾಯಾಲಯದಲ್ಲಿ ದಾವೆ ಹೂಡಿದ್ದಾರೆ. ಒಂದು ವೇಳೆ, ಬುಧವಾರ ನಡೆಯುವ ವಿಚಾರಣೆಯಲ್ಲಿ ಸಿಪಿ ಯೋಗೇಶ್ವರ ವಿರುದ್ಧದ ಆರೋಪ ಸಾಬೀತಾದರೆ ಬಂಧನವಾಗುವ ಸಾಧ್ಯತೆ ಇದೆ. ಫಲಿತಾಂಶಕ್ಕೂ ಮುನ್ನವೇ ಸಿಪಿ ಯೋಗೇಶ್ವರ ಜೈಲಿಗೆ ಹೋಗುವ ಸಾಧ್ಯತೆ ಇದೆ.

# ಸರ್ಕಾರಿ ಆಸ್ಪತ್ರೆಗಳ ರೋಗಿಗಳಿಗೆ ದರ ಏರಿಕೆ ಬಿಸಿ

**ಬೆಂಗಳೂರು:** ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ದರ ಏರಿಕೆ ಬಿಸಿ ತಟ್ಟಿದೆ. ಉಚಿತ ಚಿಕಿತ್ಸೆ ಕೊಡುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಸೇವೆಗಳ ದರ ಹೆಚ್ಚಳ ಆಗಿದೆ.

ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಗಳಲ್ಲಿ ದರ ಏರಿಕೆ ಆಗಿದೆ. ಸರ್ಕಾರಿ ಸೇವೆಗಳ ದರ 10 ರಿಂದ 20% ದರ ಏರಿಕೆ ಆಗಿದೆ. ವಿಕ್ಟೋರಿಯಾ ಆಸ್ಪತ್ರೆಯಲ್ಲಿ ದರ ಏರಿಕೆ ಆಗಿರುವ ಬಗ್ಗೆ ನೋಟಿಸ್ ಹಾಕಿದ್ದಾರೆ. ಆಸ್ಪತ್ರೆಯ ಹೊರ ರೋಗಿ ವಿಭಾಗಗಳ ಮುಂದೆ ದರ ಏರಿಕೆ ಆಗಿದೆ ಎಂದು ನೋಟಿಸ್ ಅಂಟಿಸಲಾಗಿದೆ. ರಾಜ್ಯದ ಅತಿದೊಡ್ಡ ಆಸ್ಪತ್ರೆ ವಿಕ್ಟೋರಿಯಾದಲ್ಲಿ ದರ ಏರಿಕೆ ಆಗಿರೋದನ್ನು ಕಂಡು ರೋಗಿಗಳು ಆಕ್ರೋಶ ಹೊರಹಾಕುತ್ತಿದ್ದಾರೆ.



### ಯಾವ ಸೇವೆಯ ದರ ಎಷ್ಟು ಹೆಚ್ಚಳ?

- **ಓಪಿಡಿ ರಿಜಿಸ್ಟ್ರೇಷನ್ ಬುಕ್**
  ಹಿಂದಿನ ದರ - 10 ರೂ.
  ಈಗಿನ ದರ - 20 ರೂ.
  ಹೆಚ್ಚಳ - 10 ರೂ.
- **ಒಳರೋಗಿ ಅಡ್ಮಿಷನ್**
  ಹಿಂದಿನ ದರ - 25 ರೂ.
  ಈಗಿನ ದರ - 50 ರೂ.
  ಹೆಚ್ಚಳ - 25 ರೂ.
- **ರಕ್ತ ಪರೀಕ್ಷೆ**
  ಹಿಂದಿನ ದರ - 70 ರೂ.
  ಈಗಿನ ದರ - 120 ರೂ.
  ಹೆಚ್ಚಳ - 50 ರೂ.
- **ವಾರ್ಡ್ ಚಾರ್ಜಸ್**
  ಹಿಂದಿನ ದರ - 25 ರೂ.
  ಈಗಿನ ದರ - 50 ರೂ.
  ಹೆಚ್ಚಳ - 25 ರೂ.
- **ಆಸ್ಪತ್ರೆ ತ್ಯಾಜ್ಯ ನಿರ್ವಹಣೆ ದರ**
  ಹಿಂದಿನ ದರ - 10 ರೂ.
  ಈಗಿನ ದರ - 50 ರೂ.
  ಹೆಚ್ಚಳ - 40 ರೂ.

# ಗ್ರಾಮಸ್ಥರ ಮುಂದೆಯೇ ಮಹಿಳಾ ಪೊಲೀಸ್ ಅಧಿಕಾರಿಗೆ ಕೆನ್ನೆಗೆ ಬಾರಿಸಿದ ಯುವಕ

**ಮಧ್ಯಪ್ರದೇಶ:** ಯುವಕನೊಬ್ಬ ಮಹಿಳಾ ಪೊಲೀಸ್ ಅಧಿಕಾರಿಗೆ ಕಪಾಳಮೋಕ್ಷ ಮಾಡಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಮಧ್ಯಪ್ರದೇಶದ ಟಿಕಮ್‌ಗಢ್ ಜಿಲ್ಲೆಯಲ್ಲಿ ಸೋಮವಾರ ಈ ಘಟನೆ ನಡೆದಿದ್ದು, ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಸಂಚಲನ ಮೂಡಿಸಿದೆ.

ಮಾಹಿತಿ ಪ್ರಕಾರ, ಬಡಗಾಂವ್ ಧಸನ್ ಪೊಲೀಸ್ ಠಾಣಾ ವ್ಯಾಪ್ತಿಯ ದರಗ್ವಾನ್ ಗ್ರಾಮದಲ್ಲಿ ಭಾನುವಾರ ರಾತ್ರಿ ರಸ್ತೆ ಅಪಘಾತದಲ್ಲಿ ಅಪರಿಚಿತ ವಾಹನ ಡಿಕ್ಕಿ ಹೊಡೆದು 50 ವರ್ಷದ ಘುರ್ಕಾ ಲೋಧಿ ಎಂಬ ರೈತ ಸಾವನ್ನಪ್ಪಿದ್ದರು. ಸೋಮವಾರ ಬೆಳಗ್ಗೆ ಅವರ ಕುಟುಂಬಕ್ಕೆ ಈ ಸುದ್ದಿ ತಿಳಿದಿದ್ದು ಸ್ಥಳೀಯರಲ್ಲಿ ಆಕ್ರೋಶ ವ್ಯಕ್ತವಾಗಿದೆ. ಪ್ರತಿಭಟನೆಯಲ್ಲಿ ಗ್ರಾಮಸ್ಥರು ಖರ್ಗಾಪುರ-ಬಡಗಾಂವ ರಸ್ತೆ ತಡೆ ನಡೆಸಿ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿದರು.



ಮಾಹಿತಿ ಪಡೆದ ಬಡಗಾಂವ್ ಪೊಲೀಸ್ ಠಾಣೆ ಪ್ರಭಾರಿ ಅನು ಮೇಘಾ ಗುಪ್ತಾ ದುಬೆ ಘಟನಾ ಸ್ಥಳಕ್ಕೆ ಆಗಮಿಸಿ ರಸ್ತೆ ತಡೆ ತೆರವುಗೊಳಿಸಿದ್ದರು. ಆದರೆ, ಪರಿಸ್ಥಿತಿ ವಿಕೋಪಕ್ಕೆ ಹೋಗಿದ್ದು, ವಾಗ್ವಾದದ ನಡುವೆ ಮಹಿಳಾ ಪೊಲೀಸ್? ಅಧಿಕಾರಿ ಯುವಕನಿಗೆ ಕಪಾಳಮೋಕ್ಷ ಮಾಡಿದ್ದಾರೆ. ಇದರಿಂದ ಕೋಪಗೊಂಡ ಯುವಕ ಪೊಲೀಸ್? ಎಂದೂ ಕೂಡ ನೋಡದೇ ತಿರುಗಿಸಿ ಕೆನ್ನೆಗೆ ಹೊಡೆದಿದ್ದಾನೆ. ಈ ಘಟನೆಯಿಂದ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದು, ಪೊಲೀಸರು ಮಧ್ಯ ಪ್ರವೇಶಿಸಿ ಘಟನಾ ಸ್ಥಳವನ್ನು ನಿಯಂತ್ರಿಸಿದ್ದಾರೆ. ಪೊಲೀಸರ ತಡವಾದ ಸ್ಪಂದನೆಯಿಂದ ಗಾಯಗೊಂಡ ರೈತನಿಗೆ ಸಕಾಲದಲ್ಲಿ ವೈದ್ಯಕೀಯ ನೆರವು ದೊರೆಯದೇ ಆತ ಪ್ರಾಣ ಕಳೆದುಕೊಂಡಿದ್ದಾನೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಸದ್ಯ ವಿಡಿಯೋ ವೈರಲ್? ಆಗುತ್ತಿದ್ದು,ವೈರಲ್ ಆಗಿರುವ ವಿಡಿಯೋದಲ್ಲಿ ಅಧಿಕಾರಿ ಮತ್ತು ಯುವಕರ ನಡುವಿನ ವಾಗ್ವಾದ ಮತ್ತು ಕಪಾಳ ಮೋಕ್ಷವನ್ನು ಸ್ಪಷ್ಟವಾಗಿ ಸೆರೆಹಿಡಿಯಲಾಗಿದೆ.

# ಫಸಲ್ ಬಿಮಾ ಯೋಜನೆಯ ನೋಂದಣಿಗೆ ಮನವಿ

**ಚಿಕ್ಕಬಳ್ಳಾಪುರ:** 2024-25 ನೇ ಸಾಲಿನ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ತಾಲ್ಲೂಕುವಾರು ಬೆಳೆಗಳನ್ನು ವಿಮೆಗೆ ಹೋಬಳಿ ಮಟ್ಟದಲ್ಲಿ ಗುರ್ತಿಸಿ ಅನುಷ್ಠಾನಗೊಳಿಸಲಾಗಿದೆ.

ಇದು ಇಳುವರಿ ಆಧಾರಿತ ಬೆಳೆ ವಿಮೆಯಾಗಿರುತ್ತದೆ. ಹಿಂಗಾರು ಹಂಗಾಮಿಗೆ ಮುಸುಕಿನ ಜೋಳ (ನೀರಾವರಿ), ಹುರಳಿ (ಮಳೆ ಆಶ್ರಿತ) ಮತ್ತು ಆಲೂಗಡ್ಡೆ (ನೀರಾವರಿ) ಬೆಳೆಗಳನ್ನು ಅಧಿಸೂಚಿಸಿದ್ದು ಸದರಿ ಬೆಳೆಗಳನ್ನು ಬೆಳೆಯುವ ರೈತರು ಈ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದಾಗಿರುತ್ತದೆ. ರೈತರು ತಮ್ಮ ಗ್ರಾಮದ ಸೇವಾ ವ್ಯಾಪ್ತಿಯ ರಾಷ್ಟ್ರೀಕೃತ ಬ್ಯಾಂಕ್ ಗಳಲ್ಲಿ, ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ, ಗ್ರಾಮ ಓನ್ ಹಾಗೂ ಕರ್ನಾಟಕ ಓನ್ ಕೇಂದ್ರಗಳಲ್ಲಿ ವಿಮಾ ಪ್ರಸ್ತಾವನೆ, ಪಹಣಿ, ಚಾಲ್ತಿ ಬ್ಯಾಂಕ್ ಪುಸ್ತಕ, ಮೊಬೈಲ್ ಸಂಖ್ಯೆ ಮತ್ತು ಆಧಾರ್ ಸಂಖ್ಯೆಯೊಂದಿಗೆ ಬೆಳೆವಾರು ನಿಗಧಿ ಪಡಿಸಿರುವ ಪ್ರೀಮಿಯಮ್ ಮೊತ್ತವನ್ನು ಪಾವತಿಸಿ ವಿಮೆಗೆ ನೋಂದಾಯಿಸಿಕೊಳ್ಳಬಹುದು.



ವಿವಿಧ ವಿಮಾ ಘಟಕಗಳಲ್ಲಿ ಅಧಿಸೂಚಿಸಲಾದ ಬೆಳೆಗಳಿಗೆ ಇಚ್ಚೆಯುಳ್ಳ ಬೆಳೆ ಸಾಲ ಪಡೆದ,ಪಡೆಯದ ರೈತರು ಈ ಯೋಜನೆಯಡಿ ಭಾಗವಹಿಸಬಹುದು. ಹಿಂಗಾರು ಮತ್ತು ಬೇಸಿಗೆ ಹಂಗಾಮಿಗೆ ಅಧಿಸೂಚಿಸಲಾದ ಬೆಳೆಗಳಿಗೆ ವಿಮಾ ಪ್ರಸ್ತಾವನೆಯನ್ನು ಸಲ್ಲಿಸಬಹುದು.

ಮಳೆ, ನೆರೆ, ಪ್ರವಾಹ, ಪ್ರಕೃತಿ ವಿಕೋಪಗಳಿಂದ ಬೆಳೆ ಹಾನಿಯಾದಲ್ಲಿ, ನಿರೀಕ್ಷಿತ ಇಳುವರಿಯು ಸಾಮಾನ್ಯ ಇಳುವರಿಯ ಶೇಕಡಾ 50ಕ್ಕಿಂತ ಕಡಿಮೆ ಇದ್ದರೆ ಬೆಳೆ ಹಾನಿಯ ಪ್ರಮಾಣಕ್ಕೆ ಅನುಗುಣವಾಗಿ ಶೇಕಡಾ 25 ರಷ್ಟು ಬೆಳೆ ವಿಮಾ ನಷ್ಟ ಪರಿಹಾರ ಹಣವನ್ನು ವಿಮಾ ಘಟಕದ ನೋಂದಾಯಿತ ರೈತರಿಗೆ ವಿಮಾ ಸಂಸ್ಥೆಯು ನೀಡುವುದು. ಬೆಳೆ ಹಾನಿಯುಂಟಾದ 72 ಗಂಟೆಯೊಳಗಾಗಿ ವಿಮಾ ಸಂಸ್ಥೆ,ಹತ್ತಿರದ ರೈತ ಸಂಪರ್ಕ ಕೇಂದ್ರದ ಕೃಷಿ,ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ತಿಳಿಸಬೇಕು.

ಬೆಳೆ ವಿಮೆ ನೋಂದಣಿಗಾಗಿ ರೈತರು ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡಿರುವ ಫ್ರೂಟ್ಸ್ ಎಫ್.ಐ.ಡಿ ಹೊಂದಿರುವುದು ಕಡ್ಡಾಯವಾಗಿದೆ. ರೈತರು ಬೆಳೆಯುವ ಬೆಳೆಯ ಸರ್ವೆ ನಂ ಅವರ ಎಫ್.ಐ.ಡಿ ನಲ್ಲಿ ನಮೂದಾಗಿರಬೇಕು. ಮುಂದುವರೆದು, ಸದರಿ ಯೋಜನೆಯನ್ನು ಜಿಲ್ಲೆಯಲ್ಲಿ ಇಫ್ಕೋ ಟೋಕಿಯೋ ಜನರಲ್ ಇನ್ಶ್ಯುರೆನ್ಸ್ ಕಂಪನಿಯ ಮೂಲಕ 2024-25 ನೇ ಸಾಲಿನ ಹಿಂಗಾರು ಮತ್ತು ಬೇಸಿಗೆ ಹಂಗಾಮಿಗೆ ಅನಿಷ್ಠಾನಗೊಳಿಸಲಾಗುತ್ತಿದೆ.

ಹೆಚ್ಚಿನ ವಿವರಗಳಿಗೆ ರೈತರು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು, ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ವಿಮಾ ಸಂಸ್ಥೆಯ ಪ್ರತಿನಿಧಿಗಳನ್ನು ಸಂಪರ್ಕಿಸಬಹುದಾಗಿದೆ. ಜಿಲ್ಲಾ ಮಟ್ಟದ ಸಂಯೋಜಕರು ನಟೇಶ್ ಬಾಬು ಮೊಬೈಲ್ ಸಂಖ್ಯೆ:-7259550872, ಚಿಕ್ಕಬಳ್ಳಾಪುರ ಮತ್ತು ಮಂಚೇನಹಳ್ಳಿ ತಾಲ್ಲೂಕು ಸಂಯೋಜಕರಾದ ಅಭೀಷೇಕ್:-9880077592, ಚಿಂತಾಮಣಿ ಮತ್ತು ಶಿಡ್ಲಘಟ್ಟ ತಾಲ್ಲೂಕು ಸಂಯೋಜಕರಾದ ಹರೀಶ್ ರೆಡ್ಡಿ -9035542765, ಬಾಗೇಪಲ್ಲಿ ತಾಲ್ಲೂಕು ಸಂಯೋಜಕರಾದ ಚೇತನ್ ಕುಮಾರ್:- 8618732286, ಗೌರಿಬಿದನೂರು ಮತ್ತು ಗುಡಿಬಂಡೆ ತಾಲ್ಲೂಕು ಸಂಯೋಜಕರಾದ ಶ್ರೀನಿವಾಸ್- 8050336681 ಇವರನ್ನು ಸಂಪರ್ಕಿಸಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಬೆಳೆ ವಿಮೆ ಯೋಜನೆಯಡಿ ನೋಂದಣಿ ಮಾಡಿಸಿಕೊಳ್ಳಬಹುದು ಹಾಗೂ ಟೋಲ್ ಫ್ರೀ ನಂ: 18004250505 ಗೆ ಸಂಪರ್ಕಿಸಬಹುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂಜಾಟವಾಡುತ್ತಿದ್ದವರ ಬಂಧನ

**ಮೈಸೂರು:** ನಗರದ ಸಿಸಿಬಿ ಘಟಕದ ಪೊಲೀಸರವರಿಗೆ ದಿನಾಂಕ 13.11.2024 ರಂದು ಮೈಸೂರಿನ ಹೆಬ್ಬಾಳ್ 2ನೇ ಹಂತ 4ನೇ ಕ್ರಾಸ್‌ನ ಮನೆಯೊಂದರಲ್ಲಿ ಆರೋಪಿಯು ತನ್ನ ಸ್ನೇಹಿತನ ಮೂಲಕ ಮೈಸೂರಿನ ರೇಸ್ ಕೋರ್ಸ್‌ನಲ್ಲಿ ನಡೆಯುತ್ತಿರುವ ಕುದುರೆ ರೇಸ್ ಫಲಿತಾಂಶವನ್ನು ಮುಂಚಿತವಾಗಿ ತಿಳಿದುಕೊಂಡು ತನ್ನ ಮೊಬೈಲ್ ಮೂಲಕ ಸಾರ್ವಜನಿಕರಿಂದ ಹಣವನ್ನು ಪಣವನ್ನಾಗಿ ಇಟ್ಟುಕೊಂಡು ಜೂಜಾಟವನ್ನು ನಡೆಸುತ್ತಿರುವುದಾಗಿ ದೊರೆತ ಖಚಿತ ಮಾಹಿತಿ ಮೇರೆಗೆ ಮೈಸೂರುನಗರದ ಸಿಸಿಬಿ ಘಟಕದ ಅಧಿಕಾರಿ ಮತ್ತು ಸಿಬ್ಬಂದಿಗಳು ಸ್ಥಳಕ್ಕೆ ಧಾಳಿ ಮಾಡಿ ಅಕ್ರಮವಾಗಿ ಲಾಭ ಗಳಿಸುವ ಉದ್ದೇಶದಿಂದ ಕುದುರೆ ರೇಸ್‌ನ ಜೂಜಾಟದಲ್ಲಿ ತೊಡಗಿದ್ದ ಆರೋಪಿಯನ್ನು ವಶಕ್ಕೆ ಪಡೆದು ಕೃತ್ಯಕ್ಕೆ ಉಪಯೋಗಿಸಿದ್ದ 02 ಮೊಬೈಲ್ ಫೋನ್, 01 ಟ್ಯಾಬ್ ಮತ್ತು ಇತರೆ ಪರಿಕರಗಳನ್ನು ವಶಪಡಿಸಿಕೊಂಡು ಮುಂದಿನ ಕ್ರಮಕ್ಕಾಗಿ ಹೆಬ್ಬಾಳ್ ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆಯನ್ನು ಕೈಗೊಂಡಿರುತ್ತಾರೆ. ಈ ದಾಳಿ ಕಾರ್ಯವನ್ನು ಮೈಸೂರು ನಗರದ ಡಿಸಿಪಿ, ಕೇಂದ್ರಸ್ಥಾನ, ಅಪರಾಧ ಮತ್ತು ಸಂಚಾರ ವಿಭಾಗರವರ ಮಾರ್ಗದರ್ಶನದಲ್ಲಿ ಸಿಸಿಬಿ ವಿಭಾಗದ ಎಸಿಪಿರವರಾದ ಎಸ್.ಎನ್ ಸಂದೇಶ್‌ಕುಮಾರ್ ರವರ ನೇತೃತ್ವದಲ್ಲಿ ಸಿಸಿಬಿ ಘಟಕದ ಪಿ.ಎಸ್.ಐ ರವರಾದ ಮಾರುತಿ ಅಂತರಗಟ್ಟಿ, ಹಾಗೂ ಸಿಬ್ಬಂದಿಯವರುಗಳಾದ ರಾಘವೇಂದ್ರ, ಮಂಜುನಾಥ್ ರವರು ಕೈಗೊಂಡಿರುತ್ತಾರೆ.

## ರಾಜ್ಯ ಮಟ್ಟದ ಪುಸ್ತಕ ಆಯ್ಕೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024 ನೇ ಸಾಲಿನಲ್ಲಿ ಪ್ರಥಮ ಬಾರಿಗೆ ಮುದ್ರಣವಾಗಿ ಪ್ರಕಟಗೊಂಡ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. 2024 ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ 2024 ರಲ್ಲಿ ಪ್ರಕಟವಾದ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿಗೆ 01/01/2025 ರ ಸಂಜೆ 5.30 ರ ಒಳಗಾಗಿ ನೋಂದಣಿ ಮಾಡಿಸತಕ್ಕದ್ದು. ಸದರಿ ನೋಂದಣಿ ಮಾಡಿಸಿರುವ ಪುಸ್ತಕಗಳನ್ನು ಆಯ್ಕೆಗಾಗಿ ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು 2025ರ ಜನವರಿ 2 ರ ಸಂಜೆ 5.30 ರ ಒಳಗಾಗಿ ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಕಚೇರಿಗೆ ಸಲ್ಲಿಸುವುದು. ತಡವಾಗಿ ಸಲ್ಲಿಸುವ ಪುಸ್ತಕಗಳನ್ನು ಸ್ವೀಕರಿಸುವುದಿಲ್ಲ. ಪುಸ್ತಕಗಳ ನೋಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ ಇಲಾಖಾ ಅಂತರ್ಜಾಲ www.dpl.karnataka.gov.in ಮತ್ತು ದೂರವಾಣಿ ಸಂಖ್ಯೆ : 080 22864990, 22867358 ನ್ನು ಸಂಪರ್ಕಿಸಲು ಕೋರಿದೆ ಹಾಗೂ ಹೆಚ್ಚಿನ ಮಾಹಿತಿಯನ್ನು ಜಿಲ್ಲಾ ಕೇಂದ್ರ ಗ್ರಂಥಾಲಯ, ಚಿಕ್ಕಬಳ್ಳಾಪುರ ಈ ಕಚೇರಿಯಲ್ಲಿ ಪಡೆಯಬಹುದು.

## 22 ರಂದು ಭೂಮಿ ಪೂಜೆ

**ಮಂಡ್ಯ:** ಜಿಲ್ಲೆಯಲ್ಲಿ ಡಿಸೆಂಬರ್ 20, 21, 22 ರಂದು ನಡೆಯುವಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಚರಿಸುವ ಸಂಬಂಧ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಬೇಕಾಗಿರುತ್ತದೆ. ಈಗಾಗಲೇ ಸಮ್ಮೇಳನ ಸಂಬಂಧ 28 ಸಮಿತಿಗಳನ್ನು ರಚಿಸಲಾಗಿದೆ.ಅಲ್ಲದೆ, ಸಮ್ಮೇಳನ ನಡೆಸಲುರಾಷ್ಟ್ರೀಯ ಹೆದ್ದಾರಿ-275 ಹೊಂದಿಕೊಂಡಂತೆಇರುವ ಸಾಂಜೋಆಸ್ಪತ್ರೆ ಹಾಗೂ ಅಮರಾವತಿ ಹೋಟೆಲ್‌ನ ಹಿಂಭಾಗದಜಾಗವನ್ನುತಜ್ಞರ ವರದಿಯನ್ವಯ ಸೂಕ್ತವೆಂದುಗುರುತಿಸಲಾಗಿದೆ. ಈ ನಿಟ್ಟಿನಲ್ಲಿ ಸಮ್ಮೇಳನಕ್ಕೆ ನಿಗದಿಪಡಿಸಿದ ಸ್ಥಳದಲ್ಲಿ ನವೆಂಬರ್ 22 ರಂದು ಶುಕ್ರವಾರ ಬೆಳಿಗ್ಗೆ 8.30 ಗಂಟೆಗೆಜಾಗದಲ್ಲಿ ಭೂಮಿ ಪೂಜಾಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಂಡ್ಯಜಿಲ್ಲಾಧಿಕಾರಿ ಹಾಗೂ 87 ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನದ ಪ್ರಧಾನ ಸಂಚಾಲಕರು ಮತ್ತುಕೋಶಾಧ್ಯಕ್ಷರಾದಡಾ.ಕುಮಾರಅವರು ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಫಸಲ್ ಬಿಮಾಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾತಿ

**ಮಂಡ್ಯ:** ಮಂಡ್ಯಜಿಲ್ಲೆಯಲ್ಲಿ2024-25 ನೇ ಸಾಲಿನ ಹಿಂಗಾರು ಹಾಗೂ ಬೇಸಿಗೆ ಹಂಗಾಮುಗಳಲ್ಲಿ ಕರ್ನಾಟಕರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದ್ದು, ಇವುಗಳಲ್ಲಿ ತಾಲ್ಲೂಕುವಾರು ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯತಿ ಮಟ್ಟಕ್ಕೆ ಮತ್ತುಇತರೆ ಬೆಳೆಗಳನ್ನು ಹೋಬಳಿ ಮಟ್ಟಕ್ಕೆ ಅಧಿಸೂಚಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆಎಂದು ಮಂಡ್ಯಜಿಲ್ಲೆಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ. ಪರಿಷ್ಕೃತ ಪ್ರಧಾನ ಮಂತ್ರಿ ಫಸಲ್ ಬಿಮಾಯೋಜನೆಯ ಮಾರ್ಗಸೂಚಿಯನ್ವಯ ಬೆಳೆ ವಿಮೆ ನೊಂದಾಯಿಸಲುಎಫ್.ಐ.ಡಿ ಸಂಖ್ಯೆಯನ್ನು ಹೊಂದಿರುವುದು ಕಡ್ಡಾಯವಾಗಿರುತ್ತದೆ, ಒಂದು ವೇಳೆ ಎಫ್.ಐ.ಡಿ ಸಂಖ್ಯೆಯನ್ನು ಹೊಂದಿರದಿದ್ದಲ್ಲಿ ಹತ್ತಿರದ ಕೃಷಿ ಇಲಾಖೆಯರೈತ ಸಂಪರ್ಕ ಕೇಂದ್ರಗಳು ಅಥವಾತೋಟಗಾರಿಕೆಇಲಾಖೆಯಲ್ಲಿಆಧಾರ್ ಸಂಖ್ಯೆ ಹಾಗೂ ಆರ್.ಟಿ.ಸಿ. ವಿವರಗಳನ್ನು ಸಲ್ಲಿಸಿ ಎಫ್.ಐ.ಡಿ ಸಂಖ್ಯೆಯನ್ನು ಪಡೆಯಬಹುದಾಗಿರುತ್ತದೆ.ಬೆಳೆ ವಿಮೆ ಪ್ರಸ್ತಾವನೆಯನ್ನು ಬೆಳೆ ಸಮೀಕ್ಷೆಯ ವರದಿಯೊಂದಿಗೆ ಹೋಲಿಸಿ ಬೆಳೆ ವಿಮೆ ಇತ್ಯರ್ಥಪಡಿಸಲಾಗುವುದು. ಆಸಕ್ತ ರೈತರು ಹೆಚ್ಚಿನ ಮಾಹಿತಿಗಾಗಿತಮ್ಮ ಹತ್ತಿರದರೈತ ಸಂಪರ್ಕ ಕೇಂದ್ರಗಳು, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಕಚೇರಿ, ಬ್ಯಾಂಕುಗಳು, ಸಾಮಾನ್ಯ ಸೇವಾ ಕೇಂದ್ರಗಳು, ಬೆಂಗಳೂರು ಒನ್, ಕರ್ನಾಟಕಒನ್ ಮತ್ತುಗ್ರಾಮಒನ್ ಕೇಂದ್ರಗಳನ್ನು ಸಂಪರ್ಕಿಸಬಹುದುಎಂದುಮಂಡ್ಯಜಿಲ್ಲೆಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಕ್ಕೆ ನೇರ ಸಂದರ್ಶನ

**ಮೈಸೂರು:** ರಾಷ್ಟ್ರೀಯ ಆರೋಗ್ಯ ಅಭಿಯಾನದಲ್ಲಿನ ವಿವಿಧ ಕಾರ್ಯಕ್ರಮಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ 2024-25 ನೇ ಸಾಲಿಗೆ ನೇಮಕ ಮಾಡಿಕೊಳ್ಳಲು ನೇರ ಸಂದರ್ಶನವನ್ನು ಡಿಸೆಂಬರ್ 2 ರಂದು ಬೆಳಿಗ್ಗೆ 10:30 ಗಂಟೆಯಿಂದ ಸಂಜೆ 4:30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಆವರಣದಲ್ಲಿ ಸದಸ್ಯ ಕಾರ್ಯದರ್ಶಿಯವರ ಸಮ್ಮುಖದಲ್ಲಿ ಏರ್ಪಡಿಸಲಾಗಿದೆ.

ಮಕ್ಕಳ ತಜ್ಞರು (01), ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು (01), ಅರವಳಿಕೆ ತಜ್ಞರು (03), ಮನೋ ವೈದ್ಯರು (01), ಎಸ್.ಎನ್.ಸಿ.ಯು ವೈದ್ಯರು (01), ಎನ್.ಆರ್.ಸಿ ವೈದ್ಯರು (01), ವೈದ್ಯಾಧಿಕಾರಿಗಳು (ಐ.ಸಿ.ಯು/ಹೆಚ್.ಡಿ.ಯು) (14), ರಕ್ತ ನಿಧಿ ವೈದ್ಯಾಧಿಕಾರಿಗಳು (01), ಆರ್.ಬಿ.ಎಸ್.ಕೆ ವೈದ್ಯರು (02), ನೇತ್ರ ಸಹಾಯಕರು (04), ಮನೋ ಸಾಮಾಜಿಕ ಕಾರ್ಯಕರ್ತರು (01), ಕಮ್ಯೂನಿಟಿ ಸ್ಟಾಫ್ನರ್ಸ್ (01), ಶುಶ್ರೂಷಕರು (ಹೆಚ್.ಡಿಯು/ಐ.ಸಿ.ಯು)03, ಶುಶ್ರೂಷಕರು (ಆರ್.ಬಿ.ಎಸ್.ಕೆ) 01, ಶುಶ್ರೂಷಕರು (ಎನ್.ಬಿ.ಎಸ್.ಯು-27 ಮತ್ತು ಎಸ್.ಎನ್.ಸಿ.ಯು-01), ಜಿಲ್ಲಾ ಆಶಾ ಮೆಂಟರ್(01), ತಾಲೂಕು ಆಶಾ ಮೆಂಟರ್ (01), ಅರವಳಿಕೆ ತಜ್ಞರು01, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಆಯುಷ್ಮತಿ ಕಾರ್ನರ್) 02, ಶಸ್ತ್ರ ಚಿಕಿತ್ಸಕರು (ಆಯುಷ್ಮತಿ ಕಾರ್ನರ್) 01, ಪೂರ್ಣಕಾಲಿಕ ವೈದ್ಯರು 04, ವೈದ್ಯರು (ನಮ್ಮ ಕ್ಲಿನಿಕ್) 03, ಶುಶ್ರೂಷಕಿಯರು (ಮಹಿಳಾ ಅಭ್ಯರ್ಥಿಗಳು ಮಾತ್ರ) 02, ಔಷಧಿ ವಿತರಕರು 02, ಪ್ರಯೋಗ ಶಾಲಾ ತಂತ್ರಜ್ಞರು 01, ಆರೋಗ್ಯ ನಿರೀಕ್ಷಣಾಧಿಕಾರಿಗಳು (ನಮ್ಮ ಕ್ಲಿನಿಕ್) 09, ಫಿಜಿಷಿಯನ್ (ಎನ್,ಪಿ-ಎನ್.ಸಿ.ಡಿ) 01, ಫಿಜಿಷಿಯನ್ (ಎನ್.ಪಿ.ಹೆಚ್.ಸಿ.ಇ) 01, ಫಿಜಿಷಿಯನ್(ಎನ್.ಪಿ..ಪಿ,ಸಿ) 01, ವೈದ್ಯಾಧಿಕಾರಿಗಳು(ಎನ್.ಪಿ-ಎನ್.ಸಿ.ಡಿ) 12, ಶುಶ್ರೂಷಕರು (ಎನ್.ಪಿ.ಪಿ.ಸಿ) 02, ಶುಶ್ರೂಷಕರು (ಎನ್.ಪಿ,ಹೆಚ್,ಸಿ.ಇ) 01, ಬ್ಲಾಕ್ ಹೆಲ್ತ್ ಪಬ್ಲಿಕ್ ಎಪಿಡಮಾಲಜಿಸ್ಟ್ 03, ಬ್ಲಾಕ್ ಹೆಲ್ತ್ ಪಬ್ಲಿಕ್ ಲ್ಯಾಬ್ -ಪ್ರಯೋಗಶಾಲಾ ತಂತ್ರಜ್ಞರು (01), ವೈದ್ಯರು (ಎನ್.ಟಿ.ಇ.ಪಿ) (01), ಹಿರಿಯ ವೈದ್ಯರು (ಎನ್.ಟಿ.ಇ.ಪಿ) 01, ಟಿ.ಬಿ.ಹೆಚ್.ವಿ ((ಎನ್.ಟಿ.ಇ.ಪಿ) 01 ಸೇರಿ ಒಟ್ಟು 115 ಹುದ್ದೆಗಳಿಗೆ ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಎಲ್ಲಾ ದಾಖಲಾತಿಗಳೊಂದಿಗೆ ಸಂದರ್ಶನದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಬಹುದು.

## ಸಿಡಿಮಿಡಿಗೊಂಡ ಸಿಎಂ

**ಬಾಗಲಕೋಟೆ:** ನನ್ನನ್ನು ಕೇಳ್ತಿರಲ್ಲ. ನೀವೇನು ವಕೀಲರೇ ಎಂದು ಸಿಎಂ ಸಿದ್ದರಾಮಯ್ಯ ಮಾಧ್ಯಮಗಳ ಮೇಲೆಯೇ ಗರಂ ಆದ ಪ್ರಸಂಗ ಇಂದು ನಡೆಯಿತು. 71 ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸಲು ಸಿಎಂ ಇಂದು ಬಾಗಲಕೋಟೆಗೆ ಆಗಮಿಸಿದರು. ಈ ವೇಳೆ ನಮ್ಮ ವಿರುದ್ಧ 40% ಕಮಿಷನ್ ಆರೋಪ ಸುಳ್ಳು ಎನ್ನುವುದು ಲೋಕಾಯುಕ್ತ ತನಿಖೆಯಿಂದ



ಬೆಳಕಿಗೆ ಬಂದಿದೆ ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಸಂಬಂಧಿಸಿದಂತೆ ಸಿಎಂಗೆ ಪ್ರಶ್ನೆ ಕೇಳಲಾಯಿತು. 40% ಕಮಿಷನ್ ಆರೋಪಕ್ಕೆ ಸಾಕ್ಷಿ ಇಲ್ಲದೇ ನೀವು ಹೇಗೆ ಆರೋಪ ಮಾಡಿದ್ದೀರಿ ಎಂಬ ಪ್ರಶ್ನೆಗೆ ಸಿಎಂ ಸಿಡಿಮಿಡಿಗೊಂಡರು. ಯಾವುದೋ ಒಂದು ಕ್ರಿಮಿನಲ್ ಪ್ರಕರಣದಲ್ಲಿ ದೂರು ನೀಡಿರುತ್ತೇವೆ. ಅದಕ್ಕೆ ಸಾಕ್ಷಿಯನ್ನು ಒದಗಿಸಿರುತ್ತೇವೆ. ಆದರೆ ಆ ಸಾಕ್ಷಿಯಲ್ಲಿ ಒಂದೊಂದು ಸಾರಿ ಅನುಮಾನ ಬಂದಿರುತ್ತೆ. ಆ ಅನುಮಾನದ ಲಾಭ ಆರೋಪಿಗಳಿಗೆ ಹೋಗುತ್ತದೆ ಎಂದು ಉತ್ತರಿಸಿದರು. 40% ಕಮಿಷನ್ ಆರೋಪವನ್ನು ಕೆಂಪಣ್ಣ ಮಾಡಿದ್ದರು. ಅವರ ಹೇಳಿಕೆಯ ಆಧಾರ ಮೇಲೆ ನಾವು ಆರೋಪ ಮಾಡಿದ್ದೆವು. ಆದಕ್ಕೆ ನಾನು ಕಮಿಷನ್ ರಚನೆ ಮಾಡಿದೆವು. ನಾನು ಆಯೋಗದ ವರದಿ ನೋಡಿಲ್ಲ. ಬಿಜೆಪಿಯವರ ಮಾತನ್ನು ನನ್ನ ಬಳಿ ಕೇಳಬೇಡಿ. ಕೆಲವೊಂದು ವಿಚಾರಗಳು ಸಾಕ್ಷಿ ಇಲ್ಲದೇ ವಜಾ ಆಗುತ್ತದೆ. ಹಾಗೆಂದ ಮಾತ್ರಕ್ಕೆ ತಪ್ಪೇ ಆಗಿಲ್ಲ ಎಂದಲ್ಲ ಎಂದರು.

# ಸಮ್ಮೇಳನದಲ್ಲಿ ಊಟ, ವಸತಿ ಕಲ್ಪಿಸಿ

## ಮಹಿಳಾ ಸಮಿತಿ ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಕುಮಾರ ಸೂಚನೆ

**ಮಂಡ್ಯ:** ನಗರದಲ್ಲಿ ಡಿ. 20, 21, 22 ರಂದು ಮೂರು ದಿನಗಳ ಕಾಲ ಜರುಗಲಿರುವ 87ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ರಾಜ್ಯದ ನಾನಾ ಭಾಗಗಳಿಂದ ಸಮ್ಮೇಳನಕ್ಕೆ ನೊಂದಾಯಿಸಿಕೊಂಡು ಆಗಮಿಸುವ ಮಹಿಳೆಯರಿಗೆ ಸೂಕ್ತರೀತಿಯಲ್ಲಿ ವಸತಿ ಹಾಗೂ ಎಲ್ಲರಿಗೂಊಟದ ವ್ಯವಸ್ಥೆಕಲ್ಪಿಸಬೇಕು. ಎಲ್ಲೂ ಲೋಪವಾಗದಂತೆ ನಿಗಾವಹಿಸುವಂತೆಜಿಲ್ಲಾಧಿಕಾರಿಡಾ. ಕುಮಾರ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮಹಿಳಾ ಸಮಿತಿ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವ ಮಹಿಳೆಯರನ್ನು ಬಹಳ ಗೌರವಯುತವಾಗಿ ನಡೆಸಿಕೊಳ್ಳಬೇಕು ಎಂದು ಸೂಚಿಸಿದರು. ಮೂಲಸೌಕರ್ಯಕ್ಕೆ ಹೆಚ್ಚು ಒತ್ತು ನೀಡಬೇಕು.ಕುಡಿಯುವ ನೀರು, ಶೌಚಾಲಯ, ವಸತಿ ಸ್ಥಳಗಳಲ್ಲಿ ಸ್ವಚ್ಛತೆಗೆಆದ್ಯತೆಕೊಡಬೇಕುಎಂದರು.

ಹೊರ ಜಿಲ್ಲೆಗಳಿಂದ ಕಾರ್ಯಕ್ರಮಕ್ಕೆ ಆಗಮಿಸುವವರ ವಾಹನಗಳಿಗೆ ಉಮ್ಮಡಹಳ್ಳಿ ಗೇಟ್ ಬಳಿ ಇರುವ ಸತ್ವಕಾವೇರಿ ಸಿರಿ ಪ್ಲಾಟ್ ಬಳಿ 10 ಎಕರೆ ಸ್ಥಳದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಅಲ್ಲಿಂದ ಸಮ್ಮೇಳನ ನಡೆಯುವ ಸ್ಥಳಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ. ಪಾರ್ಕಿಂಗ್ ಸ್ಥಳದಿಂದ ಜನರನ್ನುಕರೆತರಲು ಪ್ರತಿ 5 ನಿಮಿ?ಕ್ಕೊಮ್ಮೆ ಬಸ್ ವ್ಯವಸ್ಥೆ ಮಾಡಲಾಗಿದೆ. ಮಂಡ್ಯಜಿಲ್ಲೆಯ ಸ್ಥಳೀಯರಿಗೆ ಪ್ರತ್ಯೇಕವಾಗಿ 3 ಕಡೆ ಪಾರ್ಕಿಂಗ್ ವ್ಯವಸ್ಥೆ ಮಾಡಿದ್ದು, ಅಲ್ಲಿಂದ ಸಮ್ಮೇಳನಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ.ಕೆಎಸ್‌ಆರ್ ಟಿಸಿ ಬಸ್ ನಿಲ್ದಾಣದಿಂದಲೂ ಉಚಿತ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.



### ಮಹಿಳಾ ಸಹಾಯವಾಣಿ

ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವ ಪ್ರತಿಯೊಬ್ಬ ಮಹಿಳೆಯರಿಗೂ ಅನುಕೂಲವಾಗುವಂತೆ ಮಹಿಳಾ ಸಹಾಯವಾಣಿಯನ್ನು ಪ್ರಾರಂಭಿಸಲಾಗುವುದು.ಮಹಿಳಾ ಸಮಿತಿಯಲ್ಲಿ ಉಪ ಸಮಿತಿಗಳನ್ನು ರಚಿಸಿ ಬಹಳ ಅಚ್ಚುಕಟ್ಟಾಗಿಕಾರ್ಯನಿರ್ವಹಿಸುತ್ತಿರುವುದಕ್ಕೆ ಅಭಿನಂದನೆ ಸಲ್ಲಿಸಿದರು. ಎಲ್ಲಾ ಸದಸ್ಯರುಗಳು ಕಡ್ಡಾಯವಾಗಿ ಪಾಸ್ ಪಡೆಯಬೇಕು.ಮಹಿಳಾ ಗೋಷ್ಠಿಗಳಿಗೆ ಸಂಬಂಧಿಸಿದಂತೆ ಸಾಂಸ್ಕೃತಿಕ ಸಮನ್ವಯ ಸಮಿತಿಯೊಂದಿಗೆ ಚರ್ಚಿಸಿ ಅಭಿಪ್ರಾಯಗಳನ್ನು ತಿಳಿಸಿ.ಗೋಷ್ಠಿಗೆ ಬರುವ ಸಂಪನ್ಮೂಲ ವ್ಯಕ್ತಿಗಳಿಗೆ ಉಟ, ವಸತಿ ವ್ಯವಸ್ಥೆಕಲ್ಪಿಸಬೇಕುಎಂದರು. ಆರೋಗ್ಯ ಸಮಿತಿಗೆ ಸಂಬಂಧಪಟ್ಟಂತೆಆರೋಗ್ಯ ಕೇಂದ್ರಗಳನ್ನು ತೆರೆಯಲಾಗುವುದು.ಪ್ರತಿಆರೋಗ್ಯಕೇಂದ್ರಕ್ಕೂ ವೈದ್ಯರು ಹಾಗೂ ಸಿಬ್ಬಂದಿಗಳನ್ನು ಒಳಗೊಂಡಂತೆ ಆರೋಗ್ಯ ಪರಿಕರಗಳಿರುತ್ತವೆ. ಮಹಿಳೆಯರಿಗೆ ಸಂಬಂಧಪಟ್ಟಂತೆಯಾವುದೇ ಸಮಸ್ಯೆಗಳಿದ್ದರೂ ಕೂಡ ಪರಿಹರಿಸಿಕೊಳ್ಳಬಹುದುಎಂದರು. ಸಮಿತಿಯ ಸದಸ್ಯರುಗಳು ಮಹಿಳಾ ಸಮಿತಿಗೆ ಸಂಬಂಧಿಸಿದಂತೆ ಅನೇಕ ವಿಚಾರಗಳನ್ನು ಚರ್ಚಿಸಿ ಸೂಕ್ತ ಸಲಹೆ ಸೂಚನೆಗಳನ್ನು ನೀಡಿದರು.

### ಮಹಿಳಾ ಸಮಿತಿಯಿಂದ ಉತ್ತಮ ಕಾರ್ಯ

ಮಹಿಳಾ ಸಮಿತಿಯಅಧ್ಯಕ್ಷೆ ಸುನಂದಾಜಯರಾಮ್ ಮಾತನಾಡಿ, ಮಹಿಳಾ ಸಮಿತಿಯಲ್ಲಿರುವ ಸದಸ್ಯರುಗಳನ್ನು ಸ್ವಯಂ ಸೇವಕರ ಸಮಿತಿ, ನೋಂದಣಿ ಸಮಿತಿ, ಸಾರಿಗೆ ಸಮಿತಿ, ಆಹಾರ ಸಮಿತಿ, ಆರೋಗ್ಯ ಸಮಿತಿ, ಸಾಂಸ್ಕೃತಿಕ ಸಮಿತಿ, ಆಸನ ಸಮಿತಿ, ಸಮನ್ವಯ ಸಮಿತಿ, ವಸತಿ ಸಮಿತಿಗಳಲ್ಲಿ ಕಾರ್ಯ ನಿರ್ವಹಿಸಲು ನೇಮಿಸಲಾಗಿದೆ. ಮಹಿಳಾ ಸಮಿತಿಯಲ್ಲಿ ಉಪಸಮಿತಿಗಳನ್ನು ರಚಿಸಿದ್ದು, ಎಲ್ಲರೂ ಬಹಳ ಉತ್ತಮವಾಗಿಕಾರ್ಯ ನಿರ್ವಹಿಸುತ್ತಿದ್ದು ಮುಂದೆಯೂತಮ್ಮ ಕರ್ತವ್ಯಗಳನ್ನು ಜವಾಬ್ದಾರಿಯಿಂದ ನಿಭಾಯಿಸಿ ಎಂದರು. ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನವಾದ್ದರಿಂದ ಕನ್ನಡ ಭಾಷೆ, ಕನ್ನಡ ನಾಡು - ನುಡಿಗೆ ಹೆಚ್ಚು ಒತ್ತು ನೀಡುವ ಗೋಷ್ಠಿಗಳನ್ನು ನಡೆಸುವುದರಜೊತೆ ಕೃಷಿ, ಹೆಣ್ಣು ಭ್ರೂಣ ಹತ್ಯೆ, ಮೌಢ್ಯತೆ ಹಾಗೂ ದುಡಿಯುವ ಮಹಿಳೆಯರ ಬಗ್ಗೆ ವಿಚಾರ ಗೋಷ್ಠಿಗಳು ನಡೆಯಬೇಕುಎಂದು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು. ಸಭೆಯಲ್ಲಿಕನ್ನಡ ಸಾಹಿತ್ಯ ಪರಿಷತ್ತಿನ ಸಂಚಾಲಕಿ ಡಾ. ಮೀರಾಶಿವಲಿಂಗಯ್ಯ, ಮಹಿಳಾ ಸಮಿತಿಯಉಪಾಧ್ಯಕ್ಷೆ ಸೌಭಾಗ್ಯ ಮಹದೇವು, ಆಯುಷ್ ಇಲಾಖೆಯಜಿಲ್ಲಾಆಯುಷ್ ವೈದ್ಯಾಧಿಕಾರಿಡಾ.ಬಿ.ಎಸ್ ಸೀತಾಲಕ್ಷ್ಮಿ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

### ಆಕರ್ಷಿಸಲಿ ಸಮ್ಮೇಳನದ ಧ್ವಜಾರೋಹಣ

ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ 3 ದಿನ ನಡೆಯುವಧ್ವಜಾರೋಹಣ ಕಾರ್ಯಕ್ರಮ ಆಕರ್ಷಣೀಯವಾಗಿರಬೇಕು. ಇದಕ್ಕೆ ಸಂಬಂಧಿಸಿದ ಕಾರ್ಯವೈಖರಿಯನ್ನುಅಚ್ಚುಕಟ್ಟಾಗಿ ನಿರ್ವಹಿಸುವ ಜವಾಬ್ದಾರಿಧ್ವಜ ಸಮಿತಿ ಮೇಲಿದೆಎಂದು ಉಪ ವಿಭಾಗಧಿಕಾರಿ ಶಿವಮೂರ್ತಿ ಹೇಳಿದರು. ಜಿಲ್ಲಾಧಿಕಾರಿಕಛೇರಿ ಸಭಾಂಗಣದಲ್ಲಿ ನಡೆದಧ್ವಜ ಸಮಿತಿ ಸಭೆಯಲ್ಲಿ ಮಾತನಾಡಿದಅವರು, ಸಮ್ಮೇಳದ ಉದ್ಘಾಟನೆಧ್ವಜರೋಹಣದಿಂದಲೇ ನಡೆಯುವುದರಿಂದ ಸಮಿತಿಯಕಾರ್ಯ ಕ್ರಿಯಾಶೀಲತೆ ಯಿಂದಕೂಡಿರಬೇಕುಎಂದರು. ಧ್ವಜ ಸ್ತಂಭಗಳನ್ನು ಸಮ್ಮೇಳನನಡೆಯುವ ಮುಖ್ಯದ್ವಾರದ ಬಾಗಿಲಿನ ಮುಂಭಾಗದಲ್ಲಿ ಸ್ಥಾಪಿಸಲಾಗುವುದು, ಒಟ್ಟು ಮೂರುಧ್ವಜಾ ಸ್ತಂಭಗಳಿದ್ದು, ಮೊದಲ ಸ್ತಂಭರಾಷ್ಟ್ರಧ್ವಜದಾಗಿರುತ್ತದೆ. ಇದುಎತ್ತರವಗಿರುತ್ತದೆ. ನಂತರಎರಡನೇಧ್ವಜ ಸ್ತಂಭ ನಾಡಧ್ವಜ ಹಾಗೂ ಮೂರನೇಧ್ವಜಕನ್ನಡ ಸಾಹಿತ್ಯ ಪರಿಷತ್ತಿನಧ್ವಜವಾಗಿದ್ದು .ಮೂರುಧ್ವಜ ಸ್ತಂಭಗಳು ಕ್ರಮಬದ್ಧವಾಗಿ ನಿರ್ಮಾಣವಾಗಬೇಕುಎಂದರು. ಧ್ವಜಾರೋಹಣದ ಮೊದಲ ದಿನ ರಾಷ್ಟ್ರಧ್ವಜವನ್ನುಜಿಲ್ಲಾಉಸ್ತುವಾರಿ ಸಚಿವರು ಹಾಗೂ ಮರುದಿನ ಕನ್ನಡ ಸಾಹಿತ್ಯ ಪರಿಷತ್ತಿನಧ್ವಜವನ್ನು ಪರಿಷತ್ತಿನಅಧ್ಯಕ್ಷರುಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ. ನಾಡಧ್ವಜವನ್ನುಜಿಲ್ಲೆಯ ಸಾಹಿತಿ ಹಾಗೂ ಪ್ರಗತಿ ಪರರೈತರು, ಸ್ವಾತಂತ್ರ್ಯ ಹೋರಾಟಗಾರರು ಮತ್ತು ಮಾಜಿ ಸೈನಿಕರಿಂದ ನೆರವೇರಿಸುವಕುರಿತು ಸಮಾಲೋಚಿಸುವುದಾಗಿ ತಿಳಿಸಿದರು. ಧ್ವಜ ಸಮಿತಿಯವರಿಗೆ ಪ್ರತ್ಯೇಕ ಐಡಿಕಾರ್ಡ್ ನೀಡುವುದರಜೊತೆಗೆ ಸಾಹಿತ್ಯ ಸಮ್ಮೇಳದ ಲೋಗೋ ಇರುವಕ್ಯಾಪ್ ನೀಡಲಾಗುವುದು. ಸಮಿತಿ ಸದಸ್ಯರಿಗೆ ಸ್ಮರಣಿಕೆ ಹಾಗೂ ಪ್ರಮಾಣ ಪತ್ರ ನೀಡುವುದನ್ನು ಮುಂದಿನ ದಿನಗಳಲ್ಲಿ ತೀರ್ಮಾನಿಸಲಾಗುವುದುಎಂದರು. ಸಭೆಯಲ್ಲಿಜಿಲ್ಲಾದೈಹಿಕ ಶಿಕ್ಷಣಾಧಿಕಾರಿ ಎನ್. ಲಿಂಗರಾಜು, ನಿವೃತ್ತದೈಹಿಕ ಶಿಕ್ಷಕಿ ಜ್ಞಾನಪೂರ್ಣ, ಶ್ರೀರಂಗಪಟ್ಟಣ ತಾಲೂಕುಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿಅಧ್ಯಕ್ಷ ಎ. ಸೋಮಶೇಖರ ಸೇರಿದಂತೆ ನಾನಾ ಗಣ್ಯರು ಉಪಸ್ಥಿತರಿದ್ದರು.

### ಅನುದಾನ ಲೋಪವಾಗದಂತೆ ವೆಚ್ಚಮಾಡಿ

**ಮಂಡ್ಯ** ಜಿಲ್ಲೆಯಲ್ಲಿ ಡಿಸೆಂಬರ್ 20, 21, 22 ರಂದುಒಟ್ಟು 3 ದಿನಗಳ ಕಾಲ ನಡೆಯಲಿರುವ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನದ ವಿವಿಧ ಸಮಿತಿಗಳಿಗೆ ಬಿಡುಗಡೆಯಾಗುವಅನುದಾನವನ್ನು ಯಾವುದೇ ಲೋಪವಾಗದಂತೆ ಪಾರದರ್ಶಕವಾಗಿ ವೆಚ್ಚ ಮಾಡಬೇಕುಎಂದುಜಿಲ್ಲಾಧಿಕಾರಿಡಾಕುಮಾರಅವರು ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರುಗಳಿಗೆ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ 87 ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನ ಕುರಿತುಎಲ್ಲಾ ಸಮಿತಿಗಳ ಸದಸ್ಯ ಕಾರ್ಯದರ್ಶಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು. ಸಮಿತಿಗಳ ಸಂಚಾಲಕರು ಹಾಗೂ ಸದಸ್ಯ ಕಾರ್ಯದರ್ಶಿಗಳು ಈಗಾಗಲೇ ತಮ್ಮ ಸಮಿತಿಗೆ ಬಿಡುಗಡೆಯಾಗಿರುವ ಅನುದಾನದ ಆಧಾರದಂತೆ ಯಾವ ಕೆಲಸ ಕಾರ್ಯಗಳಿಗೆ ಎಷ್ಟು ಹಣ ವೆಚ್ಚವಾಗುತ್ತದೆಎಂದುಕ್ರಿಯಾಯೋಜನೆ ಸಿದ್ಧಪಡಿಸಿ ಸಮಿತಿಯಲ್ಲಿ ಮಂಡಿಸಿ ಸಾಹಿತ್ಯ ಸಮ್ಮೇಳನದ ವಿಶೇಷಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಮತ್ತುಇದರ ಸಂಪೂರ್ಣಜವಬ್ದಾರಿ ಸಮಿತಿಯ ಕಾರ್ಯದರ್ಶಿ ಹಾಗೂ ಸಂಚಾಲಕರದ್ದೇಆಗಿರುತ್ತದೆಎಂದರು. ಸಭೆಯಲ್ಲಿಕನ್ನಡ ಸಾಹಿತ್ಯ ಸಮ್ಮೇಳನದ ಸಂಚಾಲಕರಾದ ಮೀರಾ ಶಿವಲಿಂಗಯ್ಯ, ಮಂಡ್ಯ ಉಪವಿಭಾಗಾಧಿಕಾರಿ ಶಿವಮೂರ್ತಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಅಶೋಕ ವಿ.ಎಸ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಕುಮಾರ್ ಉಪಸ್ಥಿತರಿದ್ದರು.

# ಮಹನೀಯರ ಪುತ್ಥಳಿ ನಿರ್ಮಿಸುವಾಗ ನಿಯಮ ಪಾಲಿಸಿ

**ಚಿಂತಾಮಣಿ:** ಜಿಲ್ಲೆಯಲ್ಲಿನ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಮಹನೀಯರ ಪುತ್ಥಳಿಗಳನ್ನು ನಿರ್ಮಿಸಲು ಹಾಗೂ ನಾಮಫಲಕಗಳನ್ನು ಹಾಕಲು ಸರ್ಕಾರದ ಮಾರ್ಗಸೂಚಿ ಕ್ರಮಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಾ, ಜಿಲ್ಲೆಯ ಕೆಲವೆಡೆ ಸಾರ್ವಜನಿಕ ಸ್ಥಳಗಳಲ್ಲಿ ದೇಶ ಸೇವೆಗೆ ಶ್ರಮಿಸಿದ ಮಹನೀಯರ ನಾಮಫಲಕಗಳನ್ನು ಹಾಗೂ ಪುತ್ಥಳಿಗಳನ್ನು ಅನಧಿಕೃತವಾಗಿ ಹಾಕುತ್ತಿರುವುದು ಜಿಲ್ಲಾಡಳಿತದ ಗಮನಕ್ಕೆ ಬಂದಿರುತ್ತದೆ. ಈ ರೀತಿಯ ಕಾನೂನು ಬಾಹಿರವಾಗಿ ಪುತ್ಥಳಿ ನಿರ್ಮಿಸಿ, ನಾಮಫಲಕ ಹಾಕಿ ಸಾರ್ವಜನಿಕ ಶಾಂತಿ ಭಂಗ ಉಂಟಾಗುವ ರೀತಿ ಯಾವುದೇ ವ್ಯಕ್ತಿಗಳು ನಡೆದು ಕೊಳ್ಳಬಾರದು. ಶಾಂತಿ ಸುವ್ಯವಸ್ಥೆ ಕಾಪಾಡಲು ಪ್ರತಿಯೊಬ್ಬರು ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದರು.

ಚಿಂತಾಮಣಿ ತಾಲ್ಲೂಕಿನ ಅಂಬಾಜಿ ದುರ್ಗಾ ಹೋಬಳಿಯ ತಿಮ್ಮಸಂದ್ರ ಗ್ರಾಮದ ಸರ್ವೆ ನಂ 13/1, 13/2 ಮತ್ತು 13/3 ಗಳ ಜಮೀನು ವಿವಾದವು ಮಾನ್ಯ ಉಚ್ಚನ್ಯಾಯಾಲಯದಲ್ಲಿ ತೀರ್ಪಿಗೆ ಬಾಕಿ ಇರುವ ಹಿನ್ನೆಲೆಯಲ್ಲಿ ಸದರಿ ಪ್ರಕರಣದ ಪಾರ್ಟಿದಾರರು ಮತ್ತು ಎದುರುದಾರರನ್ನು ಕರೆದು ಶಾಂತಿ ಸಭೆಯನ್ನು ಮಾಡಲಾಗಿದೆ. ಮಾನ್ಯ ಹೈಕೋರ್ಟ್ ತೀರ್ಪನ್ನು ಆದರಿಸಿ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲಿಯವರೆಗೆ ಯಥಾಸ್ಥಿತಿ ಕಾಪಾಡಿಕೊಂಡು ಶಾಂತಿ ಸುವ್ಯವಸ್ಥೆಗೆ ಯಾರು ಭಂಗವಾಗದಂತೆ ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಉಪ ವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್, ಚಿಂತಾಮಣಿ ತಹಸಿಲ್ದಾರ್ ಸುದರ್ಶನ್ ಯಾದವ್ ಸೇರಿದಂತೆ ಮುಂತಾದವರು ಇದ್ದರು.



# ಸಹಜ ಬೇಸಾಯದ ಆಶಯ ಅನ್ನದಾತನ ಅಭ್ಯುದಯ



**ಹುಳಿಯಾರು:** ಇಡೀ ರಾಜ್ಯದಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಜಾರಿ ಆಗುತ್ತಿರುವ ಸಹಜ ಬೇಸಾಯದ ಆಶಯ ಅನ್ನದಾತ ರೈತನ ಅಭ್ಯುದಯ ಎಂದು ಗಾಂಧಿ ಬೇಸಾಯ ಆಶ್ರಮದ ಸಂಪನ್ಮೂಲ ವ್ಯಕ್ತಿ ರಾಮಕೃಷ್ಣಪ್ಪ ತಿಳಿಸಿದರು.

ಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ನಡೆದ ಬೇಸಾಯಗಾರರ ಸಭೆಯಲ್ಲಿ ಅವರು ಮಾತನಾಡಿದರು. ಇಂದಿನ ಬೇಸಾಯದಲ್ಲಿ ಬೀಜ, ಗೊಬ್ಬರ, ಔಷಧಿ ಎಲ್ಲವನ್ನು ಅಂಗಡಿಯಿಂದ ತರಬೇಕು. ಉಳುಮೆ ಕೊಯ್ಲು, ಸಾಗಾಣಿಕೆ ಇತ್ಯಾದಿ ಎಲ್ಲಾದಕ್ಕೂ ಟ್ರ್ಯಾಕ್ಟರ್ ಟೆಂಪೋಗಳನ್ನು ರೈತರು ಬಳಸಬೇಕಾಗಿದೆ. ಆದರೆ ಹಿಂದಿನ ಬೇಸಾಯ ಪದ್ಧತಿಯಲ್ಲಿ ಬೀಜ, ಗೊಬ್ಬರ ವನ್ನು ಸ್ಥಳೀಯವಾಗಿ ಉತ್ಪತ್ತಿ ಮಾಡಲಾಗುತ್ತಿತ್ತು. ಉಳುಮೆ, ಕಟಾವಣೆ, ಸಾಗಾಣಿಕೆ ಮುಂತಾದ ಕೃಷಿ ಕೆಲಸಗಳು ಎಲ್ಲವೂ ಶ್ರಮ ಸಂಸ್ಕೃತಿಯಿಂದ ನಡೆಯುತ್ತಿದ್ದವು.

ಇದೇ ಮಾದರಿಯಲ್ಲಿ ನಮ್ಮ ಮುಂದೆ ಜಾರಿ ಆಗುತ್ತಿರುವ ಸಹಜ ಬೇಸಾಯವು ರೂಪುಗೊಂಡಿದೆ. ಅಂದರೆ ರೈತನ ಸ್ವಾವಲಂಬಿಯಾಗಬೇಕು, ಆದಾಯವನ್ನು ಹೆಚ್ಚಿಸಿ ಕೊಳ್ಳಬೇಕು, ಆರೋಗ್ಯವನ್ನು ಪಡೆಯಬೇಕು ಮತ್ತು ಸುಸ್ಥಿರತೆಯನ್ನು ಸಾಧಿಸಬೇಕು ಒಟ್ಟಿನಲ್ಲಿ ರೈತರು ಒಳ್ಳೆಯ ದಿನಗಳನ್ನು ಕಾಣುವಂತಾಗಬೇಕು ಎಂದು ಹೇಳಿದರು.

ಗಾಂಧಿ ಬೇಸಾಯ ಶಾಲೆಯ ಸಂಪನ್ಮೂಲ ವ್ಯಕ್ತಿ ಹಾಗೂ ಸ್ವಯಂ ಸಹಜ ಬೇಸಾಯಗಾರರಾದ ಎನ್. ಇಂದಿರಮ್ಮ ನವರು ರೈತರೊಂದಿಗೆ ಸಂವಾದವನ್ನು ಆರಂಭಿಸಿ, ಪ್ರತಿಯೊಬ್ಬ ರೈತರು ಈ ಕಾರ್ಯಕ್ರಮ ವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿ, ಸಹಜ ಬೇಸಾಯದ ಸ್ವರೂಪ ವನ್ನು ವಿವರಿಸಿದರು.

ಪಿಡಿಒ ಶಿವಕುಮಾರ್ ಅವರು ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಗ್ರಾಪಂ ಅಧ್ಯಕ್ಷ ಗಂಗಾಧರಯ್ಯ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಸುಮ, ಪಂಚಾಯತಿ ಕಾರ್ಯದರ್ಶಿ ಕವಿತಾ, ಕೃಷಿ ಸಖಿ ಕೀರ್ತನಾ, ಕಾಯಕ ಮಿತ್ರ ಶ್ರುತಿ, ಪಂಚಾಯಿತಿ ಸಿಬ್ಬಂದಿ ಮತ್ತು ಸಹಜ ಬೇಸಾಯದ ಮಾಹಿತಿ ಪಡೆಯಲು ಬಂದಿದ್ದ ರೈತರು ಉಪಸ್ಥಿತರಿದ್ದರು.

# ಜೋಗ್ ಫಾಲ್ಸ್ ಅಂತಾರಾಷ್ಟ್ರೀಯ ಮಟ್ಟದ ಪ್ರವಾಸಿ ತಾಣವಾಗಬೇಕು

**ಶಿವಮೊಗ್ಗ:** ಜಿಲ್ಲೆಯ ಜೋಗ ಜಲಪಾತ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರವಾಸೋದ್ಯಮ ತಾಣ ಆಗಬೇಕು ಎಂದು ಸಂಸದ ಬಿ.ವೈ ರಾಘವೇಂದ್ರ, ಹೇಳಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲೆನಾಡಿನ ಪ್ರಕೃತಿ ಕೊಟ್ಟ ಪ್ರವಾಸೋದ್ಯಮ ಸ್ಥಳ ಜೋಗ ಜಲಪಾತ. ಇಲ್ಲಿ ಪ್ರವಾಸಿಗರಿಗಾಗಿ ಹೋಟೆಲ್ ನಿರ್ಮಾಣಕ್ಕೆ ಅನುಮತಿ ಸಿಕ್ಕಿದೆ. ಆದರೆ ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ ಎಂದು ಆರೋಪಿಸಿದ್ದಾರೆ. ಅಭಿವೃದ್ದಿ ಬಗ್ಗೆ ಅನೇಕ ಸರ್ಕಾರಗಳು ಭಾಷಣ ಮಾಡಿಕೊಂಡು ಬರುತ್ತಿವೆ. ಜೋಗ ಅಭಿವೃದ್ದಿಗೆ ಯಡಿಯೂರಪ್ಪ ಸಾಕಷ್ಟು ಅನುದಾನ ಕೊಟ್ಟು, ಸಾಕಷ್ಟು ಅಭಿವೃದ್ಧಿಯಾಗುತ್ತಿದೆ. ಹೋಟೆಲ್ ನಿರ್ಮಾಣ ಮಾಡಲು ಅನುಮತಿ ಸಿಕ್ಕಿದೆ. ಹೊರಗಡೆಯಿಂದ ಬರುವ ಪ್ರವಾಸಿಗರಿಗೆ ಹೋಟೆಲ್ ಅವಶ್ಯಕತೆ ಇತ್ತು. ಆದಷ್ಟು ಬೇಗ ಕಾಮಗಾರಿ ಮುಗಿಯಬೇಕು. ಶಿವಮೊಗ್ಗ ಸಮಗ್ರ ಪ್ರವಾಸಿ ತಾಣವಾಗಬೇಕು ಎಂದಿದ್ದಾರೆ. ಪ್ರವಾಸಿಗರು ಬಂದಾಗ ಎಲ್ಲಾ ರೀತಿಯ ಸೌಲಭ್ಯಗಳು ಇಲ್ಲಿ ಸಿಗಬೇಕು. ನೋವಿನ ಸಂಗತಿ ಎಂದರೆ ಪ್ರವಾಸೋದ್ಯಮ ಇಲಾಖೆ ಸಕ್ರೆಬೈಲು ಅಭಿವೃದ್ಧಿಯ 60 ಕೋಟಿ ರೂ. ಹಣ ವಾಪಸ್ ಪಡೆದಿದೆ. ಜೋಗದ ಅಭಿವೃದ್ದಿಗೆ 180 ಕೋಟಿ ರೂ. ಹಣ ಹಿಂದಿನ ಸರ್ಕಾರ ಬಿಡುಗಡೆ ಮಾಡಿತ್ತು. ಈಗ ಕೇವಲ 80 ಕೋಟಿ ರೂ. ಮಾತ್ರ ಹಣ ಬಿಡುಗಡೆ ಮಾಡಿದ್ದಾರೆ. 100 ಕೋಟಿ ರೂ. ಬಿಡುಗಡೆ ಆಗಬೇಕಿದೆ. ಅಲ್ಲಮಪ್ರಭು ಜನ್ಮಸ್ಥಳ, ಚಂದ್ರಗುತ್ತಿ ಅಭಿವೃದ್ಧಿ ಹಣ ಹಿಂಪಡೆದಿದ್ದಾರೆ. ಪ್ರವಾಸೋದ್ಯಮ ಸಚಿವರಿಗೆ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡುತ್ತೇನೆ ಎಂದಿದ್ದಾರೆ. ಕಳಸವಳ್ಳಿ - ಸಿಗಂದೂರು ಸೇತುವೆ ಆಗುತ್ತಿದೆ. ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಈಗ ನಷ್ಟ ಆಗಬಹುದು ಆದರೆ ಮುಂದೆ ಲಾಭ ಬರುತ್ತದೆ. ವಿಮಾನ ನಿಲ್ದಾಣದಿಂದ ಹೆಚ್ಚಿನ ವಿಮಾನ ಹಾರಾಟ ಮಾಡುತ್ತಿವೆ. ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಿದರೆ 2-3 ವರ್ಷದಲ್ಲೇ ಸರ್ಕಾರಕ್ಕೆ ಹಣ ವಾಪಸ್ ಬರಲಿದೆ ಎಂದಿದ್ದಾರೆ.



## ಬೆಂಬಲ ವ್ಯಕ್ತಿಗಳಿಗಾಗಿ ಅರ್ಜಿ

**ಮೈಸೂರು:** 2012 ರ ಪೋಕ್ಸೋ ಕಾಯಿದೆಯ ಅನ್ವಯ ಸಂತ್ರಸ್ತ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಾಗಿ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಕನಿಷ್ಠ 03 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು. ಪ್ರತಿ ಪ್ರಕರಣಕ್ಕೆ ರೂ.3000 ಗಳ ಸಂಭಾವನೆ ನಿಗದಿಗೊಳಿಸಲಾಗಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ಮಾಡಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿಯನ್ನು ನೀಡಲಾಗುತ್ತದೆ. ಮಕ್ಕಳ ಆರೈಕೆ ಕೇಂದ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮತ್ತು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವ ಯಾವುದೇ ಸಂಸ್ಥೆ ಕೂಡ ಅರ್ಜಿ ಸಲ್ಲಿಸಬಹುದು. ಆಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯವರ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಪ್ರಮಾಣ ಪತ್ರಗಳೊಂದಿಗೆ ವಿಜಯನಗರ 4ನೇ ಹಂತದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿಗೆ ನವೆಂಬರ್ 28 ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ.ಸಂ:0821-2543003 ಮತ್ತು ಇ-ಮೇಲ್ dcpumysore@gmail.com ನ್ನು ಸಂಪರ್ಕಿಸಬಹದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** 2024-25ನೇ ಸಾಲಿನ ಆಯವ್ಯಯ ಭಾಷಣದಕಂಡಿಕೆ (176)ರಲ್ಲಿ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್‌ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ. 25,000/-ಗಳಂತೆ ಶಿಷ್ಯವೇತನ ನೀಡಲಾಗುವುದೆಂದು ಘೋಷಿಸಲಾಗಿರುತ್ತದೆ. ಆದುದರಿಂದ ಪೋಸ್ಟ್‌ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ.25,000/-ಗಳಂತೆ ಶಿಷ್ಯವೇತನ ನೀಡುವುದಕ್ಕೆಅರ್ಜಿಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಡಿಸೆಂಬರ್ 14 ರೊಳಗೆ ಸಮಾಜಕಲ್ಯಾಣಇಲಾಖೆಯಲ್ಲಿಅರ್ಜಿ ನಮೂನೆಯನ್ನು ಪಡೆದುಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಸಮಾಜಕಲ್ಯಾಣ ಇಲಾಖೆ ಉಪ ನಿರ್ದೇಶಕರು ಹಾಗೂ ತಾಲ್ಲೂಕುಗಳ ಸಹಾಯಕ ನಿರ್ದೇಶಕರಕಚೇರಿಯನ್ನು ಸಂಪರ್ಕಿಸತಕ್ಕದ್ದುಎಂದು ಮಂಡ್ಯ ಸಮಾಜಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಮೈಸೂರು:** ಬೋಗಾದಿ ಪಟ್ಟಣ ಪಂಚಾಯಿತಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಡೇ ನಲ್ಮ್ ಯೋಜನೆಯ ವತಿಯಿಂತ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ (ಪಿ.ಎಂ.ಸ್ವನಿಧಿ) ಯೋಜನೆಯಡಿ ಬ್ಯಾಂಕ್ ಮೂಲಕ ಸಾಲ ಸೌಲಭ್ಯ ಪಡೆಯಲು ಅರ್ಜಿ ಅಹ್ವಾನಿಸಲಾಗಿದೆ. ಅರ್ಹ ಬೀದಿ ಬದಿ ವ್ಯಾಪಾರಿಗಳು ಹತ್ತಿರದ ಸಿ.ಎಸ್.ಸಿ ಕಂಪ್ಯೂಟರ್ ಕೇಂದ್ರಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯಿತಿಯ ಸಂಬಂದಿಸಿದ ಶಾಖೆಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಹಾಗೂ ಕಚೇರಿಯ ಮೊ.ಸಂ:0821-2331099 ಅಥವಾ ಸಹಾಯವಾಣಿ:080-23108108 ನ್ನು ಸಂಪರ್ಕಿಸಬಹುದು ಎಂದು ಬೋಗಾದಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಂಡವೇಶ್ವರಸ್ವಾಮಿಗೆ ವಿಶೇಷ ಹೂವಿನ ಅಲಂಕಾರ

**ಮಂಡ್ಯ:** ತಾಲೂಕು ಹೊಳಲು ಗ್ರಾಮದ ಶ್ರೀ ತಾಂಡವೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಮೂರನೇ ಕಾರ್ತಿಕ ಸೋಮವಾರ ಪ್ರಯುಕ್ತ ತಾಂಡವೇಶ್ವರಸ್ವಾಮಿಗೆ ವಿಶೇಷವಾಗಿ ಹೂವಿನ ಅಲಂಕಾರ ಮಾಡಿ. ಬೆಳಗ್ಗೆಯಿಂದ ಕ್ಷೀರಾಭಿಷೇಕ, ರುದ್ರಾಭಿಷೇಕ, ಹಾಗೂ ದೇವಸ್ಥಾನದ ಹೊರಗಡೆ ಶ್ರೀ ತಾಂಡವೇಶ್ವರ ಮೂರ್ತಿಗೆ ಕುಂಕುಮಾರ್ಚನೆ ಮಾಡಿ ಪೂಜೆ ನೆರವೇರಿಸಲಾಯಿತು. ದೇವಸ್ಥಾನಕ್ಕೆ ಬಂದ ಭಕ್ತಾದಿಗಳು ತಮ್ಮ ಕುಟುಂಬಕ್ಕೆ ಒಳ್ಳೆಯದಾಗಲೆಂದು ದೇವರಿಗೆ ಮಹಿಳೆಯರು ಮಣ್ಣಿನ ಹಣತೆ ಇಟ್ಟು ಆರತಿ ಬೆಳಗಿಸಿ ಪೂಜೆ ನೆರವೇರಿಸಿದರು.



ಈ ಸಂದರ್ಭದಲ್ಲಿ ಬೀರೇಗೌಡನಹಳ್ಳಿಯ ಬಿ .ಸಿ. ನಿಂಗರಾಜು ಬಿನ್ ಚಿಕ್ಕಯ್ಯರವರ ಕುಟುಂಬದ ವತಿಯಿಂದ ಅನ್ನದಾಸೋಹ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಹೊಳಲು ಗ್ರಾಮದ ಮಾತೃಶ್ರೀ ಸ್ವಾಮಿಯಾನದ ಎಚ್. ಎಲ್. ಶಂಕರ್ ಅವರು ಪ್ರತಿ ಕಾರ್ತಿಕ ಸೋಮವಾರ ಅನ್ನದಾಸೋಹ ಕಾರ್ಯಕ್ರಮಕ್ಕೆ ಉಚಿತವಾಗಿ ಪಾತ್ರೆಗಳನ್ನು ನೀಡಿರುತ್ತಾರೆ. ಈ ಸಂದರ್ಭದಲ್ಲಿ ಮಂಡ್ಯ ತಹಸಿಲ್ದಾರ್ ಮತ್ತು ಕುಟುಂಬದವರು ದೇವರ ಪೂಜೆಯನ್ನು ನೆರವೇರಿಸಿದರು ಶ್ರೀ ತಾಂಡವಶ್ವರ ದೇವಾಲಯದ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಎಚ್ .ಎಸ್ .ಮೋಹನ್ ಕುಮಾರ್, ಉಪಾಧ್ಯಕ್ಷರಾದ ಹೆಚ್. ಬಿ.ದೊಡ್ಡೇಗೌಡ, ಕಾರ್ಯದರ್ಶಿ ಎಸ್. ಕೃಷ್ಣ, ಹಾಗೂ ಸದಸ್ಯರುಗಳಾದ ಚಿಕ್ಕೇಗೌಡ , ಶಿವಣ್ಣ , ಶಿವಲಿಂಗಯ್ಯ, ಅನುಸೂಯ, ದೇವಸ್ಥಾನದ ಪ್ರಧಾನ ಅರ್ಚಕರಾದ ವಿಶ್ವನಾಥ್ ದೀಕ್ಷಿತ್, ಪ್ರದೀಪ್ ದೀಕ್ಷಿತ್, ಮನು ದೀಕ್ಷಿತ್ , ಹಾಗೂ ಅಕ್ಕ ಪಕ್ಕದ ಗ್ರಾಮಸ್ಥರು ಉಪಸ್ಥಿತರಿದ್ದರು.

### ಜಿಲ್ಲಾಧಿಕಾರಿಗಳ ನಿವಾಸದಲ್ಲಿ ಭದ್ರತೆಯ ಕೊರತೆ

# ಶ್ರೀಗಂಧ ಮರ ಕಳ್ಳತನಕ್ಕೆ ವಿಫಲಯತ್ನ..!

**ಚಾಮರಾಜನಗರ :** ಜಿಲ್ಲಾಧಿಕಾರಿಗಳ ನಿವಾಸದಲ್ಲಿ ಭದ್ರತೆಯ ಕೊರತೆಯಿಂದಾಗಿ ಉದ್ಯಾನವನದಲ್ಲಿದ್ದ ಶ್ರೀಗಂಧ ಮರಗಳನ್ನು ಕಳವು ಮಾಡಲು ಕಳ್ಳರು ವಿಫಲ ಯತ್ನಿಸಿದ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಚಾಮರಾಜನಗರದ ನ್ಯಾಯಾಲಯ ರಸ್ತೆಯಲ್ಲಿರುವ ಜಿಲ್ಲಾಧಿಕಾರಿ ವಸತಿ ಗೃಹದ ಉದ್ಯಾನವನದಲ್ಲಿ ಶ್ರೀಗಂಧದ ಮರಗಳನ್ನು ಕಳ್ಳತನ ಮಾಡುವ ಯತ್ನ ನಡೆದಿದ್ದು, ಈ ಬಗ್ಗೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಎಫ್ ಐ ಆರ್ ದಾಖಲು ಮಾಡಲಾಗಿದೆ.

ಜಿಲ್ಲಾಧಿಕಾರಿ ಶಿಲ್ಪಾನಾಗ್ ರವರ ವಸತಿ ಗೃಹದ ಗಾರ್ಡನ್ನಲ್ಲಿ ಬೆಳೆದಿರುವ 4 ಶ್ರೀಗಂಧದ ಮರಗಳನ್ನು ಕಳೆದ ಏಳೆಂಟು ದಿನಗಳ ಹಿಂದೆ ಕದಿಯಲು ಪ್ರಯತ್ನ ನಡೆದಿರುವುದು ತಡವಾಗಿ ಬೆಳಕಿಗೆ ಬಂದಿದೆ.

ಕಳ್ಳರು ಜಿಲ್ಲಾಧಿಕಾರಿ ಮನೆಯ ಗಾರ್ಡನ್ಗೆ ಬಂದು ಶ್ರೀಗಂಧದ ಮರಗಳ ಕಳ್ಳತನಕ್ಕೆ ಯತ್ನ ನಡೆದಿರುವುದು ಸಾರ್ವಜನಿಕರಲ್ಲಿ ಆಂತಕ ಮೂಡಿಸಿದೆ. ಜಿಲ್ಲಾಧಿಕಾರಿಗಳ ನಿವಾಸದಲ್ಲೇ ರಕ್ಷಣೆ ಇಲ್ಲದಿದ್ದ ಮೇಲೆ ಇನ್ನು



ಅರಣ್ಯದ ಯಾವುದೋ ಮೂಲೆಯಲ್ಲೋ ಅಥವಾ ಜಮೀನಿನೊಳಗೋ ಶ್ರೀಗಂಧದ ಮರಗಳಿಗೆ ರಕ್ಷಣೆ ಇದೆಯೇ ಎನ್ನುವ ಪ್ರಶ್ನೆ ಮೂಡುತ್ತಿದೆ.

ಜಿಲ್ಲಾಧಿಕಾರಿ ಮನೆ ಆವರಣದಲ್ಲಿ ಬೆಳೆದಿರುವ 4 ಶ್ರೀಗಂಧದ ಮರಗಳನ್ನು ಕೊಯ್ದು ಕಳ್ಳತನ ಮಾಡುವ ಯತ್ನ ನಡೆದಿದೆ. ಈ ಬಗ್ಗೆ ವಸತಿ ಗೃಹದಲ್ಲಿ ಅಟೆಂಡರ್ ಆಗಿರುವ ಚಿನ್ನಸ್ವಾಮಿ ರವರು ಜಿಲ್ಲಾಧಿಕಾರಿಗಳ ಸೂಚನೆಯಂತೆ ನ.12ರಂದು ಪಟ್ಟಣ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ. ಚಿನ್ನಸ್ವಾಮಿ 17 ವರ್ಷಗಳಿಂದ ಜಿಲ್ಲಾಧಿಕಾರಿಗಳ ವಸತಿ ಗೃಹದಲ್ಲಿ ಅಟೆಂಡರ್ ಆಗಿ ಕೆಲಸ ಮಾಡುತ್ತಿದ್ದು, ಮಲ್ಲಿಕಾರ್ಜುನ ಮತ್ತು ರೇವಣ್ಣ ಗಾರ್ಡನ್ ನಿರ್ವಹಣೆ ಮಾಡುತ್ತಿದ್ದಾರೆ. ನ.11ರಂದು ಮಧ್ಯಾಹ್ನ ಸುಮಾರು 3 ಗಂಟೆ ಸಮಯಲ್ಲಿ ಗಾರ್ಡನ್ ನಿರ್ವಹಣೆ ಮಾಡುತ್ತಿದ್ದ ಮಲ್ಲಿಕಾರ್ಜುನ ಮತ್ತು ರೇವಣ್ಣ ಚಿನ್ನಸ್ವಾಮಿ ರವರ ಬಳಿಗೆ ಬಂದು ವಸತಿ ಗೃಹದ ಸುತ್ತಮುತ್ತ ಬೆಳೆದಿರುವ 4 ಶ್ರೀಗಂಧದ ಮರಗಳನ್ನು ಯಾರೋ ಕೊಯ್ದು ಕಳ್ಳತನಕ್ಕೆ ಯತ್ನಿಸಿದ್ದಾರೆ ಎಂದು ತಿಳಿಸಿದರು. ಕೂಡಲೇ ತಾನೂ ಸಹ ಹೋಗಿ ನೋಡಿದೆ. ವಸತಿ ಗೃಹದ ಪಶ್ಚಿಮ ಭಾಗದ ಕಾಂಪೌಂಡ್ ಬಳಿ ಇರುವ 3 ಶ್ರೀಗಂಧದ ಮರಗಳನ್ನು ಸ್ವಲ್ಪ ಸ್ವಲ್ಪ ಕೊಯ್ದಿದ್ದು, ಅಗ್ನಿಯ ಮೂಲೆಯಲ್ಲಿ ಕಾಂಪೌಂಡ್ ಹತ್ತಿರ ಬೆಳೆದಿರುವ 1 ಶ್ರೀಗಂಧದ ಮರವನ್ನು ಸ್ವಲ್ಪ ಕೊಯ್ದು ಅಲ್ಲೇ ಬಿಟ್ಟು ಹೋಗಿದ್ದಾರೆ. ಈ ವಿಚಾರವನ್ನು ಜಿಲ್ಲಾಧಿಕಾರಿ ಅವರ ಗಮನಕ್ಕೆ ತರಲಾಯಿತು. ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ದೂರು ನೀಡುತ್ತಿದ್ದೇನೆ. ನ.10ರಂದು ರಾತ್ರಿ ಶ್ರೀಗಂಧದ ಮರಗಳ ಕಳ್ಳತನಕ್ಕೆ ಯತ್ನ ನಡೆದಿದೆ. ಕಳ್ಳರ ಪತ್ತೆಗೆ ಕಾನೂನು ಕ್ರಮ ಜರುಗಿಸಲು ಕೋರಿದ್ದಾರೆ.

## ಕನಕದಾಸರ ಜಯಂತೋತ್ಸವ

**ಹೊಸಕೋಟೆ:** ಕನಕದಾಸರು ಸುಮಾರು 15- 16ನೇ ಶತಮಾನದಲ್ಲಿ ಕರ್ನಾಟಕದಲ್ಲಿ ಜನಪ್ರಿಯವಾಗಿದ್ದ ಭಕ್ತಿ ಪಂಥದ ಮುಖ್ಯ ಹರಿದಾಸರಲ್ಲಿ ಒಬ್ಬರಾಗಿದ್ದಾರು. ಎಂದು ರೈನ್ ಬೋ ಇನ್ನೊವೇಟ್ ಅಕಾಡೆಮಿ ಶಾಲೆ ಮತ್ತು ರೈನ್ ಬೋ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಸಂಸ್ಥಾಪಕರಾದ ವರಲಕ್ಷ್ಮಿ.ಬಿ.ಎಸ್. ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆಯ ರೈನ್ ಬೋ ಇನ್ನೊವೇಟ್ ಅಕಾಡೆಮಿ ಶಾಲೆ ಬೂದಿಗೆರೆ ಕ್ರಾಸ್ ಇಲ್ಲಿ ಹಮ್ಮಿಕೊಂಡಿದ್ದ ಕನಕದಾಸರ ಜಯಂತೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನಕದಾಸರು ವ್ಯಾಸರಾಯರ ಅಚ್ಚುಮೆಚ್ಚಿನ ಶಿಷ್ಯರಾಗಿದ್ದರು. ಅವರಿಂದಲೇ ಮಧ್ವತತ್ವಶಾಸ್ತ್ರವನ್ನ ಕಲಿತರು. ಒಂದು ಸಲ ವ್ಯಾಸರಾಯರ ಜೊತೆ ಉಡುಪಿ ಶ್ರೀಕೃಷ್ಣನ ಮಠಕ್ಕೆ ಆಗಮಿಸಿದ್ದರು. ಆದರೆ ಅವರು ಕೆಳಜಾತಿಯವರು ಎಂಬ ಕಾರಣಕ್ಕೆ ದೇಗುಲದ ಒಳಗೆ ಪ್ರವೇಶ ಸಿಗಲಿಲ್ಲ. ಕನಕದಾಸರು ಅಲ್ಲೇ ದೇಗುಲದ ಹಿಂದೆ ನಿಂತು ಶ್ರೀಕೃಷ್ಣನ ಪ್ರಾರ್ಥನೆಯಲ್ಲಿ ತೊಡಗಿದ್ದರು. ಆಗ ಸಾಕ್ಷಾತ್ ಕೃಷ್ಣ ದೇಗುಲದ ಹಿಂದಿನ ಗೋಡೆ ಒಡೆದು ಕನಕದಾಸರಿಗೆ ದರ್ಶನ ನೀಡಿದ್ದರು. ಅದನ್ನು ಇಂದಿಗೂ ಕನಕನ ಕಿಂಡಿ ಎಂದೇ ಕರೆಯಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಚಿತವಾಗಿ ಆರೋಗ್ಯ ಶಿಬಿರವನ್ನು ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಡಾಕ್ಟರ್. ವಿನಯ್ ಕುಮಾರ್, ಪ್ರೋಟೀಸ್ ಆಸ್ಪತ್ರೆ, ಡಾಕ್ಟರ್. ಸೇವಂತಿ ನ್ಯೂರೋ ಕೇರ್ ನಾಗರಬಾವಿ, ಓ ಆರ್ ಡಬ್ಲ್ಯೂ ಆನಂದ್ ಮತ್ತು ಮ್ಯಾಥ್ಯೂ ಇವರು ಆರೋಗ್ಯ ಶಿಬಿರದಲ್ಲಿ ಪಾಲ್ಗೊಂಡು ಅನೇಕ ಮಾಹಿತಿಯನ್ನು ಹಂಚಿಕೊಂಡು ಆರೋಗ್ಯ ತಪಾಸಣೆ ಮಾಡಿದರು.

### ಜಲಾಶಯದ ಸುತ್ತಮುತ್ತ ಭಯದಲ್ಲಿ ಜನತೆ

# ಬೋರನಕಣಿವೆ ಬಳಿ ಚಿರತೆ ಕಾಟ

**ಹುಳಿಯಾರು:** ಹುಳಿಯಾರು ಸಮೀಪದ ಬೋರನಕಣಿವೆ ಸುತ್ತಮುತ್ತ ಚಿರತೆಯೊಂದು ಓಡಾಡುತ್ತಿದ್ದು ಆಗಾಗ ಕುರಿ, ನಾಯಿ, ದನಗಳ ಮೇಲೆ ದಾಳಿ ನಡೆಸುತ್ತಿರುವುದು ಈ ಭಾಗದ ಜನರಲ್ಲಿ ಭಯದ ವಾತಾವರಣ ಸೃಷ್ಟಿಸಿದ್ದು, ಚಿರತೆಯನ್ನು ಸೆರೆ ಹಿಡಿಯುಲು ಅರಣ್ಯ ಇಲಾಖೆ ಮುಂದಾಗುವಂತೆ ಸಾರ್ವಜನಿಕರು ಮನವಿ ಮಾಡಿದ್ದಾರೆ.

ಹುಳಿಯಾರು ಹೋಬಳಿ ವ್ಯಾಪ್ತಿಯ ದಸೂಡಿ, ಗಾಣಧಾಳು, ಹೊಯ್ಸಳಕಟ್ಟೆ ಗ್ರಾಮ ಪಂಚಾಯಿತಿಯ ಕೆಲ ಗ್ರಾಮಗಳಲ್ಲಿ ಕಳೆದ ಎರಡ್ಮೂರು ವಾರಗಳಿಂದ ಚಿರತೆ ಕಾಟ ಹೆಚ್ಚಿದೆ. ಕುರಿರೊಪ್ಪ ಹಾಗೂ ಮನೆ ಹಿಂದೆ, ಮುಂದೆ ಕಟ್ಟಿ ಹಾಕಿರುವ ದನಕರುಗಳ ಮೇಲೆ ದಾಳಿ ನಡೆಸಿರುವ ಬಗ್ಗೆ ವರದಿಯಾಗಿದೆ.

ಬೆಂಚಿಹಟ್ಟಿ ಸಮೀಪದ ಕುರಿರೊಪ್ಪಕ್ಕೆ ನುಗ್ಗಿದ ಚಿರತೆ ಕುರಿ ಹಿಡಿಯಲು ಮುಂದಾದಾಗ ಕುರಿಗಳನ್ನು ಕೂಡಲು ಮಾಡಿದ್ದ ಬಲೆಯ ಗೂಡಿಗೆ ಬಿದ್ದಿದೆ. ಬಲೆಯ ಗೂಡಿನ ಬಾಗಿಲು ಭದ್ರಪಡಿಸಲು ಹೋದ ಕುರಿಗಾಹಿಯೊಬ್ಬರ ಮುಖ ಹಾಗೂ ಕೈಗಳಿಗೆ ಪರಚಿ ಗಾಯಗೊಳಿಸಿ ಪರಾರಿಯಾದ ಘಟನೆ ಸಹ ನಡೆದಿದೆ. ರಂಗನಕೆರೆ ಗ್ರಾಮದಲ್ಲಿ ಮನೆ ಮುಂದೆ ಕಟ್ಟಿದ್ದ ನಾಯಿಯನ್ನು ಹೊತ್ತೊಯ್ದಿತ್ತು. ಅಲ್ಲದೆ ಕುರಿಹಟ್ಟಿ ಅರಣ್ಯ ಪ್ರದೇಶದಲ್ಲಿ ಕುರಿಯನ್ನು ಹೊತ್ತೊಯ್ದು ತಿಂದು ಹಾಕಿತ್ತು. ಅಲ್ಲಲ್ಲಿ ಜಮೀನು ತೋಟಗಳಲ್ಲಿ ಓಡಾಡಿದ ಹೆಜ್ಜೆ ಗುರುತು ಸಹ ಪತ್ತೆಯಾಗುತ್ತಿವೆ.

ಶನಿವಾರ ಬೋರನಕಣಿವೆ ಜಲಾಶಯದ ಬಳಿ ಕುಳಿತಿದ್ದು ಕುರಿಗಾಹಿಗಳು ಫೋಟೋ ತೆಗೆದಿದ್ದಾರೆ. ಇಲ್ಲಿ ಸುತ್ತಮುತ್ತಲ ಹಳ್ಳಿಗಳ ಕುರಿಗಾರರು ತಮ್ಮ ನೂರಾರು ಕುರಿಗಳನ್ನು ಮೇಯಿಸಲು ಬರುತ್ತಾರೆ. ಸುಮಾರು ವರ್ಷಗಳಿಂದ ನೆಮ್ಮದಿಯಿಂದ ಕುರಿ ಮೇಯಿಸುತ್ತಿದ್ದ ಕುರಿಗಾರರಿಗೆ ಚಿರತೆಯೊಂದು ಪ್ರತ್ಯಕ್ಷವಾಗಿ ನೆಮ್ಮದಿ ಕೆಡಿಸಿದೆ. ಹಗಲಿನಲ್ಲೇ ಚಿರತೆ ಓಡಾಡುತ್ತಿರುವುದು ಬೋರನಕಣಿವೆ ಗುಡ್ಡಕ್ಕೆ ಕುರಿ ದನ ಮೇಯಿಸಲು ಬರಲು ಹೆದರುತ್ತಿದ್ದಾರೆ.

ಅಲ್ಲದೆ ದಸೂಡಿ, ಗಾಣಧಾಳು, ಹೊಯ್ಸಲಕಟ್ಟೆ ಗ್ರಾಮ ಪಂಚಾಯ್ತಿಗಳಿಗೆ ಸರ್ಕಾರಿ ಬಸ್ ವ್ಯವಸ್ಥೆ ಇಲ್ಲವಾಗಿದ್ದು ಇಲ್ಲಿನ ಜನರು ಪ್ರಯಾಣಕ್ಕೆ ದ್ವಿಚಕ್ರ ಮತ್ತು ಆಟೋ ಅವಲಂಬಿಸಿದ್ದಾರೆ. ಹುಳಿಯಾರು, ಶಿರಾದಿಂದ ಕೆಲಸಕಾರ್ಯ ಮುಗಿಸಿ ರಾತ್ರಿ ಬರುವ ಜನರು ಚಿರತೆಯಿಂದ ಅಂಗೈಯಲ್ಲಿ ಜೀವ ಹಿಡಿದುಕೊಂಡು ಓಡಾಡುತ್ತಿದ್ದಾರೆ. ಅಲ್ಲದೆ ರಾತ್ರಿ ಸಮಯದಲ್ಲಿ ಜನ ಮನೆಯಿಂದ ಹೊರಬರಲು ಭಯಪಡುತ್ತಿದ್ದಾರೆ.

ಆಲಾಶಯದ ಪಕ್ಕದಲ್ಲೇ ರಾಷ್ಟ್ರೀಯ ಹೆದ್ದಾರಿ ಹಾದು ಹೋಗಿದ್ದು ದ್ವಿಚಕ್ರ ವಾಹನ ಸವಾರರ ಮೇಲೆ ದಾಳಿ ಮಾಡುವ ಆತಂಕ ಸಹ ಕಾಡುತ್ತಿದೆ.

ಇತ್ತೀಚಿನ ದಿನಗಳಲ್ಲಿ ಚಿರತೆ ಪ್ರತ್ಯಕ್ಷ ವಾಗುತ್ತಿರುವುದು ಹಾಗೂ ಮೇಯಲು ಹೋದ ಕುರಿಗಳ ಮೇಲೆ ದಾಳಿ ಮಾಡುತ್ತಿರುವ ಕಾರಣ ಈ ಭಾಗದ ಜನರು ಭಯದಲ್ಲಿಯೇ ಕಾಲ ಕಳೆಯುವಂತಾಗಿದೆ. ಯಾವ ಸಮಯದಲ್ಲಿ ಚಿರತೆ ಎಲ್ಲಿ ದಾಳಿ ಮಾಡುತ್ತದೋ ಎಂಬ ಭಯವೂ ಜನರನ್ನು ಕಾಡುತ್ತಿದೆ. ಹಾಗಾಗಿ ಅರಣ್ಯ ಇಲಾಖೆಯವರು ತಕ್ಷಣ ಬೋನ್ ಇಟ್ಟು ಚಿರತೆ ಹಿಡಿದು ಜನರು ನೆಮ್ಮದಿಯಿಂದ ಇರುವಂತೆ ಮಾಡಬೇಕಿದೆ.



### ಆತಂಕ ನಿವಾರಿಸಿ



**ಬೋರನಕಣಿವೆ ಜಲಾಶಯದ ಬಳಿ ಚಿರತೆ ಓಡಾಡುತ್ತಿರುವುದು, ಅಲ್ಲಲ್ಲಿ ಕುರಿಗಳ ಮೇಲೆ ದಾಳಿ ಮಾಡಿರುವುದು ಇಲ್ಲಿನ ಜನರನ್ನು ಭಯಬೀತಿಗೊಳಿಸಿದೆ. ಪರಿಣಾಮ ರಾತ್ರಿ ವೇಳೆಯಲ್ಲಿ ಒಬ್ಬಂಟಿಯಾಗಿ ಓಡಾಡಲು ಜನ ಹೆದರುತ್ತಿದ್ದಾರೆ. ಅಲ್ಲದೆ ಜಲಾಶಯ ವೀಕ್ಷಣೆಗೆ ಬರುವ ಪ್ರವಾಸಿಗರು ಭಯಬೀತರಾಗಿದ್ದಾರೆ. ಆಹಾರ ಹುಡುಕಿಕೊಂಡು ಬಂದಿರುವ ಈ ಚಿರತೆಯನ್ನು ತಕ್ಷಣ ಹಿಡಿಯದಿದ್ದರೆ ಜನಜಾನುವಾರುಗಳ ಮೇಲೆ ದಾಳಿ ಮಾಡುವ ಸಾಧ್ಯತೆಯಿದೆ ತಕ್ಷಣ ಅರಣ್ಯ ಇಲಾಖೆ ಚಿರತೆ ಹಿಡಿಯಲು ಮುಂದಾಗಬೇಕಿದೆ.**

**ಹೊನ್ನಪ್ಪ** ಉಪನ್ಯಾಸಕ, ಹುಳಿಯಾರು

### ನಮ್ಮ ಕೋಳಿ ಶೆಡ್ಡಿಗೆ ನುಗ್ಗಿತ್ತು!



**ಗಾಣಧಾಳು ಪಂಚಾಯ್ತಿ ವ್ಯಾಪ್ತಿಯಲ್ಲಿ ಆಗಾಗ ಚಿರತೆ ದಾಳಿಯ ಘಟನೆಗಳು ನಡೆಯುತ್ತಿರುತ್ತವೆ. ಆರೇಳು ತಿಂಗಳ ಹಿಂದಷ್ಟೆ ನಮ್ಮ ಕೋಳಿ ಶೆಡ್ಡಿಗೆ ನುಗ್ಗಿ ನೂರಾರು ಕೋಳಿಗಳನ್ನು ಬಲಿ ಪಡೆದಿತ್ತು. ಅರಣ್ಯ ಇಲಾಖೆಯವರು ಬೋನ್ ಇಟ್ಟು ಹಿಡಿದುಕೊಂಡು ಹೋಗಿದ್ದರು. ಈಗ ಮತ್ತೆ ಗಾಣಧಾಳು ಪಂಚಾಯ್ತಿಯಲ್ಲಿ ಚಿರತೆ ಓಡಾಡುತ್ತಿರುವುದು ಜನತೆಯಲ್ಲಿ ಆತಂಕ ಮೂಡಿಸಿದೆ. ಅರಣ್ಯ ಇಲಾಖೆಯವರು ಹಿಡಿದ ಚಿರತೆಯನ್ನು ಸಮೀಪದ ಕಾಡಿಗೆ ಬಿಡುತ್ತಿರುವುದರಿಂದ ಆಹಾರದ ರುಚಿ ನೋಡಿರುವ ಚಿರತೆ ಪುನಃ ಈ ಭಾಗಕ್ಕೆ ಬರುತ್ತಿದೆ. ಹಾಗಾಗಿ ತಕ್ಷಣ ಈಗ ಓಡಾಡುತ್ತಿರುವ ಚಿರತೆಯನ್ನು ಹಿಡಿದು ದೂರದ ಕಾಡಿಗೆ ಬಿಟ್ಟು ಬರಬೇಕಿದೆ.**

**ಬಾಪುಗಿರೀಶ್** ಅಧ್ಯಕ್ಷರು, ಗಾಣಧಾಳು ಪಂಚಾಯ್ತಿ

# ಕೀರ್ತನೆಗಳ ಮೂಲಕ ಜನಜಾಗೃತಿ ಮೂಡಿಸಿದ ಸಂತಶ್ರೇಷ್ಠ ಕನಕದಾಸರು



**ವಿಜಯಪುರ:** ಸಮಾಜದಲ್ಲಿದ್ದ ಜಾತಿ ಸಂಘರ್ಷವನ್ನು ತೊಡೆದು ಹಾಕಲು ತಮ್ಮ ಕೀರ್ತನೆಗಳ ಮೂಲಕ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಿದರು. ಇಂತಹ ಸಂತಶ್ರೇಷ್ಠ ಕನಕದಾಸರ ಆದರ್ಶವನ್ನು ಮೈಗೂಡಿಸಿಕೊಳ್ಳಬೇಕು ಪುರಸಭಾ ಮುಖ್ಯಾಧಿಕಾರಿ ಸಂತೋಷ್ ಎಂದರು.

ಇವರು ಪಟ್ಟಣದ ಪುರಸಭಾ ಕಛೇರಿಯಲ್ಲಿ ಪುರಸಭಾವತಿಯಿಂದ ಆಯೋಜಿಸಿದ್ದ ಸಂತ ಶ್ರೇಷ್ಠ ಕನಕದಾಸರ ಜನ್ಮ ದಿನಾಚರಣೆಯಲ್ಲಿ ದಾಸರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ದಾಸ ಸಾಹಿತ್ಯವನ್ನು ಶ್ರೀಮಂತಗೊಳಿಸಿದವರು ಕನಕದಾಸರು. ಇವರ ಕೀರ್ತನೆಯಲ್ಲಿರುವ ಸಂದೇಶವು ಇಂದಿಗೂ ಪ್ರಸ್ತುತವಾಗಿದೆ. ಜಾತಿಯತೆ ಎಂಬುದು ದಿನೇ ದಿನೆ ಹೆಚ್ಚಾಗುತ್ತಿರುವ ಇಂದಿನ ದಿನಗಳಲ್ಲಿ ಕನಕದಾಸರ ಸಂದೇಶವನ್ನು ಅಳವಡಿಸಿಕೊಳ್ಳಬೇಕು ಎಂದರು.

ಪುರಸಭಾ ಸದಸ್ಯ ಹನೀಪುಲ್ಲ ಮಾತನಾಡಿ, ಕನಕದಾಸರು ಮೂಲತಃ ಕುರುಬ ಸಮುದಾಯಕ್ಕೆ ಸೇರಿದ ವ್ಯಕ್ತಿಯಾಗಿದ್ದರು. ಅಂದಿನ ಸಮಾಜ ಜಾತಿಗೆ ಹೆಚ್ಚು ಪ್ರಾಧಾನ್ಯತೆಯನ್ನು ನೀಡುತ್ತಿದ್ದರಿಂದ ಅವರನ್ನು ದೇವಸ್ಥಾನದ ಒಳಗೆ ಪ್ರವೇಶಿಸಲು ಬಿಡಲಿಲ್ಲ. ಕನಕದಾಸರು ಶ್ರೀಕೃಷ್ಣನನ್ನು ಎಷ್ಟು ಪ್ರೀತಿಸುತ್ತಿದ್ದರೋ ಅಷ್ಟೇ ಶ್ರೀಕೃಷ್ಣನು ಅವರನ್ನು ಪ್ರೀತಿಸುತ್ತಿದ್ದ ಕಾರಣ ಕೃಷ್ಣನ ದರ್ಶನ ಭಾಗ್ಯ ಪಡೆಯದೇ ಹತಾಶೆಯಿಂದ ದೇವಸ್ಥಾನದಿಂದ ಹೊರಡುತ್ತಿದ್ದ ಕನಕದಾಸರಿಗೆ ಶ್ರೀಕೃಷ್ಣನು ತಿರುಗಿ ಗೋಡೆಯ ಒಂದು ಕಿಂಡಿಯ ಮೂಲಕ ತನ್ನ ದರ್ಶನವನ್ನು ಕರುಣಿಸುತ್ತಾನೆ. ಇಂದಿಗೂ ಕೃಷ್ಣನ ದೇವಸ್ಥಾನದ ಮುಖ್ಯ ಬಾಗಿಲು ಶಾಶ್ವತವಾಗಿ ಮುಚ್ಚಿದ್ದರೆ ಎಂದರು.

ಪುರಸಭಾ ಅಧಿಕಾರಿ ಅನೀಲ್ ಮಾತನಾಡಿ, ಕನಕದಾಸರು ನಮ್ಮಿಂದ ಮರೆಯಾದರೂ ಅವರ ಕೀರ್ತನೆಗಳು, ಹಾಡುಗಳು ನಮ್ಮೊಂದಿಗೆ ಇಂದಿಗೂ ಇದೆ. ಕನಕದಾಸರು ಶ್ರೀಕೃಷ್ಣನ ಪರಮ ಭಕ್ತರಾಗಿದ್ದರಿಂದ ಅವರು ಹೆಚ್ಚಿನ ಹಾಡುಗಳನ್ನು ಶ್ರೀಕೃಷ್ಣನ ಬಗ್ಗೆಯೇ ಹಾಡಿದ್ದಾರೆ ಅಂತಹ ಮಾಹನ್ ವ್ಯಕ್ತಿಯ ಆರ್ದಶಗಳು ನಾವು ಅಳವಡಿಸಿಕೊಳ್ಳಬೇಕು ಎಂದರು. ಪುರಸಭಾ ಸದಸ್ಯ ರಾಜಣ್ಣ, ಕುರುಬ ಜನಾಂಗದ ಮುಖಂಡ ಮುನಿರಾಜಪ್ಪ, ಪುರಸಭಾ ಸಿಬ್ಬಂದಿ ಹಾಗೂ ಅಧಿಕಾರಿಗಳು ಹಾಜರಿದ್ದರು.

## ಕಾಲೇಜು ಅಭಿವೃದ್ಧಿ ಸದಸ್ಯರಾಗಿ ಬಿ.ಎಸ್.ಕೃಷ್ಣ ನೇಮಕ

**ಮಂಡ್ಯ:** ಸರ್ಕಾರಿ ಪದವಿ ಪೂರ್ವ ಕಾಲೇಜು ಪೊಲೀಸ್ ಕಾಲೊನಿ 2023-24ನೇ ಸಾಲಿನ ಕಾಲೇಜು ಅಭಿವೃದ್ಧಿ ಸಮಿತಿ ರಚಿಸಬೇಕಾಗಿದ್ದು ಸದರಿ ಸಮಿತಿಗೆ ಬಿ.ಎಸ್.ಕೃಷ್ಣ(ಸುಬ್ಬಯ್ಯ) ಅವರನ್ನು ಸದಸ್ಯರನ್ನಾಗಿ ನೇಮಿಸಲಾಗಿದೆ. ಸದರಿ ನೇಮಕವು ಶಿಕ್ಷಣ ಸಚಿವರಿಂದ ಅನುಮೋದಿಸಲ್ಪಟ್ಟಿದ್ದು ಕಾಲೇಜಿನ ಸರ್ವತೋಮುಖ ಅಭಿವೃದ್ಧಿಗೆ ಸಂಪೂರ್ಣವಾಗಿ ತೊಡಗಿಸಿಕೊಂಡು ಪೊಲೀಸ್ ಕಾಲೋನಿ ಸರ್ಕಾರಿ ಪದವಿ ಪೂರ್ವ ಕಾಲೇಜು ಅಭಿವೃದ್ಧಿ ಸಮಿತಿಗೆ ಸದಸ್ಯರನ್ನಾಗಿ ನೇಮಿಸಲಾಗಿದೆ.

ಈ ಆದೇಶ ಪತ್ರವನ್ನು ನಗರದ ಚಾಮುಂಡೇಶ್ವರಿ ದೇವಾಲಯ ಆವರಣದಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ.ರವಿಕುಮಾರ್ಗೌಡ ಅವರಿಂದ ಬಿ.ಎಸ್.ಕೃಷ್ಣ(ಸುಬ್ಬಯ್ಯ) ಅವರಿಗೆ ನೇಮಕಾತಿ ಪತ್ರವನ್ನು ನೀಡಿದರು. ಈ ಸಂದರ್ಭದಲ್ಲಿ ಮುಡಾ ಅಧ್ಯಕ್ಷ ನಯೀಮ್, ನಗರ ಸಭೆ ಸದಸ್ಯ ಗೀತಾ ಕುಮಾರಸ್ವಾಮಿ, ಮುಖಂಡರಾದ ನಾಗರಾಜು, ರುದ್ರೇಶ್, ನಂದೀಶ್ ಭಾಗವಹಿಸಿದ್ದರು.



ದಾಸಶ್ರೇಷ್ಠ ಕನಕದಾಸರ ಜಯಂತಿ ಆಚರಣೆ

**ಹುಳಿಯಾರು ಬೆಸ್ಕಾಂ ಕಛೇರಿಯಲ್ಲಿ ದಾಸಶ್ರೇಷ್ಠ ಕನಕದಾಸರ ಜಯಂತಿ ಆಚರಣೆ ಮಾಡಲಾಯಿತು. ಶಾಖಾಧಿಕಾರಿಗಳಾದ ರಘುರಾಮ್, ನವೀನ್ ಮತ್ತು ಸಿಬ್ಬಂದಿಗಳಾದ ಮಂಜುನಾಥ್, ದಿಲೀಪ್, ಗಿರೀಶ್ ಮತ್ತು ಎಲ್ಲಾ ನೌಕರರು ಹಾಗೂ ನೌಕರ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.**

## ಮಧುಮೇಹ ಜಾಗೃತಿ ಓಟ ಕಾರ್ಯಕ್ರಮ

**ಬೆಂಗಳೂರು :** ಲಯನ್ ಇಂಟರ್ನ್ಯಾಷನಲ್ ಜಿಲ್ಲೆ 317ಎ ವತಿಯಿಂದ ಲಯನ್ಸ್ ಡಯಾಬಿಟಿಸ್ ಅವೇರ್ನೆಸ್ ರನ್ ಎಂಬ ಶೀರ್ಷಿಕೆಯಲ್ಲಿ ಮಧುಮೇಹ ಜಾಗೃತಿ ಓಟ ಕಾರ್ಯಕ್ರಮವನ್ನು ನಗರದ ಬಿಜಿಎಸ್ ಮೈದಾನದಲ್ಲಿ ಆಯೋಜಿಸಲಾಗಿತ್ತು. ಈ ಜಾಗೃತಿ ಓಟಕ್ಕೆ ಲಯನ್ಸ್ ಗೌರ್ನರ್ ಲಯನ್ ಎನ್ ಮೋಹನ್ ಕುಮಾರ್ ಅವರು ಚಾಲನೆ ನೀಡಿದರು. ಈ ವೇಳೆ ಲಯನ್



ಎನ್ ಮೋಹನ್ ಕುಮಾರ್ ಅವರು ಮಾತನಾಡಿ ಇತ್ತೀಚಿನ ದಿನಗಳಲ್ಲಿ ಚಿಕ್ಕವಯಸ್ಸಿನಿಂದ ದೊಡ್ಡವರ ವರೆಗೆ ಮಧುಮೇಹ ಸಾಮಾನ್ಯವಾಗಿಬಿಟ್ಟಿದೆ. ಕಳಪೆ ಮತ್ತು ಜಡ ಜೀವನಶೈಲಿ, ಅನಾರೋಗ್ಯಕರ ಆಹಾರ ಪದ್ಧತಿ, ನಿದ್ರೆಯ ಕೊರತೆ, ಒತ್ತಡ ಒಂದೆಡೆ ಕಾರಣವಾದರೆ. ಮಧುಮೇಹ ನಿಯಂತ್ರಣ ಮಾಡುವ ಬಗ್ಗೆ ಯಾರು ತಲೆಕೆಡಿಸಿಕೊಳ್ಳುವ ಗೋಜಿಗೆ ಹೋಗದಿರುವುದು ಕೂಡ ಇದಕ್ಕೆ ಕಾರಣವಾಗಿದೆ. ಯುವ ಪೀಳಿಗೆಗಳು ಹಾಗೂ ನಾಗರಿಕರು ಮಧುಮೇಹಕ್ಕೆ ತುತ್ತಾಗದಂತೆ ಕಾಪಾಡಿಕೊಳ್ಳಬೇಕಾಗಿರುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಆದ್ದರಿಂದ ಮಧುಮೇಹವನ್ನು ತಡೆಗಟ್ಟುವ ಸಲುವಾಗಿ ಇಂದು ಮಧುಮೇಹ ಜಾಗೃತಿ ಓಟವನ್ನು ಆಯೋಜಿಸಲಾಗಿದೆ ಎಂದರು. ಈ ಓಟದಲ್ಲಿ ಯುವಕರು, ವೃದ್ದರು, ಮಹಿಳೆಯರು, ಲಯನ್ಸ್ ಸದಸ್ಯರು ಸೇರಿದಂತೆ ಸ್ಥಳೀಯ ನಾಗರಿಕರು ಭಾಗವಹಿಸಿ ಮಧುಮೇಹದ ಕುರಿತು ಜಾಗೃತಿ ಮೂಡಿಸಿದರು. ಈ ವೇಳೆ ಲಯನ್ ಡಾಕ್ಟರ್ ಕೃಷ್ಣೇಗೌಡ ಎನ್, ಲಯನ್ ಕೆ ದೇವೇಗೌಡ, ಲಯನ್ , ಲಯನ್ ಜಿ ಮೋಹನ್, ಲಯನ್ ಕೆ ಈಶ್ವರನ್, ಲಯನ್ ಮನೋಜ್ ಕುಮಾರ್, ಲಯನ್ ಅಶೋಕ್ ಕುಮಾರ್ ಕುಲಕರ್ಣಿ, ಸೇರಿದಂತೆ ಇತರರು ಭಾಗವಹಿಸಿದ್ದರು.

# ಕನಕದಾಸರ ಆದರ್ಶ, ಚಿಂತನೆ ಇಂದಿಗೂ ಪ್ರಸ್ತುತ



**ಹುಳಿಯಾರು:** ಭಾರತೀಯ ಸಾಂಸ್ಕೃತಿಕ ಪರಂಪರೆಯ ದಾಸಶ್ರೇಷ್ಠ ಕನಕದಾಸರ ಸಾಮಾಜಿಕ ಆದರ್ಶ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಜಯಕರ್ನಾಟಕ ಸಂಘಟನೆಯ ಅಧ್ಯಕ್ಷ ಮೋಹನ್‌ಕುಮಾರ್ ರೈ ಹೇಳಿದರು.

ಹುಳಿಯಾರು ಸ್ಪೋರ್ಟ್ಸ್ ಅಂಡ್ ರಿಕ್ರಿಯೇಷನ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ದಾಸ ಸಾಹಿತ್ಯದಲ್ಲಿ ಕನಕದಾಸ ಮತ್ತು ಪುರಂದರದಾಸರು ಪ್ರಮುಖರು. ಬದುಕಿನ ಅಂಕು-ಡೊಂಕುಗಳನ್ನು ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಎತ್ತಿ ತೋರಿಸಿದ್ದಾರೆ. ಆ ಕಾಲದಲ್ಲಿಯೇ ಜಾತಿ ವ್ಯವಸ್ಥೆ ವಿರೋಧಿಸಿ ಸಮಸಮಾಜಕ್ಕಾಗಿ ಪ್ರಯತ್ನಿಸಿದವರು. ಇಂತಹ ಮಹಾನ್ ವ್ಯಕ್ತಿಗಳ ಜಯಂತಿಗಳು ಆಚರಿಸಿದರೆ ಸಾಲದು, ಅವರ ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಂಡು ಪಾಲಿಸಿದಾಗ ಅರ್ಥ ಬರುತ್ತದೆ ಎಂದು ಹೇಳಿದರು.

ಯಳನಾಡು ವಿಎಸ್ಎಸ್ಎನ್ ಮಾಜಿ ಅಧ್ಯಕ್ಷ ವೈ.ಎಸ್. ಸಿದ್ಧರಾಮಯ್ಯ ಮಾತನಾಡಿ ಕನಕದಾಸರು ಸುಂದರ ಹಾಗೂ ಜ್ಞಾನಪೂರ್ಣ ಸಮಾಜ ನಿರ್ಮಾಣ ಮಾಡುವಲ್ಲಿ ಶ್ರಮಿಸಿದ್ದರು. ದಾಸ ಪರಂಪರೆಗೆ ವಿಶ್ವಮಾನ್ಯತೆ ಕೊಡಿಸುವಲ್ಲಿ ಅಗ್ರಗಣ್ಯರು. ಪ್ರತಿಯೊಬ್ಬರು ಕನಕ ದಾಸರ ವಿಚಾರಧಾರೆಗಳನ್ನು ಅನುಸರಿಸ ಬೇಕಾಗಿದೆ. ವೈಚಾರಿಕ ಶ್ರೀಮಂತಿಕೆ, ಮೇಲು ಕೀಳಿನ ಸರ್ವ ಸಮಾನತೆ ನೆಲೆಯೂರಬೇಕು ಎಂದು ಅಭಿಲಾಷೆ ಹೊಂದಿದ್ದರು ಎಂದು ಹೇಳಿದರು. ಹುಳಿಯಾರು ಸ್ಪೋರ್ಟ್ಸ್ ಅಂಡ್ ರಿಕ್ರಿಯೇಷನ್ ಅಸೋಸಿಯೇಷನ್ ಅಧ್ಯಕ್ಷ ಕೃಷ್ಣಮೂರ್ತಿ, ನಿರ್ದೇಶಕರುಗಳಾದ ಭವಾನಿರಮೇಶಣ್ಣ, ಬಾಲರಾಜು, ಪ್ರಕಾಶ್, ಬಾಲಣ್ಣ, ಮಹೇಶ್, ನಂದಿಹಳ್ಳಿ ರಾಮಣ್ಣ, ಕೆಂಕೆರೆ ರಾಮಣ್ಣ, ಅನಂತರಾಮಯ್ಯ, ಬೊಮ್ಮಣ್ಣ, ತಿರುಮಲೇಶ್, ತಾಪಂ ಮಾಜಿ ಸದಸ್ಯ ರುದ್ರಣ್ಣ, ಅಂಜಿನಪ್ಪ, ಉಮೇಶ್, ಮಹಾಲಿಂಗಯ್ಯ, ಕೆಂಕೆರೆ ಅಶೋಕ್ ಸೇರಿದಂತೆ ಅನೇಕ ಸದಸ್ಯರು ಇದ್ದರು.

### ಅಂಧಕಾರ ತೊಲಗಿಸಿದ ಕನಕರು

**ಹುಳಿಯಾರು: ಕಾವ್ಯ, ಕೀರ್ತನೆಗಳ ಮೂಲಕ ಸಮಾಜದಲ್ಲಿ ಬೇರೂರಿದ್ದ ಅಂಧಕಾರವನ್ನು ಹೋಗಲಾಡಿಸಲು ಶ್ರಮಿಸಿದ ಕನಕದಾಸರು ವಿಶ್ವಮಾನವರಾಗಿ ಎತ್ತರಕ್ಕೆ ಬೆಳೆದಿದ್ದಾರೆ ಎಂದು ದಸೂಡಿ ಗ್ರಾಪಂ ಸದಸ್ಯ ಹಾಗೂ ಲೇಖಕ ಕೆ.ಮರಿಯಪ್ಪ ಹೇಳಿದರು. ಹುಳಿಯಾರು ಹೋಬಳಿ ದಸೂಡಿ ಗ್ರಾಮ ಪಂಚಾಯ್ತಿಯಿಂದ ಏರ್ಪಡಿಸಿದ್ದ ಕನಕದಾಸ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಹರಿದಾಸ ಸಾಹಿತ್ಯದಲ್ಲಿ ವಿಶಿಷ್ಟ ವ್ಯಕ್ತಿತ್ವವುಳ್ಳ ಕನಕದಾಸರು ವಿಲಾಸಿ ಜೀವನಕ್ಕೆ ವಿದಾಯ ಹೇಳಿ ದಾಸರಾಗಿ ಸಮಾಜ ಸುಧಾರಣೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. ಮೋಹನತರಂಗಿಣಿ, ನಳಚರಿತೆ, ರಾಮಧಾನ್ಯ ಚರಿತೆ, ಹರಿಭಕ್ತಿಸಾರ, ನರಸಿಂಹಸ್ತವ ಕಾವ್ಯಗಳನ್ನು ಕೀರ್ತನೆ ಮಂಡಿಗೆ, ಉಗಾಭೋಗಗಳನ್ನು ರಚಿಸಿದರು ಎಂದು ಹೇಳಿದರು. ಪಿಡಿಓ ಮುದ್ದಲಿಂಗಯ್ಯ ಮಾತನಾಡಿ ರಾಮಾನುಜಾಚಾರ್ಯ, ಮದ್ವಾಚಾರ್ಯರ ಎರಡೂ ತತ್ವಗಳಿಂದ ಪ್ರಭಾವಿತರಾಗಿದ್ದ ಕನಕದಾಸರು ಅದ್ವೈತ ತತ್ವ ಬೋಧಿಸಿ, ಜಾತೀಯತೆಯ ವಿರುದ್ಧ ಹೋರಾಡಿದರು. 'ಮನುಜ ಕುಲ ಒಂದೇ' ಎಂದು ಜಗತ್ತಿಗೆ ಸಂದೇಶ ಸಾರಿದ ಮಹಾನ್ ಚೇತನ ಎಂದು ಬಣ್ಣಿಸಿದರು. ಗ್ರಾಪಂ ಉಪಾಧ್ಯಕ್ಷ ನಾಗರಾಜು, ಗ್ರಾಮದ ಗೋಪಾಲಯ್ಯ, ರಂಗನಥಪ್ಪ, ಸೇರಿದಂತೆ ಪಂಚಾಯ್ತಿ ಸಿಬ್ಬಂದಿಗಳು, ಗ್ರಾಮಸ್ಥರು ಭಾಗವಹಿಸಿದ್ದರು.**



## ಸಿ.ಸಿ.ರಸ್ತೆ, ಚರಂಡಿಗಳ ಕಾಮಗಾರಿಗೆ ಚಾಲನೆ



**ವಿಜಯಪುರ:** ಹೋಬಳಿಯ ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 7 ಗ್ರಾಮಗಳಲ್ಲಿ ಕೆ.ಆರ್.ಐ.ಡಿ.ಎಲ್. ಮತ್ತು ಮುಖ್ಯಮಂತ್ರಿ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿಯಲ್ಲಿ 71 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆಗಳು ಮತ್ತು ಚರಂಡಿಗಳ ನಿರ್ಮಾಣ ಕಾಮಗಾರಿಗೆ ಸೋಮವಾರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ಚಾಲನೆ ನೀಡಿದರು. ಭಟ್ರೇನಹಳ್ಳಿ ಸಾಯಿಬಾಬಾ ದೇವಾಲಯದ ಮುಂಭಾಗದಲ್ಲಿ ಕೆ.ಆರ್.ಐ.ಡಿ.ಎಲ್. ಯೋಜನೆಯಡಿ ಸಿ.ಸಿ ಚರಂಡಿ ಕಾಮಗಾರಿಗೆ 7 ಲಕ್ಷ, ವೆಂಕಟೇನಹಳ್ಳಿ ಗ್ರಾಮದ ಪರಿಶಿಷ್ಟ ಪಂಗಡದ ಕಾಲೋನಿಯಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿ ಕಾಮಗಾರಿಗೆ 7 ಲಕ್ಷ, ಗೊಡ್ಲುಮುದ್ದೇನಹಳ್ಳಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಕಾಲೋನಿಯಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿ ಕಾಮಗಾರಿಗೆ 7 ಲಕ್ಷ, ಮುಖ್ಯಮಂತ್ರಿ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಎ.ರಂಗನಾಥಪುರ ಗ್ರಾಮದಲ್ಲಿ ದಲ್ಲಿ ಸಿ.ಸಿ.ರಸ್ತೆ ಕಾಮಗಾರಿಗೆ 10 ಲಕ್ಷ, ಚಂದೇನಹಳ್ಳಿ ಗ್ರಾಮದಲ್ಲಿ ಸಿ.ಸಿ.ರಸ್ತೆ ಕಾಮಗಾರಿ 10 ಲಕ್ಷ, ನಾರಾಯಣಪುರ ಗ್ರಾಮದಲ್ಲಿ ಸಿ.ಸಿ.ರಸ್ತೆ ಕಾಮಗಾರಿ 10 ಲಕ್ಷ, ಚಿನುವಂಡನಹಳ್ಳಿ ಗ್ರಾಮದಲ್ಲಿ ಸಿ.ಸಿ.ರಸ್ತೆ ಕಾಮಗಾರಿ 10 ಲಕ್ಷ, ಗೊಡ್ಲುಮುದ್ದೇನಹಳ್ಳಿ ಗ್ರಾಮದಲ್ಲಿ ಸಿ.ಸಿ.ರಸ್ತೆ ಕಾಮಗಾರಿ 10 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಚಾಲನೆ ನೀಡಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಮುರಳೀಧರ್, ಉಪಾಧ್ಯಕ್ಷೆ ರತ್ನಮ್ಮಮರಿತಮ್ಮಣ್ಣ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಾಥ್ ಗೌಡ, ಪಿಡಿಓ ಮಂಜುನಾಥ್, ಬಯಾಪ ಅಧ್ಯಕ್ಷ ಶಾಂತಕುಮಾರ್, ಗ್ಯಾರಂಟಿ ಯೋಜನೆಗಳ ಜಿಲ್ಲಾ ಘಟಕದ ಅಧ್ಯಕ್ಷ ಬಿ.ರಾಜಣ್ಣ, ತಾಲ್ಲೂಕು ಅಧ್ಯಕ್ಷ ಜಗನ್ನಾಥ್, ಬಯಪಾ ನಿರ್ದೇಶಕರಾದ ವಿ.ಮಂಜುನಾಥ್, ಪ್ರಸನ್ನಕುಮಾರ್, ಕೆಪಿಸಿಸಿ ಸದಸ್ಯ ಎ.ಚಿನ್ನಪ್ಪ, ಸಾವಕನ ಹಳ್ಳಿ ಎಸ್ .ಪಿ.ಮುನಿರಾಜು,ಚಂದೇನಹಳ್ಳಿ ಮುನಿಯಪ್ಪ, ಎಂ.ಜಗದೀಶ್, ವಿಜಯಪುರ ಹೋಬಳಿ ಕಾಂಗ್ರೆಸ್ ಅಧ್ಯಕ್ಷ ವೀರೇಗೌಡ, ಚೈತ್ರಾವೀರೇಗೌಡ, ಕೊಮ್ಮಸಂದ್ರ ಕೆಂಪಣ್ಣ, ಎಸ್.ಪಿ.ಮುನಿರಾಜುಗೌಡ, ಬಚ್ಚೇಗೌಡ, ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುನಿರಾಜು, ಎಸ್.ಶಿವಾನಂದ, ಗೋಣೂರು ಮಹೇಶ್, ನಾಗೇಗೌಡ, ಆರ್ .ಪ್ರದೀಪ್, ಭಟ್ರೇನಹಳ್ಳಿ ನಾರಾಯಣಪ್ಪ, ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು ಇದ್ದರು.



## ಭರತನಾಟ್ಯ ಶಿಕ್ಷಕಿ ಭವ್ಯಶ್ರೀಗೆ ಸನ್ಮಾನ

ಕೊಳ್ಳೇಗಾಲದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭರತನಾಟ್ಯ ಹಾಗೂ ಕರಾಟೆ ಶಿಕ್ಷಕಿ ಕು||ಭವ್ಯಶ್ರೀ. ಎನ್ ರವರನ್ನು ಗಣ್ಯ ವ್ಯಕ್ತಿಗಳು ಸನ್ಮಾನಿಸಿದರು.

# ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿ

**ಚಾಮರಾಜನಗರ:** ಕಠಿಣ ವಿದ್ಯಾಭ್ಯಾಸದಿಂದ ಉತ್ತಮ ಅಂಕ ಗಳಿಸಲು ಸಾಧ್ಯ ಎಂದು ಶ್ರೀರಾಮ ಶೇಷ ಪಾಠಶಾಲೆ ಪ್ರಾಂಶುಪಾಲ ಪ್ರದೀಪ್ ಕುಮಾರ್ ದೀಕ್ಷಿತ್ ತಿಳಿಸಿದರು.

ನಗರದ ಮಾರಮ್ಮ ದೇವಸ್ಥಾನದ ಸಮೀಪದಲ್ಲಿರುವ ನೂತನ ವಾಗಿ ಪ್ರಾರಂಭವಾಗಿರುವ ಶ್ರೀ ಪರಿಮಳ ರಾಮ ವಿದ್ಯಾ ಮಂದಿರ ಪೂರ್ವ ಪ್ರಾಥಮಿಕ ಶಾಲೆಯಲ್ಲಿ. ಕವಿ ಶೇಷ್ಠ ಭಕ್ತ ಕನಕದಾಸರ ಜಯಂತಿ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಚಾಲನೆ ನೀಡಿ ಮಾತನಾಡಿದವರು. ಕವಿ ಶೇಷ್ಠ ಭಕ್ತ ಕನಕದಾಸರವರ ತತ್ವ ಸಿದ್ಧಾಂತವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು .

ವಿದ್ಯಾಭ್ಯಾಸದ ಜೊತೆಗೆ ವಿದ್ಯಾರ್ಥಿಗಳು ಗುರುಹಿರಿಯರಿಗೆ ಗೌರವ ನಮನ ಸಲ್ಲಿಸುವ ಅಭಿರುಚಿ ಬೆಳೆಸಿಕೊಳ್ಳಬೇಕು ಬಿಡುವಿನ ಸಂದರ್ಭದಲ್ಲಿ ಗ್ರಂಥಾಲಯಗಳಿಗೆ ಭೇಟಿ ನೀಡಿ ರಾಷ್ಟ್ರ ನಾಯಕರ ಪುಸ್ತಕಗಳನ್ನು ಓದುವ ಅಭಿರುಚಿ ಬಯಸಿಕೊಳ್ಳಬೇಕು ಎಂದು ಕರೆ ನೀಡಿದರು, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಅಧ್ಯಕ್ಷ ಜಿ ಬಂಗಾರು ಶ್ರೀ ಭಕ್ತ ಶ್ರೇಷ್ಠ ಕನಕದಾಸ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ. ಪ್ರದೀಪ್ ಕುಮಾರ್ ದೀಕ್ಷಿತ್ ರವರು.18 ವರ್ಷಕ್ಕೂ ಹೆಚ್ಚು ಉಚಿತವಾಗಿ ಸಾವಿರಾರು ವಿದ್ಯಾರ್ಥಿಗಳಿಗೆ ಉಚಿತ



ವಿದ್ಯಾಭ್ಯಾಸ ಕಲಿಸಿ ರಾಜ್ಯಕ್ಕೆ ಮಾದರಿಯಾಗಿದ್ದಾರೆ, ಈ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳೇ ಪುಣ್ಯವಂತರು ಇಲ್ಲಿ ಜ್ಞಾನ ಭಂಡಾರಜೊತೆ ಭಾರತೀಯ ಸಂಸ್ಕೃತಿ ಬಿಂಬಿಸುವ ಸಾಂಸ್ಕೃತಿಕ, ಸೇವಾಕಾರ್ಯಕ್ರಮಗಳು ಹಮ್ಮಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದರು. ಮುಖ್ಯ ಶಿಕ್ಷಕಿ ಜ್ಯೋತಿ ಅಧ್ಯಕ್ಷತೆ ವಹಿಸಿದರು, ಶಿಕ್ಷಕಿ ನಂದಿನಿ, ಸಂಜೀವಿನಿ ಟೆಸ್ಟ್ ಸತೀಶ್, ಪೋಷಕರಾದ ನಾಗರಾಜು, ಮೀನಾಕ್ಷಮ್ಮ, ಸೇರಿದಂತೆ ಇತರರು ಹಾಜರಿದ್ದರು ನಂತರ ಪುಟಾಣಿ ಮಕ್ಕಳಿಗೆ ಸಿಹಿ ಹಾಗೂ ಹಣ್ಣು ವಿತರಿಸಲಾಯಿತು.

## 22ರಂದು ಉಸ್ತುವಾರಿ ಸಮಿತಿ ಪರಿಶೀಲನಾ ಸಭೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ಪರಿಶೀಲನಾ ಸಭೆಯನ್ನು ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 22ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾರದಾ ವಿಲಾಸ ಪಿಯು ಕಾಲೇಜಿನಲ್ಲಿ 537ನೇ ಭಕ್ತ ಕನಕದಾಸ ಜಯಂತಿ

**ಮೈಸೂರು:** ನಗರದ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿನಲ್ಲಿಂದು ಸಂತ ಶ್ರೇಷ್ಠ ಭಕ್ತ ಕನಕದಾಸರ 537ನೇ ಜಯಂತೋತ್ಸವವನ್ನು ಸಂಭ್ರಮ, ಸಡಗರದಿಂದ ಆಚರಿಸಲಾಯಿತು. ಕಾಲೇಜಿನ ಪ್ರಾಂಶುಪಾಲರಾದ ಸಿ.ಕೆ.ಅಶೋಕ ಕುಮಾರ್ ಅವರು ಕನಕದಾಸರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಮಾತನಾಡಿ, ಸಾರ್ವಕಾಲಿಕ ಸತ್ಯವನ್ನು ಸಾರಿದ ಮಹಾನ್ ಶ್ರೇಷ್ಠ ಭಕ್ತರು ಕನಕದಾಸರು. ಭಕ್ತಿಯ ಪರಕಾಷ್ಠೆಯನ್ನು ಮೆರೆದ ಸಂತರಲ್ಲಿ ಕನಕದಾಸರು ಮೊದಲಿಗರು. ಕನಕದಾಸರು ಹರಿದಾಸ ಸಾಹಿತ್ಯದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿದವರು. ಅಂದಿನ ಕಾಲದಲ್ಲಿಯೇ ಜಾತಿ, ಮೂಢನಂಬಿಕೆ ಹೋಗಲಾಡಿಸಲು ಕೀರ್ತನೆಗಳ ಮೂಲಕ ಜಾಗೃತಿ ಮೂಡಿಸಿದ ಮಹಾನ್ ಚೇತನ ಎಂದು ಬಣ್ಣಿಸಿದರು. ಕಾಲೇಜಿನ ಕನ್ನಡ ಉಪನ್ಯಾಸಕರಾದ ರಾಜೇಂದ್ರಪ್ರಸಾದ್ ಹೊನ್ನಲಗೆರೆ ಅವರು ಮಾತನಾಡಿ, ಕನಕದಾಸರು ರಚಿಸಿದ ರಾಮಧಾನ್ಯ ಚರಿತೆ, ಹರಿಭಕ್ತಿ ಸಾರ, ಮೋಹನ ತರಂಗಿಣಿ, ನಳ ಚರಿತೆ ಎಂದೆಂದಿಗೂ ಅಮರವಾದ ಅನನ್ಯ ಕೃತಿಗಳು ಎಂದು ಸಮಾಜದಲ್ಲಿ ಸಮಾನತೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟ ಕನಕದಾಸರು ಕುಲವನ್ನು ಖಂಡಿಸುವಲ್ಲಿ ಬಸವೇಶ್ವರರು ಹಾಗೂ ಸರ್ವಜ್ಞರಷ್ಟೇ ಧೈರ್ಯವನ್ನು ತೋರಿಸಿದ್ದಾರೆ. ಕುಲಾಚಾರವನ್ನು ಮಾಡುವ ಹೀನ ಮನಸ್ಸಿನವರಿಗೆ ಕುಲ ಕುಲವೆಂದು ಹೊಡೆದಾಡದಿರಿ ಎಂದು ಎಚ್ಚರಿಸಿದ್ದಾರೆ ಎಂದು ತಿಳಿಸಿದರು. ವೇದಿಕೆಯಲ್ಲಿ ಹಿರಿಯ ಉಪನ್ಯಾಸಕರಾದ ಜಿ.ವೆಂಕಟರಾಮು, ಶಿಲ್ಪ, ಡಾ.ಡಿ.ಸಿ.ಉಮೇಶ್, ಡಾ.ಲಾವಣ್ಯ, ಮುಷೀರ್, ಪ್ರವೀಣ್ ಕುಮಾರ್, ವಿಂದ್ಯಾ, ಬಿ.ಪ್ರಸಾದ್, ಮಧುರ, ಶಶಿಕಲಾ, ಪ್ರವೀಣ್ ಕುಮಾರ್, ಹೆಗಡೆ, ದೀಪಿಕ, ಭೂಮಿಕಾ, ಮಂಜುನಾಥ್, ಪ್ರಕಾಶ್ ಹಾಗೂ ಮುಂತಾದವರು ಉಪಸ್ಥಿತರಿದ್ದರು.



# ಕನ್ನಡ ಕರ್ನಾಟಕದಲ್ಲಿ ಮನೆಮನೆ ಭಾಷೆ ಆಗಲಿ

**ಚಿತ್ರದುರ್ಗ:** ಕರ್ನಾಟಕದಲ್ಲಿ ಕನ್ನಡ ಮನೆಮನೆ ಭಾಷೆಯಾಗಬೇಕು, ಶಿಕ್ಷಣದಲ್ಲಿ ಮಾಧ್ಯಮವಾಗಬೇಕು, ವ್ಯವಹಾರದಲ್ಲಿ ಬಳಕೆ ಆಗಬೇಕು, ಜನರಿಗೆ ಹೃದಯದಲ್ಲಿ ಆನಂದ ಉಂಟುಮಾಡುವಂತಹ ಭಾಷೆಯಾಗಬೇಕು, ಕನ್ನಡ ಭಾಷೆಯಲ್ಲಿ ತನ್ನ ಭಾವನೆಗಳನ್ನು ವ್ಯಕ್ತಪಡಿಸುವಂತಹ ಶಕ್ತಿಯನ್ನು ಹೊಂದಬೇಕು, ಸೃಜನಾತ್ಮಕ ಚಟುವಟಿಕೆಗಳಲ್ಲಿ ಮಾತೃಭಾಷೆಯ ಪ್ರಭಾವದ ಅರಿವಿರಬೇಕು, ಕೀಳರಿಮೆಯನ್ನ ತೊರೆದು ಪ್ರಪಂಚದ ಎಲ್ಲಾ ಭಾಷೆಗಳಂತೆ ಕನ್ನಡ ಭಾಷೆಗೂ ಸಹ ಆದ್ಯತೆ, ಗೌರವ, ಸ್ಥಾನ ದೊರಕುವಂತೆ ಮಾಡುವುದು ಪ್ರತಿಯೊಬ್ಬ ಕನ್ನಡಿಗರ ಕರ್ತವ್ಯವಾಗಿದೆ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷರು ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿಯವರು ಕನ್ನಡಿಗರಿಗೆ ಕರೆ ನೀಡಿದ್ದಾರೆ. ಮಗುವಿನ ಮಾತೃಭಾಷೆ ಕನ್ನಡ, ಮನೆಯಲ್ಲಿ ತಾಯಿಯ ಭಾಷೆ ಕನ್ನಡ, ಶಿಕ್ಷಣದಲ್ಲಿ ಮಾತೃಭಾಷೆಯಲ್ಲಿ ಮಾಧ್ಯಮ, ವ್ಯವಹಾರದಲ್ಲಿ ಕನ್ನಡವನ್ನು ಉಳಿಸಿಕೊಂಡು, ಪ್ರತಿಯೊಂದು ವಿಚಾರಗಳನ್ನ, ಭಾವನೆಗಳನ್ನ, ವಿಜ್ಞಾನವನ್ನ, ಆಧ್ಯಾತ್ಮಿಕವನ್ನು ಕನ್ನಡದಲ್ಲಿ ಬೋಧಿಸಿ, ಕನ್ನಡದಲ್ಲಿ ಮಾತನಾಡಿ, ಕನ್ನಡವನ್ನ ಉತ್ಕೃಷ್ಟ ಸ್ಥಾನಕ್ಕೆ ತೆಗೆದುಕೊಂಡು ಹೋಗುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ, ಕರ್ನಾಟಕದಲ್ಲಿ ಬಂದು ವಾಸಿಸುವ ಜನರಿಗೆ ಕನ್ನಡದಲ್ಲಿ ಮಾತನಾಡುವಂತಹ, ಬರೆಯುವಂತಹ ಶಕ್ತಿಯನ್ನು, ಮಾರ್ಗದರ್ಶನವನ್ನು, ಶಿಕ್ಷಣವನ್ನು ಪ್ರತಿಯೊಂದು ಶಿಕ್ಷಣ ಇಲಾಖೆಯೂ, ಸಾರ್ವಜನಿಕರು ಸಹ ಮಾಡಿದಾಗ ಮಾತ್ರ, ಕನ್ನಡದ ಬಗ್ಗೆ ಹೆಚ್ಚಿನ ಗೌರವ ಉಳಿಯುತ್ತದೆ ಹಾಗೂ ಕನ್ನಡವನ್ನು ಅಳಿಸಿ ಹಾಕುವ ಪ್ರಯತ್ನಗಳು ನಶಿಸಿ ಹೋಗುತ್ತವೆ ಎಂದರು.

ಮಗುವಿಗೆ ತನ್ನ ಭಾವನೆಗಳನ್ನು ಅಭಿವ್ಯಕ್ತಿ ಪಡಿಸುವಂತಹ ಅವಕಾಶಗಳನ್ನು ಮಾತೃಭಾಷೆ ಒದಗಿಸಿಕೊಡುತ್ತದೆ, ಮನೆಯಲ್ಲಿ ಮಾತನಾಡುವ ಭಾಷೆಗೂ ಮತ್ತು ಹೊರಗಡೆ ಮಾತನಾಡುವ ಭಾಷೆಗೂ ಸಂಬಂಧಗಳನ್ನು ಕಲ್ಪಿಸಿ ಕೊಟ್ಟಾಗ, ಮಗುವಿನ ಜ್ಞಾನ, ತಿಳುವಳಿಕೆ ಹೆಚ್ಚಾಗುತ್ತಾ ಹೋಗುತ್ತದೆ. ನಾವು ಭಾಷಾ ಗುಲಾಮಗಿರಿಯಲ್ಲಿ ಬಹಳಷ್ಟು ನರಳಿದ್ದರಿಂದ, ಈಗಲೂ ಸಹ ನಾವು ನಮ್ಮ ಮಾತೃಭಾಷೆ ಶಕ್ತಿಯನ್ನು ಅರಿತುಕೊಳ್ಳಲು ಕಷ್ಟಕರವಾಗಿದೆ, ಮಗುವಿಗೆ ತಾಯಿ ಹಾಲು ಶ್ರೇಷ್ಠ ಎಂದು ವೈದ್ಯಕೀಯ ಇಲಾಖೆ ಕೂಗಿ ಕೂಗಿ ಹೇಳಿದರು ಸಹ ತಾಯಂದಿರಗಳು ಡಬ್ಬದ ಹಾಲನ್ನು ಕುಡಿಸುವಂತೆ, ಶಿಕ್ಷಣ ತಜ್ಞರು ಮಾತೃಭಾಷೆಯಲ್ಲಿ ಅತಿ ಹೆಚ್ಚು ಶಕ್ತಿ ಇದೆ ಎಂದು ಕೂಗಿ ಕೂಗಿ ಹೇಳಿದರೂ ಸಹ ನಾವು ಪಶ್ಚಿಮಾತ್ಯ ದೇಶಗಳ ಭಾಷೆಗಳನ್ನ ಮಕ್ಕಳ ಬೋಧನೆಗೆ ಬಳಕೆ ಮಾಡುತ್ತಿದ್ದು, ಮಾಧ್ಯಮವನ್ನು ಸಹ ನಾವು ಪಶ್ಚಿಮಾತ್ಯ ಭಾಷೆಯಲ್ಲಿ ಬೆಳೆಸುತ್ತಿರುವುದರಿಂದ ನಮ್ಮ ಮಕ್ಕಳಲ್ಲಿ ಸೃಜನಾತ್ಮಕ ಚಟುವಟಿಕೆಗಳು ಕಡಿಮೆಯಾಗುತ್ತಾ, ನಶಿಸುತ್ತಾ ಬರುತ್ತಿದೆ ಎಂದರು.

ಈಗಲೂ ಸಹ ಕನ್ನಡ ಶಾಲೆಗೆ ಮಕ್ಕಳನ್ನು ಸೇರಿಸಲು ಪೋಷಕರು ಹಿಂದೇಟು ಹಾಕುತ್ತಿದ್ದಾರೆ, ಕನ್ನಡದಲ್ಲಿರುವ ಶಕ್ತಿಯ ಅರಿವಿನ ಕೊರತೆಯಿಂದಾಗಿ, ಕನ್ನಡದಲ್ಲಿ ಓದಿ, ಕನ್ನಡದಲ್ಲಿ ಬೆಳೆದು, ಹೆಚ್ಚಿನ ಸ್ಥಾನವನ್ನು ಗಳಿಸಿದಂತವರು ಸಹ ತಮ್ಮ ಮಕ್ಕಳನ್ನು ಇಂಗ್ಲಿಷ್ ಶಾಲೆಗೆ, ಇಂಗ್ಲಿಷ್ ಮಾಧ್ಯಮಕ್ಕೆ ಸೇರಿಸಿ, ತಮ್ಮ ಮಕ್ಕಳಲ್ಲಿರುವ ಸೃಜನಾತ್ಮಕ ಚಟುವಟಿಕೆಗಳನ್ನು ನಾಶ ಮಾಡುತ್ತಿದ್ದಾರೆ. ಹಾಗಾಗಿ ಕನಿಷ್ಠಪಕ್ಷ ಮಗು ಏಳನೇ ತರಗತಿಯ ವರೆಗಾದರೂ ಮಾತೃಭಾಷೆಯ ಮಾಧ್ಯಮದಲ್ಲಿ ಓದಬೇಕು, ಇಂಗ್ಲೀಷನ್ನು ಒಂದು ಭಾಷೆಯಾಗಿ ಕಲಿಯುವಂತಹ ಅವಕಾಶಗಳನ್ನು ಕಲ್ಪಿಸಿ ಕೊಡಬೇಕು ಎಂದರು.

### ಶಾಸಕ ಸಿ. ಪುಟ್ಟರಂಗಶೆಟ್ಟಿ ಬಣ್ಣನೆ

# ಕನಕದಾಸರು ಸಮಾಜ ಸುಧಾರಕ

**ಚಾಮರಾಜನಗರ:** ಸಮಾಜದ ಅಂಕುಡೊಂಕುಗಳನ್ನು ತಿದ್ದುವಂತಹ ಸರಳ ಕೀರ್ತನೆಗಳನ್ನು ರಚಿಸಿ ಕನಕದಾಸರು ಸಾಮಾಜಿಕ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಭಕ್ತಶ್ರೇಷ್ಠ ಶ್ರೀ ಕನಕದಾಸರ 537ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಮಾಜಿಕ ಅಸಮಾನತೆ ತಾಂಡವವಾಡುತ್ತಿದ್ದ ಅಂದಿನ ಕಾಲಘಟ್ಟದಲ್ಲಿ ಜನರಿಗೆ ಅರ್ಥವಾಗುವ ಸರಳ ಭಾಷೆಯಲ್ಲಿ ಕೀರ್ತನೆಗಳನ್ನು ರಚಿಸಿ ಜನರನ್ನು ಬಡಿದೆಚ್ಚರಿಸಿದ ಕನಕದಾಸರು ಮನುಕುಲದ ಒಳಿತಿಗೆ ದುಡಿದ ಮಹಾನ್ ಸಾಧಕರಾಗಿದ್ದಾರೆ. ಸಂಗೀತ ಹಾಗೂ ನಾಟಕಕಾರರು ಆಗಿದ್ದ ಕನಕದಾಸರ ಚರಿತ್ರೆಯನ್ನು ಓದಿದರೇ ಸಾಲದು. ಅವರ ತತ್ವಸಿದ್ಧಾಂತಗಳನ್ನು ನಮ್ಮೆಲ್ಲರ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

12ನೇ ಶತಮಾನದಲ್ಲಿ ಬಸವಣ್ಣನವರು ಅನುಭವ ಮಂಟಪದ ಮೂಲಕ ಎಲ್ಲಾ ವರ್ಗದವರನ್ನು ಒಂದೆಡೆ ಕಲೆಹಾಕಿ ಸಮಾನತೆಗೆ ಒತ್ತುಕೊಟ್ಟಿದ್ದರು. ಬಳಿಕ 16ನೇ ಶತಮಾನದಲ್ಲಿ ಕನಕದಾಸರು ಸಹ ಅದೇ ದಾರಿಯಲ್ಲಿ ಜನರನ್ನು ಮುನ್ನೆಡೆಸಿದರು. ಕನಕದಾಸರ ಜೀವನಚರಿತ್ರೆಯನ್ನಾಧರಿಸಿದ 'ಭಕ್ತ ಕನಕದಾಸ' ಚಲನಚಿತ್ರದಲ್ಲಿ ಜಿಲ್ಲೆಯವರಾದ ಡಾ. ರಾಜ್ ಕುಮಾರ್ ಮನೋಜ್ಞವಾಗಿ ನಟಿಸಿದ್ದಾರೆ. ಆ ಮೂಲಕ ಕನಕದಾಸರು ಜನಮಾನಸದಲ್ಲಿ ಅಚ್ಚಳಿಯದೇ ಚಿರಸ್ಥಾಯಿಯಾಗಿದ್ದಾರೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ ಅವರು ಸಮಾಜದಲ್ಲಿ ಮೇಲು-ಕೀಳು, ಬಡವ-ಬಲ್ಲಿದ ಭೇದಭಾವಗಳನ್ನು ಹೋಗಲಾಡಿಸಲು ಶ್ರಮಿಸಿದ ಕನಕದಾಸರು ದಾಸರಲ್ಲಿ ಅತೀ ಶ್ರೇಷ್ಠ ದಾಸರಾಗಿದ್ದಾರೆ. 316 ಕೀರ್ತನೆಗಳನ್ನು ರಚಿಸಿದ ಕನಕದಾಸರು ಶ್ರೀಕೃಷ್ಣನ ಪರಮಭಕ್ತರಾಗಿ ಭಕ್ತಶ್ರೇಷ್ಠರೆನಿಸಿಕೊಂಡರು. ಅವರ ಆದರ್ಶ ಮೌಲ್ಯಗಳು ಇಂದಿಗೂ ದಾರಿದೀಪವಾಗಿವೆ ಎಂದರು.



ಮುಖ್ಯ ಭಾಷಣ ಮಾಡಿದ ಗುಂಡ್ಲುಪೇಟೆ ಶ್ರೀ ದೊಡ್ಡಹುಂಡಿ ಭೋಗಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಇತಿಹಾಸ ಉಪನ್ಯಾಸಕರು ಹಾಗೂ ಸಂಶೋಧಕರಾದ ಡಾ. ಎಂ. ಮಂಜುನಾಥ್ ಅವರು ಕನಕದಾಸರ ಮೊದಲ ಹೆಸರು ತಿಮ್ಮಪ್ಪನಾಯಕ. ವಿಜಯನಗರದ ಶ್ರೀಕೃಷ್ಣದೇವರಾಯನ ಸಾಮಂತರಾಗಿದ್ದ ಕನಕದಾಸರು ಸೈನಿಕನಾಗಿ ದಂಡನಾಯಕನಾಗಿ ಹಲವಾರು ಯುದ್ಧಗಳಲ್ಲಿ ಭಾಗವಹಿಸಿ ಅಲ್ಲಿನ ಸಾವು-ನೋವುಗಳನ್ನು ಕಣ್ಣಾರೆ ಕಂಡು ಬಳಿಕ ವೈರಾಗ್ಯ ತಾಳಿದರು. ವ್ಯಾಸರಾಯರ ಶಿಷ್ಯರಾಗಿದ್ದ ಕನಕದಾಸರು ಪ್ರತಿಯೊಂದು ಜೀವಿಯಲ್ಲಿಯೂ ದೇವರನ್ನು ಕಂಡರು ಎಂದು ಹೇಳಿದರು.

ಶ್ರೀಕೃಷ್ಣದೇವರಾಯನ ಸೈನ್ಯದ ಜೊತೆ ಚಾಮರಾಜನಗರ ತಾಲೂಕಿನ ಉಮ್ಮತ್ತೂರಿಗೆ 1512ರಲ್ಲಿ ದಂಡೆತ್ತಿ ಬರುವ ಮೂಲಕ ಕನಕದಾಸರು ಚಾಮರಾಜನಗರಕ್ಕೂ ಬಂದಿದ್ದರು ಎಂಬ ಐತಿಹ್ಯವಿದೆ. ಉಮ್ಮತ್ತೂರಿನ ದೈವ ರಂಗನಾಥಸ್ವಾಮಿಯ ಬಗ್ಗೆ ಕೀರ್ತನೆಯಲ್ಲಿ ಸ್ಮರಿಸಿದ್ದಾರೆ. ಕನಕದಾಸರು ರಾಮಧ್ಯಾನ ಚರಿತೆ ಹಾಗೂ ಹರಿಭಕ್ತಿಸಾರ ಕೃತಿಗಳನ್ನು ರಚಿಸಿ ಜನರನ್ನು ಭಕ್ತಿಮಾರ್ಗದಲ್ಲಿ ನಡೆಸುವ ಮೂಲಕ ಸಮಾಜ ಸುಧಾರಣೆಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಡಾ. ಎಂ. ಮಂಜುನಾಥ್ ಅವರು ತಿಳಿಸಿದರು.

ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ) ಹಾಗೂ ಸಮಾಜದ ತಾಲೂಕು ಅಧ್ಯಕ್ಷರಾದ ಉಮೇಶ್ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು. ಮಾದಾಪುರ ರವಿಕುಮಾರ್ ಅವರು ಕನಕದಾಸರ ಬಗ್ಗೆ ಕಿರುಕವನ ವಾಚನ ಮಾಡಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಮುಖಂಡರಾದ ಬೆಳ್ಳೇಗೌಡ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಪ್ರವಾಸಿ ಮಂದಿರದಿಂದ ಅಲಂಕೃತ ಬೆಳ್ಳಿರಥದಲ್ಲಿ ಕನಕದಾಸರ ಭಾವಚಿತ್ರದ ಅದ್ದೂರಿ ಮೆರವಣಿಗೆಗೆ ಚಾಲನೆ ಮೈಸೂರು ಸೇಲ್ಸ್ ಇಂಟರ್‌ನ್ಯಾ?ನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಚಾಲನೆ ನೀಡಿದರು. ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿದ ಮೆರವಣಿಗೆಯಲ್ಲಿ ಆಕರ್ಷಕ ಕಲಾತಂಡಗಳು, ತಾಲೂಕಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಆಟೋ ಟ್ಯಾಬ್ಲೋಗಳು ಗಮನ ಸೆಳೆದವು.

## ಕೆ.ಆರ್.ಕ್ಷೇತ್ರದ ಶಾಸಕರ ಕಛೇರಿ ನೂತನ ಕಟ್ಟಡಕ್ಕೆ ಸ್ಥಳಾಂತರ !

ಮೈಸೂರು, ನಗರದ ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರ ಕಛೇರಿಯನ್ನು ಇನ್ನೂ ಹೆಚ್ಚಿನ ಸೇವೆ ಸಲ್ಲಿಸಲು ಈ ಹಿಂದೆ ಇದ್ದ ಚಾಮರಾಜ ಮೊಹಲ್ಲಾದಿಂದ ನೂತನವಾದ ವಿಶಾಲವಾದ ಕಟ್ಟಡ ನಗರಪಾಲಿಕೆ ಕಛೇರಿ-1, ಶ್ರೀಕಾಂತ ಶಾಲೆಯ ಹಿಂಭಾಗ, ಶಂಕರಮಠದ ರಸ್ತೆಗೆ ಇಂದು ಸ್ಥಳಾಂತರಗೊಳಿಸಲಾಯಿತು. ಈ ಕಟ್ಟಡಕ್ಕೆ 'ಕರ್ತವ್ಯ ಭವನ' ಎಂದು ನಾಮಕರಣ ಮಾಡಲಾಯಿತು. ಈ ಸಂದರ್ಭದಲ್ಲಿ ಯದುಗಿರಿ ಯತಿರಾಜ ಮೈಸೂರು ಶಾಖಾ ಮಠದಿಂದ ಆಶೀರ್ವಾದ ಮಾಡಲಾಯಿತು. ಮಠದ ಮುಖ್ಯಸ್ಥ ಕೆ.ಆರ್.ಯೋಗನರಸಿಂಹನ್ (ಮುರುಳಿ ಅಯ್ಯಂಗಾರ್), ವೀರರಾಘವನ್, ಶ್ರೀ ರಾಮಾನುಜ ಸಹಕಾರ ಸಂಘದ ಅಧ್ಯಕ್ಷ ಹೆಚ್ .ವಿ.ಎಲ್.ಎನ್.ಆಚಾರ್, ನಿರ್ದೇಶಕ ಶ್ರೀನಿವಾಸ್ ಪ್ರಸಾದ್, ಟಿ.ಎಸ್.ಅರುಣ್ ಉಪಸ್ಥಿತರಿದ್ದರು.

# ಕೋಲಾರದಲ್ಲಿ ಕನಕದಾಸರ ಜಯಂತಿ



**ಕೋಲಾರ:** ಕೆ ಎಸ್ ಆರ್ ಟಿ ಸಿ ಸಾರಿಗೆ ನಿಗಮ ,ಕನಕ ನೌಕರರ ಬಳಗ ,ಕೋಲಾರ ವಿಭಾಗ ಕೋಲಾರ ಇವರ ವತಿಯಿಂದ 537 ದಾಸ ಶ್ರೇಷ್ಠ ಕನಕದಾಸರ ಜಯಂತೋತ್ಸವ ಆಚರಣೆ ಮಾಡಲಾಯಿತು.

ವಿಶೇಷ ಅತಿಥಿಗಳಾಗಿ ಜಿಲ್ಲಾ ಸಚಿವರಾದ ಬೈರತಿ ಸುರೇಶ್ ,ಮುಖ್ಯಮಂತ್ರಿಗಳ ಪತ್ರಿಕಾ ಮಾಧ್ಯಮ ಸಲಹೆಗಾರರಾದ ಪ್ರಭಾಕರ್ ,ಜಿಲ್ಲಾಧಿಕಾರಿ ಅಕ್ರಂ ಪಾಷ, ಕೋಲಾರ ಪೊಲೀಸ್ ವರಿಷ್ಟಾಧಿಕಾರಿ ಬಿ. ನಿಖಿಲ್, ಕೆ. ಜಿ. ಎಫ್ ಪೊಲೀಸ್ ವರಿಷ್ಟಾಧಿಕಾರಿ ಶಾಂತರಾಜು, ಅಪರ ಜಿಲ್ಲಾಧಿಕಾರಿ ಮಂಗಳ, ಉಪ ವಿಭಾಗಾಧಿಕಾರಿ ಡಾ. ಮೈತ್ರಿ,ಕೋಲಾರ ತಹಸೀಲ್ದಾರ್ ನಯನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ಉಪಸ್ಥಿತರಿದ್ದರು . ಕಾರ್ಯಕ್ರಮದಲ್ಲಿ ನಿವೃತ್ತ ನೌಕರರಿಗೆ ಸನ್ಮಾನ ಮತ್ತು ವಿದ್ವಾಂಸರಿಂದ ಭಜನೆ ಏರ್ಪಡಿಸಲಾಗಿತ್ತು . ಕನಕದಾಸರ ಜೀವನ ಚರಿತ್ರೆಯನ್ನು ಸಾರುವ ಆಕರ್ಷಣೀಯ ಟ್ಯಾಬ್ಲೋ ನೋಡುಗರ ಮನಸೂರೆಗೊಂಡಿತು .

ಈ ಕಾರ್ಯಕ್ರಮದಲ್ಲಿ ಕೋಲಾರ ಕೆ ಎಸ್ ಆರ್ ಟಿ ಸಿ ವಿಭಾಗೀಯ ಡಿ ಸಿ ಏನ್ ಶ್ರೀನಾಥ್. ಡಿ ಎಂ ಈ ಎಂ ನವೀನ್ ,ಡಿಟಿಒ ಎಂ ಮಂಜುನಾಥ್ ,ಸ್ಟೋರ್ ಆಫೀಸರ್ ಚಂದ್ರಶೇಖರ,ಕನಕ ನೌಕರರ ಬಳಗದ ಜಿಲ್ಲಾಧ್ಯಕ್ಷರಾದ ಡಿ ಶಿವಕುಮಾರ್ ,ಕೆ ಮಂಜುನಾಥ್ ಉಪಾಧ್ಯಕ್ಷರು ,ಎನ್ ಅಶೋಕ್ ,ಕುಮಾರ್ ,ಪ್ರಧಾನ ಕಾರ್ಯದರ್ಶಿ ನಾರಾಯಣಪ್ಪ ,ಮುನಿಯಪ್ಪ ,ರವಿಶಂಕರ್ ,ಸಿದ್ದೇಶ್ ,ಚಲಪತಿ ,ರಮೇಶ್, ಸತೀಶ್ ರಾಜೇಂದ್ರಪ್ರಸಾದ್ ಹರೀಶ್ ಕುಮಾರ್ ರಾಮಮೂರ್ತಿ ಶಿವಣ್ಣ ಮಹದೇವಕುಮಾರ್ ಮುಂತಾದವರಿದ್ದರು.

# ದಾಸ ಶ್ರೇಷ್ಠ ಕನಕದಾಸರ ಜಯಂತಿ ಆಚರಣೆ

**ಚಾಮರಾಜನಗರ:** ಕನಕದಾಸರ ಕೀರ್ತನೆಗಳು ಎಲ್ಲರ ಮನಸ್ಸಿನಲ್ಲಿ ಇದೆ. ಜಾತಿ ಪದ್ಧತಿಯ ವಿರುದ್ಧ ಕೀರ್ತನೆಗಳ ಮೂಲಕ ಸಂದೇಶಗಳನ್ನು ನೀಡಿದವರು ಕನಕದಾಸರು ಎಂದು ಶ್ರೀರಾಮಚಂದ್ರ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಎಂ.ಎಸ್.ಮಾದಯ್ಯ ತಿಳಿಸಿದರು.

ನಗರದ ನ್ಯಾಯಾಲಯ ರಸ್ತೆಯಲ್ಲಿ ಇರುವ ಶ್ರೀರಾಮಚಂದ್ರ ಪ್ರೌಢಶಾಲೆಯಲ್ಲಿ ದಾಸರ ಶ್ರೇಷ್ಠರಾದ ಕನಕದಾಸರ ಜಯಂತಿ ಯನ್ನು ಆಚರಣೆ ಕಾರ್ಯಕ್ರಮದಲ್ಲಿ ಕನಕದಾಸರ ಭಾವಚಿತ್ರಕ್ಕೆ ಪು?ಾರ್ಚನೆ ಮಾಡಿ ಅವರು ಮಾತನಾಡಿದರು.

ನಮ್ಮ ದೇಶಕ್ಕೆ ಕೊಡುಗೆ ನೀಡಿರುವರಲ್ಲಿ ಸಾಧು, ಸಂತರು, ಬಹಳಷ್ಟು ಜನರು ಇದ್ದಾರೆ ಅವರ ವಿಚಾರಗಳನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು, ವಿದ್ಯೆಯ ಜೊತೆಯಲ್ಲಿ ಬೆಳಗಿನ ಸಮಯದಲ್ಲಿ ಧ್ಯಾನವನ್ನು ಮಾಡುವುದರಿಂದ ಮನಸ್ಸು ಶುದ್ಧವಾಗುತ್ತದೆ ಎಂದು ಹೇಳಿದರು. ಸಂಸ್ಥೆಯ ಕಾರ್ಯದರ್ಶಿ ರುದ್ರಮೂರ್ತಿ ಮಾತನಾಡಿ ಕನಕದಾರು ತಮ್ಮ ಜೀವನ್ನೇ ದೇವರ ಧ್ಯಾನಕ್ಕೆ ಮುಡುಪಾಗಿಟ್ಟಿದ್ದರು. ಅವರು ಹತ್ತಿರವಿದ್ದ



ಚಿನ್ನದ ವಡವೆಗಳನ್ನು ಬಡವರಿಗೆ ದಾನಮಾಡಿ ದಾಸರಾಗಿ ಎಲ್ಲರ ಮನಸ್ಸಿಗೆ ಹತ್ತಿರವಾದರು. ಭಕ್ತಿಯಿಂದ ಮಾತ್ರ ನೆಮ್ಮದಿ ಸಾಧ್ಯವಾಗುತ್ತದೆ. ಪ್ರತಿಯೊಬ್ಬರ ಜೀವನದಲ್ಲಿ ಧ್ಯಾನದಿಂದ ಮಾತ್ರ ಎಲ್ಲವನ್ನು ಪಡೆಯಲು ಸಾಧ್ಯ ವಾಗುತ್ತದೆ.ಎಂದರು.

ಪ್ರೌಢಶಾಲೆ ಮುಖ್ಯಶಿಕ್ಷಕಿ ರತ್ನಮ್ಮ ಮಾತನಾಡಿ ಕನಕದಾಸರು ಕವಿಗಳೂ ಮತ್ತು ಸಂತರು.ಕುಲ ಕುಲ ಎಂದು ಒಡೆದಾಡದಿರಿ ಎಂದು ಸಂದೇಶವನ್ನು ಸಾರಿದರು ಕನಕದಾಸರು ಎಂದು ಹೇಳಿದರು. ಈ ಸಂದರ್ಭದಲ್ಲಿ ದೈಹಿಕ ಶಿಕ್ಷಕರಾದ ರಂಗಸ್ವಾಮಿ, ಶಿಕ್ಷಕ ಕುಮಾರ್, ಪರಶಿವಮೂರ್ತಿ, ನಾಗರಾಜು ನಿವೃತ್ತ ಶಿಕ್ಷಕ ವೀರಣ್ಣ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ರಾಜೀವ್‌ಗಾಂಧಿ ಶಾಲೆಯಲ್ಲಿ ಕನಕದಾಸ ಜಯಂತಿ

**ಮೈಸೂರಿನ ರಾಜೀವ್‌ನಗರ 2ನೇ ಹಂತದಲ್ಲಿರುವ ರಾಜೀವ್ ಗಾಂಧಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕನಕದಾಸ ಜಯಂತಿಯನ್ನು ಇಂದು ಆಚರಿಸಲಾಯಿತು. ಚಿತ್ರದಲ್ಲಿ ಮುಖ್ಯ ಶಿಕ್ಷಕ ಎಂ.ಎಸ್.ಪ್ರಸನ್ನಕುಮಾರ್, ಸಹ ಶಿಕ್ಷಕಿಯರು, ಸಿಬ್ಬಂದಿ ವರ್ಗ ಹಾಗೂ ಅಡುಗೆ ಸಿಬ್ಬಂದಿಯನ್ನು ಕಾಣಬಹುದು.**

# ಸತತ ಪರಿಶ್ರಮ, ಜ್ಞಾನದಿಂದ ಸಾಧನೆ ಸಾಧ್ಯ

**ನಾಗಮಂಗಲ:** ಅಗೋಚರ ತುಡಿತ ಮತ್ತು ತಿಳಿವನ್ನು ಹುಡುಕುವುದೇ ಆಧ್ಯಾತ್ಮ, ಜಗತ್ತಿನ ಎಲ್ಲ ಸಾಧನೆಯು ಸತತ ಪರಿಶ್ರಮ ಮತ್ತು ಜ್ಞಾನದಿಂದ ಮಾತ್ರ ಸಾಧ್ಯ ಎಂದು ಹುಣಸೂರಿನ ಮಹಿಳಾ ಸರ್ಕಾರಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ನಂಜುಂಡಸ್ವಾಮಿ ಹರದನಹಳ್ಳಿ ಅಭಿಪ್ರಾಯ ಪಟ್ಟರು.

ನಾಗಮಂಗಲ ತಾಲ್ಲೂಕಿನ ಬಿಜಿ ನಗರದ ಬಿಜಿಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಕನಕದಾಸ ಜಯಂತಿ ವೇದಿಕೆಯಲ್ಲಿ ಪ್ರಧಾನ ಉಪನ್ಯಾಸ ನೀಡಿ ಮಾತನಾಡಿದರು.

'ನಾನು' ಹೋದರೆ ಹೋದೇನು ಎಂಬುದು ಸರಳ ವಾಕ್ಯವೆನಿಸಿದರೂ ಅದರ ಹಿಂದಿನ ಮಾರ್ಮಿಕ ಮಹತ್ವವನ್ನು ತಿಳಿಸಿದ ಕನಕದಾಸರು ದಾಸ ಶ್ರೇಷ್ಠರೆನಿಸಿಕೊಂಡರು. ಬದುಕಿನುದ್ದಕ್ಕೂ ಕಂಡ ನೋವು ನಲಿವುಗಳನ್ನು ತಮ್ಮ ಕೀರ್ತನೆಗಳ ಮೂಲಕ ರಚಿಸಿ ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಪ್ರಯತ್ನ ಮಾಡಿದ್ದಾರೆ. ಮಾಯೆಯ ಪಾಶದಿಂದ ಮುಕ್ತರಾಗದೆ, ಮನಸ್ಸು ಜಾಗೃತವಾಗದೆ ಜ್ಞಾನ ಸಾಧನೆಯಿಲ್ಲ ಎಂದು ಉಲ್ಲೇಖಿಸಿದ್ದಾರೆ. ಜೀವನ ಪ್ರೀತಿಯನ್ನು ಗಳಿಸುವಂತಹ ಮಾರ್ಗದರ್ಶನ ನೀಡುವ ಮೇರು ಕೃತಿಗಳ ಮೂಲಕ ನಡೆ-ನುಡಿ ಶುದ್ಧವಾಗಿದ್ದರೆ ಜಗತ್ತಿಗೇ ಪರಿಚಯವಾಗುವ ಹಾಗೂ ಉನ್ನತ ಸ್ಥಾನ ದೊರಕುವ ಮಾರ್ಗವನ್ನು



ತಿಳಿಸಿಕೊಟ್ಟಿದ್ದಾರೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಆದಿಚುಂಚನಗಿರಿ ವಿಶ್ವವಿದ್ಯಾಲಯದ ಮಾನವಿಕ ಮತ್ತು ಸಮಾಜ ವಿಜ್ಞಾನಗಳು ವಿಭಾಗದ ಮುಖ್ಯಸ್ಥರು ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಡಾ. ಎ ಟಿ ಶಿವರಾಮು ಮಾತನಾಡಿ ಸರಳತೆಯ ಅರಿವು, ಸೇವಾ ಮತ್ತು ಅರ್ಪಣಾ ಮನೋಭಾವದಿಂದ ವಿಶೇಷವಾದದ್ದನ್ನು ಸಾಧಿಸಬಹುದು ಎಂಬುದನ್ನು ಡಾ. ನಿರ್ಮಲಾನಂದನಾಥ ಸ್ವಾಮೀಜಿಯವರ ನಿತ್ಯ ಮಾರ್ಗದರ್ಶನವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ನಮ್ಮ ನಾಡು ಕಂಡ ಶ್ರೇಷ್ಠ ಸಂತರು, ದಾಸರು, ವಚನಕಾರರು, ವಿದ್ವಾಂಸರು ಹಾಗೂ ದಾರ್ಶನಿಕರು ಭಕ್ತಿ-ನೀತಿಯ ವಿವಿಧ ಆಯಾಮಗಳನ್ನು ತಿಳಿಸಿಕೊಟ್ಟಿದ್ದಾರೆ. ಪ್ರಸ್ತುತ ನಡೆ-ನುಡಿ-ಧ್ಯೇಯ ಒಂದಾದರೆ ತತ್ವಪಾಲನೆಯಾಗುತ್ತದೆ ಎಂದು ಹೇಳುವ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನಾವಿದ್ದೇವೆ. ಭಕ್ತಿ ಬೆರೆತರೆ ಮಾತ್ರವೇ ನೀರು ತೀರ್ಥವಾಗಿ, ಅಗ್ನಿ ಜ್ಯೋತಿಯಾಗಿ ಮತ್ತು ಆಹಾರವು ಪ್ರಸಾದವಾಗಲು ಸಾಧ್ಯ ಎಂದ ಹರಿದಾಸರ ತತ್ವವನ್ನರಿತು ಬದುಕನ್ನು ಬೆಳಗಿಸಿಕೊಳ್ಳಬೇಕು ಎಂದರು.

ದಿನದ ವಿಶೇಷತೆಯನ್ನು ಕುರಿತು ವಿದ್ಯಾರ್ಥಿಗಳಾದ ಶಾರದಾ ಮತ್ತು ವೆಂಕಟೇಶ್ ಮಿರಾಜ್ಕರ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಎ ಸಿ ದೇವಾನಂದ್, ಟಿ ಎನ್ ಶ್ರೀನಿವಾಸ್, ವಿ ಲೋಕೇಶ್, ಎ ಹೆಚ್ ಗೋಪಾಲ್, ಎಂ ಶೋಭಾ, ಸಿ ಎಲ್ ಶಿವಣ್ಣ, ಸೌಮ್ಯ ಎನ್ನೆಸ್ ಹಾಗೂ ಇತರರಿದ್ದರು.

# 'ಕೀರ್ತನೆಗಳ ಮೂಲಕ ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದಲು ಯತ್ನಿಸಿದ ಕನಕದಾಸರು'

**ಚಾಮರಾಜನಗರ:** ನಗರದಜಿಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ'ಭಕ್ತ ಶ್ರೇಷ್ಟಕನಕದಾಸ'ರ 537ನೇ ನೇ ಜಯಂತಿಕಾರ್ಯಕ್ರಮ ನಡೆಯಿತು.

ಕನಕದಾಸರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದ ಶಾಸಕ ಸಿ. ಪುಟ್ಟರಂಗಶೆಟ್ಟಿ ಮಾತನಾಡಿ, ಕನಕದಾಸರು ಕುಲ ಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯನೇನಾದರೂ ಬಲ್ಲಿರಾಎಂದು ಜಾತಿಯ ವ್ಯವಸ್ಥೆಯನ್ನು ಪ್ರಶ್ನಿಸಿದ್ದರು. ತಮ್ಮ ಕೀರ್ತನೆಗಳ ಮೂಲಕ ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದಲು ಯತ್ನಿಸಿದ್ದರು ಎಂದು ಹೇಳಿದರು.

ಜಿಲ್ಲಾಕಾಂಗ್ರೆಸ್‌ಉಪಾಧ್ಯಕ್ಷ ಬಿ,ಕೆ ರವಿಕುಮಾರ್ ಮಾತನಾಡಿ, ಸಮಾಜ ಸುಧಾರಣೆಗೆದುಡಿದ ಮಹಾನ್ ವ್ಯಕ್ತಿಗಳನ್ನು ಒಂದು ಸಮುದಾಯಕ್ಕೆ ಸೀಮಿತವಾಗಿಸಬಾರದು. ಅವರ ವಿಚಾರಧಾರೆಗಳನ್ನು ಅರ್ಥ ಮಾಡಿಕೊಂಡು ನಮ್ಮಜೀವನದಲ್ಲಿ ಅಳವಡಿಸಿ ಕೊಳ್ಳಬೇಕು, ಕನಕದಾಸರು ರಚಿಸಿರುವ ಕೃತಿಗಳನ್ನು ಓದುವ ಮೂಲಕ ಕನಕದಾಸರ ಆದರ್ಶಗಳನ್ನು ಅವರ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಚುಡಾಅಧ್ಯಕ್ಷ ಮಹಮದ್‌ಅಸ್ಗರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವು, ಆರ್,ಮಹದೇವ್, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷಎ.



ಎಸ್.ಗುರುಸ್ವಾಮಿ, ಜಿಪಂ ಮಾಜಿ ಸದಸ್ಯ ಕೆರಹಳ್ಳಿ ನವೀನ್, ಪದ್ಮಪುರುಷೋತ್ತಮ್, ತಾ,ಪಂ ಮಾಜಿಸದಸ್ಯಕುಮಾರ್‌ನಾಯಕ್, ಮಹದೇವಶೆಟ್ಟಿ, ಎಪಿಎಂಸಿ ಅದ್ಯಕ್ಷ ಸೋಮೇಶ್, ಕಾಗಲವಾಡಿಚಂದ್ರು, ನಸ್ರುಲ್ಲಾಖಾನ್, ಬಗರ್ ಹುಕುಂ ಸಾಗುವಳಿ ಸಮಿತಿ ಸದಸ್ಯರವಿ,ಅಯೂಬ್ ಖಾನ್,ಆರ್.ಉಮೇಶ್, ನಗರಸಭೆ ಮಾಜಿ ಸದಸ್ಯ ಪುಟ್ಟಸ್ವಾಮಿ, ಅಪ್ಸರ್‌ಅಹಮದ್, ಜಿ.ಡಿ.ಪ್ರಕಾಶ್, ಮರಿಯಾಲಹುಂಡಿಕುಮಾರ್, ಪಟೇಲ್ ಮಹದೇವಸ್ವಾಮಿ, ಸೇವಾದಳನಾಗರಾಜು, ಶೇಷಣ್ಣ. ಜಯರಾಜ್, ಸೋಮಣ್ಣ, ಸ್ವಾಮಿ,ರವಿಗೌಡ, ಕರಿನಂಜನಪುರಸ್ವಾಮಿ, ಅಶೋಕ್, ದ್ವಾರ್ಕಿ,ಸೇರಿದಂತೆ ಪಕ್ಷದಕಾರ್ಯಕರ್ತರು ಪಾಲ್ಗೊಂಡಿದ್ದರು.

# ಸಂಜೆ ಟಿಪ್ಸ್

## ವಂಡರ್ಲಾ ಮಕ್ಕಳ ದಿನಾಚರಣೆ



ಭಾರತದ ಅತಿದೊಡ್ಡ ಅಮ್ಯೂಸ್ಮೆಂಟ್ ಪಾರ್ಕ್ ಸರಪಳಿಯಾದ ವಂಡರ್ಲಾ ಹಾಲಿಡೇಸ್ ಲಿಮಿಟೆಡ್, ಈ ಸಲದ ಮಕ್ಕಳ ದಿನಾಚರಣೆಯನ್ನು ವಿಶಿಷ್ಟವಾಗಿ ಆಚರಿಸಿದೆ. ನವೆಂಬರ್ 17 ರಂದು ಫಂಡ್ ಎ ಚೈಲ್ಡ್ ಇನ್ ಇಂಡಿಯಾ ದಿಂದ ವಂಡರ್ಲಾ ಬೆಂಗಳೂರಿಗೆ 300 ಮಕ್ಕಳನ್ನು ಸ್ವಾಗತಿಸಿದೆ. ಆ ದಿನವಿಡೀ ಮಕ್ಕಳು ನಗು, ಚಟುವಟಿಕೆಗಳು ಮತ್ತು ರೋಮಾಂಚಕ ಅನುಭವಗಳಲ್ಲಿ ತೇಲಿಹೋಗಲಿವೆ. ಪ್ರತಿ ಮಗುವಿಗೂ ಉಚಿತ ಪ್ರವೇಶ, ಉಪಾಹಾರ, ವೇಷಭೂಷಣಗಳು, ಊಟ, ತಿಂಡಿ ಮತ್ತು ಲಾಕರ್ಗಳನ್ನು ಒದಗಿಸಲಾಯಿತು ಈ ಸಲದ ಮಕ್ಕಳ ದಿನಾಚರಣೆಯ ಅಂಗವಾಗಿ ವಂಡರ್ಲಾ, ಬೆಂಗಳೂರು ಮಕ್ಕಳ ಮನಸೆಳೆಯುವ ರೋಮಾಂಚನಕಾರಿ ಘಟನೆಗಳ ಸರಣಿಯನ್ನು ಸಂಗ್ರಹಿಸಿದೆ! ಚಿತ್ರಕಲೆ ಸ್ಪರ್ಧೆ ಇರುತ್ತದೆ; ನಂತರ ಕ್ರೀಮ್ ದ ಕೇಕ್ ಕೇಕ್ ಅಥವಾ ಡೋನಟ್ ಇರುತ್ತದೆ. ಮಕ್ಕಳಿಗೆ ಸೃಜನಾತ್ಮಕ ಸ್ಪರ್ಧೆಗಳಲ್ಲಿ ಭಾಗವಹಿಸಲು ಮತ್ತು ರುಚಿಕರವಾದ ತಿನಿಸುಗಳನ್ನು ಸವಿಯಲು ಅವಕಾಶವಿರುತ್ತದೆ. ಒಟ್ಟಿನಲ್ಲಿ, ಈ ಮಕ್ಕಳ ದಿನ ಅವರ ಪಾಲಿಗೆ ಅವಿಸ್ಮರಣೀಯ ದಿನವಾಯಿತು. ಮಕ್ಕಳ ದಿನಾಚರಣೆ ಇರುವುದೇ ಚಿಕ್ಕ ಮಕ್ಕಳಿಗಾಗಿ ಮತ್ತು ಅವರಿಗೆ ಸಂತೋಷವನ್ನು ನೀಡುವುದಕ್ಕಾಗಿ. ಈ ಅದ್ಭುತವಾದ ಮಕ್ಕಳನ್ನು ವಂಡರ್ಲಾ, ಬೆಂಗಳೂರಿನಲ್ಲಿ ಕರೆತರುವುದು ನಮಗೊಂದು ಗೌರವ ಎಂದು ವಂಡರ್ಲಾ ಹಾಲಿಡೇಸ್ ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕ ಅರುಣ್ ಕೆ. ಚಿತ್ತಿಲಪ್ಪಿಳ್ಳಿ ಹೇಳಿದರು. ಈ ಕಾರ್ಯಕ್ರಮವು ಕೇವಲ ಒಂದು ಆಚರಣೆ ಮಾತ್ರವಲ್ಲ; ಇದು ಸಂತೋಷವನ್ನು ಹರಡಲು ಮತ್ತು ಮಕ್ಕಳು ನಿರಾತಂಕವಾಗಿ ಮೋಜು ಮಾಡುವ ಸುರಕ್ಷಿತ ಸ್ಥಳವನ್ನು ಸೃಷ್ಟಿಸುವ ಗುರಿಯನ್ನು ಹೊಂದಿರುವ ಉಪಕ್ರಮವಾಗಿದೆ. ಈ ಮಕ್ಕಳಲ್ಲಿ ಅನೇಕರಿಗೆ ಈ ರೀತಿಯ ದಿನವನ್ನು ಅನುಭವಿಸಲು ಅವಕಾಶವೇ ಹೊಂದಿಲ್ಲದಿರಬಹುದು. ಅವರಿಗೆ ಸಂಪೂರ್ಣ ಸಂತೋಷದ ಕ್ಷಣಗಳನ್ನು ನೀಡಲು ನಾವು ಬದ್ಧರಾಗಿದ್ದೇವೆ. ಅಲ್ಲಿ ಅವರಿಗೆ ತಾವೂ ಎಲ್ಲರಲ್ಲಿ ಒಂದು ಮತ್ತು ಎಲ್ಲರೂ ನಮ್ಮನ್ನು ಪ್ರೀತಿಸುತ್ತಾರೆ ಎಂಬ ಭಾವನೆಯನ್ನು ಹೊಂದುತ್ತಾರೆ. ಈ ಅನುಭವಗಳು ಅವರಿಗೆ ಅವರ ಜೀವನವಿಡೀ ಮಧುರ ಕ್ಷಣಗಳನ್ನು ನೀಡುತ್ತವೆ ಮತ್ತು ಸ್ಫೂರ್ತಿ ನೀಡುತ್ತವೆ ಎಂದು ನಾವು ಭಾವಿಸುತ್ತೇವೆ ಎಂದರು.

## ಈರುಳ್ಳಿ ಗೊಜ್ಜು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಈರುಳ್ಳಿ-2 ದೊಡ್ಡ ಗಾತ್ರದ್ದು, 1-ಟೊಮೆಟೊ, 3 ಎಸಳು-ಬೆಳ್ಳುಳ್ಳಿ, 2 ಹಸಿಮೆಣಸು, ಹುರಿಕಡಲೆ-1 ಟೇಬಲ್ ಸ್ಪೂನ್, ತೆಂಗಿನ ತುರಿ-2 ಟೇಬಲ್ ಸ್ಪೂನ್, ಜೀರಿಗೆ-1/2 ಟೀ ಸ್ಪೂನ್, ಸಾರಿನ ಪುಡಿ-1 ಟೇಬಲ್ ಸ್ಪೂನ್, ½ ಟೇಬಲ್ ಸ್ಪೂನ್ ಸಾಸಿವೆ, ರುಚಿಗೆ ತಕ್ಕಷ್ಟು, ಉಪ್ಪು, ಎಣ್ಣೆ-2 ಟೇಬಲ್ ಸ್ಪೂನ್, ಉದ್ದಿನಬೇಳೆ-1 ಟೀ ಸ್ಪೂನ್, 1 ಟೇಬಲ್ ಸ್ಪೂನ್ ನಷ್ಟು-ಕಡಲೆಬೇಳೆ, ಹುಣಸೆಹಣ್ಣಿನ ರಸ-1 ಟೇಬಲ್ ಸ್ಪೂನ್ ನಷ್ಟು, ಕರಿಬೇವು-ಸ್ವಲ್ಪ, ನೀರು-ಅಗತ್ಯವಿರುವಷ್ಟು.

### ಮಾಡುವ ವಿಧಾನ

ಮೊದಲಿಗೆ ಗ್ಯಾಸ್ ಮೇಲೆ ಒಂದು ಬಾಣಲೆ ಇಟ್ಟು ಅದಕ್ಕೆ ಸ್ವಲ್ಪ ಎಣ್ಣೆ ಹಾಕಿ. ನಂತರ ಸಾಸಿವೆ ಹಾಕಿ, ಚಟಪಟ ಎಂದಾಗ ಕಡಲೆಬೇಳೆ, ಉದ್ದಿನಬೇಳೆ ಹಾಕಿ. ಇದು ಕೆಂಪಗಾದ ನಂತರ ಕತ್ತರಿಸಿಟ್ಟುಕೊಂಡ ಈರುಳ್ಳಿ ಹಾಕಿ ಕೈಯಾಡಿಸಿ. 5 ನಿಮಿಷ ಕಡಿಮೆ ಉರಿಯಲ್ಲಿ ಈರುಳ್ಳಿಯನ್ನು ಬೇಯಿಸಿಕೊಳ್ಳಿ. ನಂತರ ಒಂದು ಮಿಕ್ಸಿ ಜಾರಿಗೆ ಹುರಿಕಡಲೆ, ಬೆಳ್ಳುಳ್ಳಿ, ಜೀರಿಗೆ, ಹಸಿಮೆಣಸು, ತೆಂಗಿನ ತುರಿ, ಸ್ವಲ್ಪ ನೀರು ಹಾಕಿ ರುಬ್ಬಿಕೊಳ್ಳಿ. ಈರುಳ್ಳಿ ಬೆಂದ ಕೂಡಲೇ ಅದಕ್ಕೆ ಕತ್ತರಿಸಿಟ್ಟುಕೊಂಡ ಟೊಮೆಟೊ ಹಾಕಿ.ಟೊಮೆಟೊ ಮೆತ್ತಗಾದ ನಂತರ ಹುಣಸೇ ಹಣ್ಣಿನ ನೀರು ಹಾಕಿ. ಅದಕ್ಕೆ ಅರಿಶಿನ, ಸಾರಿನಪುಡಿ, ರುಬ್ಬಿಕೊಂಡ ಮಿಶ್ರಣ, ½ ಕಪ್ ನಷ್ಟು ನೀರು ಸೇರಿಸಿ. ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಚೆನ್ನಾಗಿ ಬೇಯಿಸಿಕೊಂಡರೆ ರುಚಿಕರವಾದ ಈರುಳ್ಳಿ ಗೊಜ್ಜು ರೆಡಿ.

## ಕೊನೆಗೂ ತೆರೆಗೆ ಬರಲು ಸಜ್ಜಾದ ಎಮರ್ಜೆನ್ಸಿ




ಎಮರ್ಜೆನ್ಸಿ ಚಿತ್ರ ಬಿಡುಗಡೆಗೆ ದಿನಾಂಕ ಫಿಕ್ಸ್ ಆಗಿದೆ. ಬಾಲಿವುಡ್ ನಟಿ ಹಾಗೂ ಸಂಸದೆ ಕಂಗನಾ ರಣಾವತ್ ಅಭಿನಯದ ಹಾಗೂ ನಿರ್ಮಾಣದ ಎಮರ್ಜೆನ್ಸಿ ಚಿತ್ರ ಸಾಕಷ್ಟು ವಿವಾದಗಳಿಗೆ ತುತ್ತಾಗಿತ್ತು. ಈ ಕಾರಣಕ್ಕಾಗಿ ವಿಳಂಬಗೊಂಡಿದ್ದ ಚಿತ್ರದ ಬಿಡಗಡೆಗೆ ಕೊನೆಗೂ ಇದೀಗ ದಿನಾಂಕ ನಿಗದಿಯಾಗಿದೆ.

1970ರ ದಶಕದಲ್ಲಿ ಇಂದಿರಾ ಗಾಂಧಿ ಪ್ರಧಾನಿಯಾಗಿದ್ದಾಗ ಘೋಷಿಸಿದ ತುರ್ತು ಪರಿಸ್ಥಿತಿ ಕುರಿತ ಸಿನಿಮಾ ಆದ ಕಾರಣ ಎಮರ್ಜೆನ್ಸಿ ಚಿತ್ರ ಬಾರೀ ಚರ್ಚೆಗೆ ಕಾರಣವಾಗಿತ್ತು. ಸೆನ್ಸಾರ್ ಮಂಡಳಿತ ಆಕ್ಷೇಪದಿಂದ ಚಿತ್ರ ಬಿಡುಗಡೆಗೆ ಅಡಚಣೆಯಾಗಿತ್ತು. ಆದ್ರೆ ಇದೀಗ ಚಿತ್ರ ಬಿಡುಗಡೆಯ ದಿನಾಂಕ ಘೋಷಣೆಯಾಗಿದ್ದು, ಜನವರಿ 17ಕ್ಕೆ ಚಿತ್ರ ಬಿಡುಗಡೆಯಾಗಿಲಿದೆ ಎಂದು ನಟಿ- ಸಂಸದೆ ಕಂಗನಾ ಹೇಳಿದ್ದಾರೆ.

ಈ ಕುರಿತು ಮಾಹಿತಿ ಹಂಚಿಕೊಂಡಿರುವ ಕಂಗನಾ, ರಾಷ್ಟ್ರದ ಅತ್ಯಂತ ಶಕ್ತಿಶಾಲಿ ಮಹಿಳೆಯ ಮಹಾಕಾವ್ಯ ಕಥೆ ಮತ್ತು ಭಾರತದ ಹಣೆಬರಹವನ್ನು ಬದಲಾಯಿಸಿದ ಕ್ಷಣ ಎಮರ್ಜೆನ್ಸಿ ಸಿನಿಮಾ 17/01/2025 ರಂದು ಚಿತ್ರಮಂದಿರಗಳಲ್ಲಿ ಅನಾವರಣಗೊಳ್ಳುತ್ತದೆ ಎಂದು ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ.

ಈ ಹಿಂದೆ ಸೆನ್ಸಾರ್ ಬೋರ್ಡ್ ಆಫ್ ಫಿಲ್ಮ್ ಸರ್ಟಿಫಿಕೇಶನ್ನಿಂದ ಚಿತ್ರದ ಬಿಡುಗಡೆಗೆ ಅನುಮತಿ ಸಿಗದ ಕಾರಣ ಸೆಪ್ಟೆಂಬರ್ 6 ರಂದು ಬಿಡುಗಡೆಯಾಗಬೇಕಿದ್ದ ದಿನಾಂಕವನ್ನು ಮುಂದೂಡಲಾಗಿತ್ತು. ಆ ನಂತರ ತಮ್ಮ ಚಿತ್ರಕ್ಕೆ ಸೆನ್ಸಾರ್ ಸರ್ಟಿಫಿಕೇಟ್ ಪಡೆಯಲು ನಿರ್ಮಾಪಕರು ಬಾಂಬೆ ಹೈಕೋರ್ಟ್ನ ಮೆಟ್ಟಿಲೇರಿದ್ರು.

ಸೆನ್ಸಾರ್ ಮಂಡಳಿ ಚಿತ್ರದಲ್ಲಿ ಮೂರು ದೃಶ್ಯಗಳನ್ನು ಕತ್ತರಿಸುವಂತೆ ಚಿತ್ರತಂಡಕ್ಕೆ ಸೂಚಿಸಿತ್ತು. ಆದರೆ ಕಂಗನಾ ಮತ್ತು ನಿರ್ಮಾಪಕರು ಆ ದೃಶ್ಯಗಳನ್ನು ಕತ್ತರಿಸಲು ಚಿತ್ರತಂಡ ಒಪ್ಪಿರಲಿಲ್ಲ. ಆ ನಂತರ ಬಾಂಬೆ ಹೈಕೋರ್ಟ್ ಪ್ರಕರಣ ಇತ್ಯರ್ಥವಾದ ಪರಿಣಾಮ ಸಿನಿಮಾಗೆ ಇದೀಗ ಸೆನ್ಸಾರ್ ಸರ್ಟಿಫಿಕೇಟ್ ದೊರೆತಿತ್ತು. ಅಂತಿಮವಾಗಿ ಇದೀಗ ಬಿಡುಗಡೆಯ ದಿನಾಂಕ ಘೋಷಿಸಲಾಗಿದೆ.



## ಗರ್ಭಿಣಿಯರು 'ಗೋಡಂಬಿ' ಸೇವಿಸುವುದರಿಂದ ಪ್ರಯೋಜನ



### ಹೆಲ್ತ್ ಟಿಪ್ಸ್

ಗೋಡಂಬಿ ಎಂದರೆ ಎಲ್ಲರ ಬಾಯಲ್ಲೂ ನೀರು ಬರುತ್ತದೆ. ತುಪ್ಪದಲ್ಲಿ ಹುರಿದ ಗೋಡಂಬಿ ತಿನ್ನುತ್ತಾ ಇದ್ದರೆ ಎಷ್ಟು ತಿಂದರೂ ಸಾಲದು ಅನಿಸುತ್ತದೆ. ಗೋಡಂಬಿ ಇಂದ ಮಾಡಿದ ಸಿಹಿ ತಿನಿಸುಗಳು, ಪಾಯಸ, ಹಲ್ವಾ ಎಲ್ಲದಕ್ಕೂ ರುಚಿಯಾಗಿರುತ್ತದೆ ಎನ್ನಬಹುದು. ಆದರೆ ಇಲ್ಲಿ ಗರ್ಭಿಣಿಯರು ಗೋಡಂಬಿ ಸೇವಿಸುವುದರಿಂದ ಆಗುವ ಪ್ರಯೋಜನಗಳೇನು ಎಂಬುದನ್ನು ತಿಳಿದುಕೊಳ್ಳೋಣ.

ಗೋಡಂಬಿಯಲ್ಲಿ ಝಿಂಕ್ ಹೇರಳವಾಗಿದೆ. ಇದು ಮಗುವಿನ ಜೀವಕೋಶಗಳ ಬೆಳವಣಿಗೆಗೆ ಸಹಾಯ ಮಾಡುತ್ತದೆ.

ಹಾಗೇ ಗೋಡಂಬಿಯಲ್ಲಿ ಕ್ಯಾಲ್ಸಿಯಂ ಅಂಶವು ಇರುವುದರಿಂದ ಮಗುವಿನ ಮೂಳೆಯ ಬೆಳವಣಿಗೆಗ ಇದು ಸಹಕಾರಿಯಾಗಿದೆ.

ಇನ್ನು ಗೋಡಂಬಿಯಲ್ಲಿ ಕಬ್ಬಿಣದಂಶ ಇದೆ. ಕಬ್ಬಿಣದಂಶವು ಕೆಂಪು ರಕ್ತ ಕಣಗಳ ಬೆಳವಣಿಗೆಗೆ ಸಹಾಯ ಮಾಡುತ್ತದೆ. ರಕ್ತಹೀನತೆಯ ವಿರುದ್ಧ ಹೋರಾಡುತ್ತದೆ. ಹಾಗೇ ಗರ್ಭಿಣಿಯರಿಗೆ ಸುಸ್ತಾಗದಂತೆ ಕಾಪಾಡುತ್ತದೆ.

ಗೋಡಂಬಿಯಲ್ಲಿ ನಾರಿನಾಂಶವು ಹೆಚ್ಚಿರುತ್ತದೆ. ಇದು ಗರ್ಭಿಣಿಯರಿಗೆ ಮಲಬದ್ಧತೆಯಾಗದಂತೆ ಕಾಪಾಡುತ್ತದೆ. ಗೋಡಂಬಿಯಲ್ಲಿರುವ ಮೆಗ್ನೇಷಿಯಂನಿಂದ ಗರ್ಭಿಣಿಯರಿಗೆ ತಲೆನೋವು, ಮೈಗ್ರೇನ್ ಬಾರದಂತೆ ತಡೆಯುತ್ತದೆ.

ಇದರಲ್ಲಿನ ಪೋಟ್ಯಾಷಿಯಂ ಅಧಿಕ ರಕ್ತದೊತ್ತಡವನ್ನು ಸಮತೋಲನದಲ್ಲಿರಿಸುತ್ತದೆ.

ಹಾಗೇ ಎಲ್ಲರಿಗೂ ಈ ಗೋಡಂಬಿ ಆಗಿಬರುವುದಿಲ್ಲ. ಕೆಲವರಿಗೆ ಇದನ್ನು ಸೇವಿಸಿದರೆ ಅಲರ್ಜಿ ಆಗುತ್ತದೆ. ತುರಿಕೆ ಉಂಟಾಗುವ ಸಾಧ್ಯತೆ ಇರುತ್ತದೆ.

ಇನ್ನು ಅತೀಯಾಗಿ ಸೇವಿಸುವುದರಿಂದ ಸೋಡಿಯಂ ಲೆವಲ್ ಜಾಸ್ತಿಯಾಗುತ್ತದೆ. ಇದು ರಕ್ತದೊತ್ತಡವನ್ನು ಅಸಮತೋಲನಗೊಳಿಸುತ್ತದೆ.

ಕೊಲೆಸ್ಟ್ರಾಲ್ ಅನ್ನು ಕೂಡ ಹೆಚ್ಚಿಸುವ ಸಾಧ್ಯತೆ ಇದೆ. ಹಾಗಾಗಿ ಹಿತಮಿತವಾಗಿ ತಿಂದರೆ ಒಳ್ಳೆಯದು.

## ಮನಸೆಳೆದ ರಮ್ಯ ಸಂಯೋಜನೆಯ ಭಕ್ತಿಪೂರ್ಣ ನೃತ್ಯಾರ್ಪಣ



ಅಂದು 'ನಯನ' ರಂಗಮಂದಿರದ ವೇದಿಕೆಯ ಮೇಲೆ ಸುಂದರ ವೇಷಭೂಷಣ -ಅಲಂಕಾರಗಳಿಂದ ಕಂಗೊಳಿಸುತ್ತಿದ್ದ ಉತ್ಸಾಹೀ ಉದಯೋನ್ಮುಖ ನೃತ್ಯ ಕಲಾವಿದರು ಅಮಿತ ನೃತ್ಯ ಸಂಭ್ರಮದಿಂದ ನರ್ತಿಸಿ ಕಲಾರಸಿಕರ ಮೆಚ್ಚುಗೆ ಗಳಿಸಿದರು. ಅದು 'ಅಮೃತ ಕಲಾಮಂದಿರ'ದ ಹದಿನೈದನೆಯ ವಾರ್ಷಿಕೋತ್ಸವದ ಸಂದರ್ಭ. ನೃತ್ಯಕ್ಷೇತ್ರದಲ್ಲಿ ಹೆಸರಾಂತ ನಾಟ್ಯಗುರು ವಿದುಷಿ. ಹರಿಣಿ ಹರಿದಾಸ್, ತಮ್ಮ ವಿದ್ಯಾರ್ಥಿ ವೃಂದವನ್ನು ಬಹು ಬದ್ಧತೆಯಿಂದ, ಉತ್ತಮ ತರಬೇತಿ ನೀಡಿ ವಿವಿಧ ಭಕ್ತಿಪ್ರಧಾನ ಕೃತಿಗಳಿಗೆ, ತನ್ನ ನುರಿತ ನೃತ್ಯ ಸಂಯೋಜನೆಯ ರಂಗು ನೀಡಿ, ಅತ್ಯುತ್ಸಾಹದ ನೃತ್ಯ ಪ್ರದರ್ಶನ ಸಾಕಾರಗೊಳ್ಳಲು ಬೆಂಬಲವಾಗಿದ್ದರು.

ವಯಸ್ಸಿನಲ್ಲಿ ತುಂಬಾ ಕಿರಿಯರಾದರೂ ಮಕ್ಕಳು, ಬಹು ಆಸಕ್ತಿಯಿಂದ ನಾಟ್ಯ ಕಲಿತು ಅಂಗಶುದ್ಧ, ಸುಂದರಾಭಿನಯದ ನರ್ತನದಿಂದ ತಮ್ಮ ಪ್ರತಿಭೆಯನ್ನು ಮೆರೆದದ್ದು ಮುದನೀಡಿತು. 'ಪ್ರಥಮ ಪೂಜಿತ ಗಣಪತಿ'ಯ ಶ್ಲೋಕಾರ್ಪಣೆಯಿಂದ ಶುಭಾರಂಭಗೊಂಡ ನೃತ್ಯ ಕಾರ್ಯಕ್ರಮದಲ್ಲಿ ಆಯ್ಕೆ ಮಾಡಿದ ಕೃತಿಗಳು ವೈವಿಧ್ಯಪೂರ್ಣವಾಗಿದ್ದವು. ಭಕ್ತಿರಸ ಪ್ರಧಾನ ಕೃತಿಗಳ ಸಾಲಿನಲ್ಲಿ ಸರಸ್ವತಿಯ ಸ್ತುತಿ, ಮತ್ತು 'ಹರಿ ಕುಣಿದ', 'ಕುಣಿದಾಡೋ ಕೃಷ್ಣ' ಮನಮೋಹಕ ಅಭಿನಯ- ಮನಸೆಳೆವ ಆಂಗಿಕಗಳಿಂದ ಇಷ್ಟವಾದವು. ಸಮೂಹ ನೃತ್ಯದಲ್ಲಿ ಕಲಾವಿದರ ನಡುವಿನ ಸಾಮರಸ್ಯ, ಲಯಬದ್ಧ ಚಲನೆ ನೃತ್ಯದ ಚೆಲುವನ್ನು ವೃದ್ಧಿಸಿದವು.

ಪುಟ್ಟಕಲಾವಿದೆ ಕು. ಲೇಖನ, ಪುರಂದರ ದಾಸರು ರಚಿಸಿದ 'ಆಡಿದನೋ ರಂಗ ಅದ್ಭುತದಿಂದಲಿ..' ? ಕೃತಿಯಲ್ಲಿ ಶ್ರೀಕೃಷ್ಣನ ಸಾಹಸ ಗಾಥೆಯನ್ನು, ಕಣ್ಮನ ಸೆಳೆದ ಕಣ್ಣಿನ ಚಲನೆ- ರಮ್ಯ ನೃತ್ತಗಳ ಹಾಗೂ ಆಂಗಿಕಾಭಿನಯದ ಮೋಹಕತೆಯ ನರ್ತನದಿಂದ ಗಮನ ಸೆಳೆದಳು. ಬಾಲಪ್ರತಿಭೆಯಾದ ಇವಳು, ವಿವಿಧ ಸಂಚಾರಿಗಳ ಮೂಲಕ, ಬೆರಗು ಹುಟ್ಟಿಸಿದ ಯೋಗ ಭಂಗಿಗಳ ನೈಪುಣ್ಯತೆಯನ್ನು ಪ್ರದರ್ಶಿಸಿದಳು.

ಮುಂದೆ- 'ತಂಬೂರಿ ಮೀಟಿದವ, ಭವಾಬ್ಧಿ ದಾಟಿದವ' ಸುಮನೋಹರ ಕೃತಿಗೆ ನರ್ತಿಸಿದ ಕಲಾವಿದೆಯರು ತಮ್ಮ ತನ್ಮಯತೆ ತುಂಬಿದ ಭಾವಾಭಿನಯದಲ್ಲಿ ನೋಡುಗರ ಮನಸ್ಸನ್ನು ಗೆದ್ದುಕೊಂಡರು. ಅನಂತರ- 'ಶಿವಪದ' ? ( ರಾಗಮಾಲಿಕೆ ಮತ್ತು ಆದಿತಾಳ) ? 'ನಟನ ಮನೋಹರ ನಾಗಾಭರಣ'ನ ವಿಶಿಷ್ಟ ವ್ಯಕ್ತಿತ್ವವನ್ನು ಕಲಾವಿದೆಯರು ತಮ್ಮ ಪರಿಣಾಮಕಾರಿ ಅಭಿನಯದಲ್ಲಿ, ಹೆಜ್ಜೆ- ಗೆಜ್ಜೆಗಳ ಚೈತನ್ಯದಲ್ಲಿ ಉತ್ತಮ ಚಿತ್ರಣವನ್ನು ಕಟ್ಟಿಕೊಟ್ಟರು. ಶಿವ, ವಿಷಕಂಠನಾದ ಪ್ರಸಂಗದ ಸಂಚಾರಿಯೊಂದಿಗೆ, ಲಯಾತ್ಮಕ ಕೊನ್ನಕೋಲುಗಳಿಗೆ ತಾಳ- ಲಯಬದ್ಧವಾಗಿ ನೃತ್ಯ ಝೇಂಕಾರ ಮಿಡಿದು, ಮಿಂಚಿನ ಸಂಚಾರದ ನೃತ್ತಗಳ ಸೊಗಸನ್ನು ಮೆರೆದರು. ವಿದುಷಿ. ಹರಿಣಿಯವರ ತಾಂಡವ ನಾಟ್ಯದ ನುರಿತ ನೃತ್ಯ ಸಂಯೋಜನೆ ಕಣ್ಮನ ಸೆಳೆದರೆ, ಜಿ. ಗುರುಮೂರ್ತಿ ಅವರ ಶಕ್ತಿಯುತ ಕೃತಿಗೆ, ಬಾಲ ಸುಬ್ರಮಣ್ಯ ಶರ್ಮ ಅವರ ಸೊಗಸಾದ ಗಾಯನ ಅತ್ಯಂತ ಪ್ರಭಾವಶಾಲಿಯಾಗಿತ್ತು. ಸಪ್ತಸ್ವರಗಳೇ ಶಿವನ ಆಭರಣವಾಗಿ ಬೆರಗುಗೊಳಿಸಿದ ನೃತ್ಯ ಶೋಭಾಯಮನವಾಗಿತ್ತು. ಅನಂತರ- ಭಾಗ್ಯದ ಲಕ್ಷ್ಮಿಯನ್ನು ಭಕ್ತಿ-ಪ್ರೀತಿಯಿಂದ ಆಹ್ವಾನಿಸಿ, 'ಕಮಲದ ಮೊಗದೋಳೆ ...ಕಮಲದ ಕಣ್ಣೋಳೆ' ಎಂದು ಲಕ್ಷ್ಮಿಯ ಸೌದರ್ಯ- ಮಹತ್ವವನ್ನು ಕಲಾವಿದೆಯರು ತಮ್ಮ ಲಾಸ್ಯಪೂರ್ಣ ಆಂಗಿಕಾಭಿನಯದ ಮೂಲಕ ಬಣ್ಣಿಸಿದರು. ಮಹಿಷಾಸುರ ಮರ್ಧಿನಿಯ ಭಯಂಕರ ಸ್ವರೂಪ, ನೃತ್ತಗಳ ಮೆರುಗು ಸಂಚಾರಿ ಕಥನದೊಂದಿಗೆ ನಿರೂಪಿತವಾಯಿತು. 'ಅಯಗಿರಿ ನಂದಿನಿ ನಂದಿತಾ ಮೇದಿನಿ..' ಯ ಸಾಹಸ ಕಂಡು ಬೆರಗಾದ ದೇವತೆಗಳು, ದೇವಿಯನ್ನು ಕುರಿತು ಆಕೆಯ ಧೈರ್ಯ- ಸಾಹಸವನ್ನು ಕೊಂಡಾಡಿ, ಪ್ರಾರ್ಥಿಸಿದ್ದನ್ನು ಕಲಾವಿದೆಯರು ಭಕ್ತಿಪೂರ್ಣವಾಗಿ ಸುಂದರಾಭಿನಯದೊಂದಿಗೆ ಸಾಕ್ಷಾತ್ಕರಿಸಿದರು. ಅಂತ್ಯದ 'ಅಂಬಾ ಶಾಂಭವಿ' ಕುರಿತ ಮನನೀಯ ಕೃತಿಯನ್ನು ನರ್ತಕಿಯರು ಪರಿಣಾಮಕಾರಿಯಾಗಿ ನಿರೂಪಿಸಿದರು. 'ಅಮೃತ ಕಲಾಮಂದಿರ'ದ ಶಿಷ್ಯರು ಕೇವಲ ನೃತ್ಯದಲ್ಲಷ್ಟೇ ಪ್ರತಿಭಾನ್ವಿತರಲ್ಲದೆ ತಾವು ನಿಷ್ಠೆಯಿಂದ ಕಲಿತ, ತಮ್ಮ ಸುಶ್ರಾವ್ಯ ಸಂಗೀತದಿಂದಲೂ ರಂಜಿಸಿದ್ದು ವಾರ್ಷಿಕೋತ್ಸವದ ವಿಶೇಷವಾಗಿತ್ತು. ಗುರು- ಶಿಷ್ಯರಿಗೆಲ್ಲರಿಗೂ ಹಾರ್ದಿಕ ಅಭಿನಂದನೆಗಳು.

**। ವೈ. ಕೆ. ಸಂಧ್ಯಾ ಶರ್ಮ**

## ಬಿಳಿ ಕೂದಲು ಕಪ್ಪಾಗಿಸಲು ನೈಸರ್ಗಿಕ ಡೈ

### ಬ್ಯೂಟಿ ಟಿಪ್ಸ್



ಹಿಂದಿನ ಕಾಲದಲ್ಲಿ 60 ವರ್ಷದ ನಂತರ ಬಿಳಿ ಕೂದಲು ಕಾಣಿಸಿಕೊಳ್ಳುತ್ತಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಯುವಕರು ಮತ್ತು ಚಿಕ್ಕ ಮಕ್ಕಳಲ್ಲೂ ಬಿಳಿ ಕೂದಲಿನ ಸಮಸ್ಯೆ ಕಾಡುತ್ತಿದೆ. ಇದಕ್ಕೆ ಮುಖ್ಯ ಕಾರಣ ಒತ್ತಡದ ಜೀವನ ಶೈಲಿ. ಬಿಳಿ ಕೂದಲನ್ನು ಕಪ್ಪಾಗಿಸಲು ರಾಸಾಯನಿಕಯುಕ್ತ ಹೇರ್ ಡೈ ಗಳನ್ನು ಬಳಸುವುದರಿಂದ ಕೂದಲು ಮೃದುತ್ವವನ್ನು ಕಳೆದುಕೊಂಡು ಹಾನಿಗೊಳಗಾಗುತ್ತದೆ.

ನೈಸರ್ಗಿಕವಾಗಿ ಬಿಳಿಕೂದಲನ್ನು ಕಪ್ಪಾಗಿಸುವುದರಿಂದ ಕೂದಲ ಮೇಲಾಗುವ ಅಡ್ಡ ಪರಿಣಾಮಗಳನ್ನು ತಪ್ಪಿಸಬಹುದು. ಕೂದಲನ್ನು ನೈಸರ್ಗಿಕವಾಗಿ ಕಪ್ಪಾಗಿಸಲು ಇಲ್ಲಿದೆ ಸುಲಭ ವಿಧಾನ.

**ವಿಧಾನ1:** ಇಂಡಿಗೋ ಪೌಡರ್ ಅನ್ನು ಕೂದಲಿನ ಅಳತೆಗೆ ಅನುಗುಣವಾಗಿ ತೆಗೆದುಕೊಂಡು ನೀರಿನಲ್ಲಿ ಕಲಸಿ ತಕ್ಷಣವೇ ಕೂದಲಿಗೆ ಲೇಪಿಸಿಕೊಳ್ಳಬೇಕು. ಒಂದು ಗಂಟೆಯ ನಂತರ ಬರೀ ನೀರಿನಲ್ಲಿ ಕೂದಲನ್ನು ತೊಳೆಯಬೇಕು. 48 ಗಂಟೆಗಳ ಬಳಿಕ ಕೂದಲಿಗೆ ಎಣ್ಣೆಯನ್ನು ಲೇಪಿಸಿ ಶ್ಯಾಂಪೂವಿನಿಂದ ಕೂದಲನ್ನು ತೊಳೆಯಬೇಕು.

**ವಿಧಾನ 2:** 7ರಿಂದ8 ಟೇಬಲ್ ಸ್ಪೂನ್ ಮೆಹಂದಿ ಪುಡಿಯನ್ನು ತೆಗೆದುಕೊಂಡು ಬಿಸಿ ನೀರಿನ ಜೊತೆ ಕಲಿಸಿಡಬೇಕು ತಲೆಗೆ ಹಚ್ಚುವ ಮುನ್ನ ಅದಕ್ಕೆ 2 ಟೇಬಲ್ ಸ್ಪೂನ್ ಇಂಡಿಗೋ ಪೌಡರ್ ಅನ್ನು ಬೆರೆಸಿ ಈ ಪೇಸ್ಟನ್ನು ಲೇಪಿಸಿಕೊಂಡು 3 ಗಂಟೆಗಳ ನಂತರ ಬರೀ ನೀರಿನಿಂದ ಕೂದಲನ್ನು ತೊಳೆಯಬೇಕು. ಎರಡು ದಿನದ ಬಳಿಕ ಎಣ್ಣೆಯನ್ನು ಲೇಪಿಸಿ ಶಾಂಪೂವಿನಿಂದ ಕೂದಲನ್ನು ತೊಳೆದರೆ ನೈಸರ್ಗಿಕವಾಗಿ ಕೂದಲು ಕಪ್ಪಾಗುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಕುಟುಂಬ ಸದಸ್ಯರ ಸಹಾಯ, ಪರಿಶ್ರಮಕ್ಕೆ ತಕ್ಕ ಫಲ, ಮನಶಾಂತಿ, ಸುಖ ಭೋಜನ, ನಿಮ್ಮ ಇಷ್ಟದಂತೆ ಕಾರ್ಯಗಳು ನೆರವೇರುತ್ತವೆ.

**ವೃಷಭ:** ಅಧಿಕ ನಷ್ಟ, ಆಲಸ್ಯ, ಎಷ್ಟೇ ಹಣ ಬಂದರೂ ಸಾಕಾಗುವುದಿಲ್ಲ, ಸ್ವಯಂಕೃತ ಅಪರಾಧ, ಉದ್ಯೋಗದಲ್ಲಿ ಬಡ್ತಿ.

**ಮಿಥುನ:** ಪಿತ್ರಾರ್ಜಿತ ಆಸ್ತಿ ವಿವಾದ, ಸದಾ ಸಂಕಟ, ವಾಹನ ಚಾಲಕರಿಗೆ ತೊಂದರೆ, ಮಕ್ಕಳ ವಿಷಯದಲ್ಲಿ ನೋವು.

**ಕಟಕ:** ನಂಬಿಕೆ ದ್ರೋಹ, ದಾಯಾದಿ ಕಲಹ, ಶೀತ ಸಂಬಂಧ ಕಾಯಿಲೆ, ಅನರ್ಥ, ಅಲ್ಪ ಕಾರ್ಯ ಸಿದ್ಧಿ, ಗೆಳೆಯರಿಗೆ ಸಹಾಯ.

**ಸಿಂಹ:** ಮನೆಯಲ್ಲಿ ಸಂತಸ, ಯಾರನ್ನು ಹೆಚ್ಚಾಗಿ ನಂಬಬೇಡಿ, ಅನಾರೋಗ್ಯ, ದಾಂಪತ್ಯದಲ್ಲಿ ಪ್ರೀತಿ, ಅನಾವಶ್ಯಕ ಖರ್ಚು.

**ಕನ್ಯಾ:** ಸೌಜನ್ಯದಿಂದ ವರ್ತಿಸಿ, ಆಹಾರ ಸೇವನೆಯಲ್ಲಿ ವ್ಯತ್ಯಾಸ, ದೂರಲೋಚನೆ, ದ್ವಿಚಕ್ರದಿಂದ ತೊಂದರೆ, ಹಿತ ಶತ್ರುಗಳ ಕಾಟ.

**ತುಲಾ:** ಖರ್ಚುವೆಚ್ಚಗಳಿಗೆ ಕಡಿವಾಣ ಹಾಕಿ, ಅಲ್ಪ ಲಾಭ ಅಧಿಕ ಖರ್ಚು, ಪರಿಚಿತರಿಂದ ಮೋಸಕ್ಕೆ ಒಳಗಾಗುವಿರಿ.

**ವೃಶ್ಚಿಕ:** ಅವಕಾಶ ಪಡೆದುಕೊಳ್ಳುವಿರಿ, ಮನಶಾಂತಿ, ಮಕ್ಕಳ ಬಗ್ಗೆ ಕಾಳಜಿ ವಹಿಸಿ.

**ಧನಸ್ಸು:** ಜನರ ಬೆಂಬಲ, ನಿರೀಕ್ಷಿತ ಆದಾಯ, ಜಮೀನು ವಿಷಯಗಳ ಇತ್ಯರ್ಥ, ಸಣ್ಣ ಪುಟ್ಟ ತೊಂದರೆಗಳಿಂದ ಅಸಮಾಧಾನ.

**ಮಕರ:** ಸಗಟು ವ್ಯಾಪಾರದಲ್ಲಿ ಲಾಭ, ಹೆಚ್ಚು ತಿರುಗಾಟ, ಆರೋಗ್ಯದಲ್ಲಿ ಏರುಪೇರು, ಆಲೋಚಿಸಿ ನಿರ್ಣಯ ಕೈಗೊಳ್ಳುವುದು ಸೂಕ್ತ.

**ಕುಂಭ:** ಚಂಚಲ ಸ್ವಭಾವ, ಮನೋವ್ಯಥೆ, ಸಹವರ್ತಿಗಳಿಂದ ತೊಂದರೆ, ಸುಳ್ಳು ಹೇಳುವುದು.

**ಮೀನ:** ಪಶ್ಚಾತಾಪ ಪಡುವಿರಿ, ನೂತನ ಗೃಹ ನಿರ್ಮಾಣ, ಕುಟುಂಬದಲ್ಲಿ ನೆಮ್ಮದಿ, ಅನ್ಯರಿಂದ ಸಹಾಯ.

## ವಿಶ್ವ ಶೌಚಾಲಯ ದಿನ




ವಿಶ್ವಸಂಸ್ಥೆಯ ಜನರಲ್ ಅಸೆಂಬ್ಲಿಯಿಂದ ನವೆಂಬರ್ 19 ಅನ್ನು ವಿಶ್ವ ಶೌಚಾಲಯ ದಿನವೆಂದು ಗೊತ್ತುಪಡಿಸಲಾಗಿದೆ ಮತ್ತು UN-ನೀರು ಮತ್ತು ಪ್ರಪಂಚದಾದ್ಯಂತದ ಸರ್ಕಾರಗಳ ನಡುವಿನ ಪಾಲುದಾರಿಕೆಯಿಂದ ಪ್ರತಿ ವರ್ಷವೂ ಸಂಘಟಿತವಾಗಿದೆ.

ಸಿಂಗಾಪುರದ ಲೋಕೋಪಕಾರಿ ಜ್ಯಾಕ್ ಸಿಮ್ ಅವರು ನವೆಂಬರ್ 19, 2001 ರಂದು ವಿಶ್ವ ಶೌಚಾಲಯ ಸಂಸ್ಥೆಯನ್ನು ಸ್ಥಾಪಿಸಿದರು, ನಂತರ ದಿನವನ್ನು ವಿಶ್ವ ಶೌಚಾಲಯ ದಿನ ಎಂದು ಘೋಷಿಸಿದರು. ಸಾರ್ವಜನಿಕ ಸಂದೇಶ ಕಳುಹಿಸುವಿಕೆಯ ಸುಲಭಕ್ಕಾಗಿ ವಿಶ್ವ ನೈರ್ಮಲ್ಯ ದಿನ ಕ್ಕೆ ವಿರುದ್ಧವಾಗಿ WTO ವಿಶ್ವ ಶೌಚಾಲಯ ದಿನ ವನ್ನು ಆಯ್ಕೆ ಮಾಡಿದೆ, ಆದರೂ ಶೌಚಾಲಯಗಳು ನೈರ್ಮಲ್ಯ ಉಪಕರಣಗಳ ಮೊದಲ ಹಂತವಾಗಿದೆ.

ತ್ಯಾಜ್ಯನೀರಿನ ಸಂಸ್ಕರಣೆ, ಮಳೆನೀರು ನಿರ್ವಹಣೆ, ಮತ್ತು ಕೈ ತೊಳೆಯುವಿಕೆಯಂತಹ ವಿಶಾಲವಾದ ನೈರ್ಮಲ್ಯ ವ್ಯವಸ್ಥೆಗಳ ಬಗ್ಗೆ ಸಾರ್ವಜನಿಕ ಜಾಗೃತಿಯನ್ನು ಹರಡಲು ಮತ್ತು ಹೆಚ್ಚಿಸಲು ವಿಶ್ವ ಶೌಚಾಲಯ ದಿನವನ್ನು ಮಾಡಲಾಗಿದೆ. ಯುಎನ್ ಸುಸ್ಥಿರ ಅಭಿವೃದ್ಧಿ ಗುರಿಗಳ ಗುರಿ 6 ಸಾಕಷ್ಟು ನೈರ್ಮಲ್ಯಕ್ಕೆ ಕರೆ ನೀಡುತ್ತದೆ, ಇದರಲ್ಲಿ ತ್ಯಾಜ್ಯವನ್ನು ಸುರಕ್ಷಿತವಾಗಿ ಸಂಸ್ಕರಿಸಲಾಗುತ್ತದೆ ಎಂದು ಭರವಸೆ ನೀಡುವ ವ್ಯವಸ್ಥೆಯನ್ನು ಒಳಗೊಂಡಿದೆ. 2010 ರಲ್ಲಿ ನೀರು ಮತ್ತು ನೈರ್ಮಲ್ಯದ ಹಕ್ಕನ್ನು ಯುಎನ್ ಅಧಿಕೃತವಾಗಿ ಮಾನವ ಹಕ್ಕು ಎಂದು ಘೋಷಿಸಿದಾಗ ನೈರ್ಮಲ್ಯ ಬಿಕ್ಕಟ್ಟುಗಳತ್ತ ಗಮನ ಸೆಳೆಯುವ ಅವರ ಪ್ರಯತ್ನಗಳು ಬಲಗೊಂಡವು.

2013 ರಲ್ಲಿ, ಸಿಂಗಾಪುರ್ ಸರ್ಕಾರ ಮತ್ತು ವಿಶ್ವ ಶೌಚಾಲಯ ಸಂಸ್ಥೆಯ ನಡುವಿನ ಜಂಟಿ ಪ್ರಯತ್ನವು ಸಿಂಗಾಪುರದ ಮೊದಲ ಯುಎನ್ ನಿರ್ಣಯವನ್ನು ಎಲ್ಲರಿಗೂ ನೈರ್ಮಲ್ಯ ಎಂದು ಕರೆಯಲು ಕಾರಣವಾಯಿತು. ಈ ನಿರ್ಣಯವು ವಿಶ್ವ ನೈರ್ಮಲ್ಯ ಬಿಕ್ಕಟ್ಟುಗಳನ್ನು ಕೊನೆಗೊಳಿಸಲು ಸಾಮೂಹಿಕ ಕ್ರಮಕ್ಕೆ ಕರೆ ನೀಡಿತು. ಇದರ ಪರಿಣಾಮವಾಗಿ, ವಿಶ್ವ ಶೌಚಾಲಯ ದಿನವನ್ನು ಅಧಿಕೃತ UN ದಿನವೆಂದು ಘೋಷಿಸಲಾಯಿತು ಮತ್ತು ನ್ಯೂಯಾರ್ಕ್ನಲ್ಲಿ ನಡೆದ UN ಜನರಲ್ ಅಸೆಂಬ್ಲಿಯ 67 ನೇ ಅಧಿವೇಶನದಲ್ಲಿ 122 ದೇಶಗಳು ನಿರ್ಣಯವನ್ನು ಅಂಗೀಕರಿಸಿದವು. ವಿಶ್ವ ಶೌಚಾಲಯ ದಿನದ 2015 ರ ಸಂದರ್ಭದಲ್ಲಿ, ಯುನೈಟೆಡ್ ನೇಷನ್ಸ್ ಸೆಕ್ರೆಟರಿ-ಜನರಲ್ ಬಾನ್ ಕಿ-ಮೂನ್ ಅವರು ಎಲ್ಲರಿಗೂ ತೃಪ್ತಿದಾಯಕ ನೈರ್ಮಲ್ಯದ ಪ್ರವೇಶವನ್ನು ಒದಗಿಸುವ ಪ್ರಯತ್ನಗಳನ್ನು ನವೀಕರಿಸಲು ಕ್ರಮವನ್ನು ಪ್ರತಿಪಾದಿಸಿದರು, 2013 ರಲ್ಲಿ ಪ್ರಾರಂಭಿಸಲಾದ ಸ್ವಚ್ಛತೆಯ ಮೇಲೆ ಕ್ರಮಕ್ಕೆ ಕರೆ ಯನ್ನು ಎಲ್ಲರಿಗೂ ನೆನಪಿಸಿದರು ಮತ್ತು ಮುಕ್ತವಾಗಿ ಕೊನೆಗೊಳ್ಳುವ ಗುರಿಯನ್ನು ಹೊಂದಿದ್ದಾರೆ.

ಸಂಜೆ ಮುಗಿಲು
ಮಂಗಳವಾರ
19.11.2024



# ಕೇಂದ್ರ ಸರ್ಕಾರ ಮಹತ್ವದ ನಿರ್ಧಾರ, ನಿವೃತ್ತಿ ವಯಸ್ಸು ಹೆಚ್ಚಳ



**ನವದೆಹಲಿ:** ಪ್ರಸ್ತುತ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸರ್ಕಾರಿ ನೌಕರರಿಗೆ ವಿಶೇಷ ಗಮನ ನೀಡುತ್ತಿವೆ. ಅವರಿಗೆ ಒದಗಿಸಬೇಕಾದ ಸೌಲಭ್ಯಗಳ ಬಗ್ಗೆ ವಿಶೇಷ ಗಮನ ಹರಿಸಲಾಗುತ್ತಿದೆ. ಅದ್ರಂತೆ, ಕೇಂದ್ರ ಸರ್ಕಾರಿ ನೌಕರರು ಈಗಾಗಲೇ ನಿವೃತ್ತಿ ವಯೋಮಿತಿಯನ್ನ ಹೆಚ್ಚಿಸುವಂತೆ ಒತ್ತಾಯಿಸುತ್ತಿದ್ದಾರೆ.

ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿರುವ ನರೇಂದ್ರ ಮೋದಿ ಸರ್ಕಾರ ಕೇಂದ್ರ ಸರ್ಕಾರಿ ನೌಕರರ ನಿವೃತ್ತಿ ವಯಸ್ಸನ್ನು ಹೆಚ್ಚಿಸುವ ನಿರ್ಧಾರ ಕೈಗೊಂಡಿದೆ ಎಂಬ ಸುದ್ದಿ ಬಂದಿದೆ.

ಪ್ರಸ್ತುತ, ಕೇಂದ್ರ ಸರ್ಕಾರಿ ನೌಕರರ ನಿವೃತ್ತಿ ವಯಸ್ಸು 60 ವರ್ಷಗಳಾಗಿದ್ದು, ಇದನ್ನು ಇನ್ನೂ ಎರಡು ವರ್ಷಗಳವರೆಗೆ ಅಂದರೆ 62 ವರ್ಷಗಳವರೆಗೆ ವಿಸ್ತರಿಸುವ ಮಹತ್ವದ ನಿರ್ಧಾರವನ್ನ ಕೇಂದ್ರ ಸಂಪುಟ ತೆಗೆದುಕೊಂಡಿದೆ ಎಂಬ ವರದಿಗಳು ಇತ್ತೀಚೆಗೆ ಬಂದಿವೆ.

ಇದರಿಂದಾಗಿ ಅನುಭವಿ ಉದ್ಯೋಗಿಗಳ ಸೇವೆಯನ್ನ ಹೆಚ್ಚು ದಿನ ಪಡೆಯಬಹುದು ಎಂದು ಕೇಂದ್ರ ಸರ್ಕಾರ ಚಿಂತನೆ ನಡೆಸಿದೆ ಎಂಬ ಸುದ್ದಿ ಹಬ್ಬಿದೆ. ಈಗಿರುವ ಉದ್ಯೋಗಗಳನ್ನ ಬದಲಿಸದೆ, ನಿವೃತ್ತಿ ವಯಸ್ಸನ್ನು ಹೆಚ್ಚಿಸಿರುವುದು ನಿರುದ್ಯೋಗಿಗಳ ಅಸಮಾಧಾನಕ್ಕೆ ಕಾರಣವಾಗುವುದು ಖಚಿತ.

ಈ ವಯೋಮಿತಿ ಹೆಚ್ಚಳ ಪ್ರಸ್ತಾವನೆ ಬಹಳ ದಿನಗಳಿಂದ ಕೇಂದ್ರದಲ್ಲಿ ಬಾಕಿ ಇದೆ. ಇತ್ತೀಚೆಗಷ್ಟೇ ಮಹಾರಾಷ್ಟ್ರ ಮತ್ತು ಜಾರ್ಖಂಡ್ ಚುನಾವಣೆಗೂ ಮುನ್ನ ಕೇಂದ್ರ ಸಚಿವ ಸಂಪುಟ ನೌಕರರ ನಿವೃತ್ತಿ ವಯೋಮಿತಿ ಹೆಚ್ಚಳಕ್ಕೆ ಅನುಮೋದನೆ ನೀಡಿದೆ.

ನಿವೃತ್ತಿ ವಯಸ್ಸನ್ನು ಹೆಚ್ಚಿಸುವ ನಿರ್ಧಾರವು 1 ಏಪ್ರಿಲ್ 2025 ರಿಂದ ಜಾರಿಗೆ ಬರಲಿದೆ ಎಂದು ಅವರು ಹೇಳಿದರು. ಒಟ್ಟಿನಲ್ಲಿ ಈ ನಿರ್ಧಾರದಿಂದ ಕೆಲವು ಲಕ್ಷ ಜನರಿಗೆ ಅನುಕೂಲವಾಗುವುದು ಖಚಿತ.

# ಶ್ರೀಲಂಕಾ ಪ್ರಧಾನಿಯಾಗಿ ಹರಿಣಿ ಅಮರಸೂರ್ಯ ಮರು ನೇಮಕ



**ನವದೆಹಲಿ:** ಹರಿಣಿ ಅಮರಸೂರ್ಯ ಮತ್ತೊಮ್ಮೆ ಶ್ರೀಲಂಕಾದ ಪ್ರಧಾನಿಯಾಗಿ ಆಯ್ಕೆಯಾಗಿದ್ದು, ಅಧ್ಯಕ್ಷ ದಿಸ್ಸಾನಾಯಕೆ ಘೋಷಿಸಿದ್ದಾರೆ. ಇತ್ತೀಚೆಗೆ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ, ಅಧ್ಯಕ್ಷ ದಿಸ್ಸಾನಾಯಕೆ ನೇತೃತ್ವದ ಎಡರಂಗವು 225 ಸದಸ್ಯರ ಸದನದಲ್ಲಿ 159 ಸ್ಥಾನಗಳನ್ನ ಗೆದ್ದಿದೆ. ಈ ಹಿನ್ನೆಲೆಯಲ್ಲಿ ಸೋಮವಾರ ಹೊಸ ಸಚಿವ ಸಂಪುಟವನ್ನ ನೇಮಿಸಲಾಯಿತು. ಹರಿಣಿಗೆ ಪ್ರಧಾನಿಯಾಗುವ ಅವಕಾಶ ನೀಡಲಾಯಿತು. ಹಿರಿಯ ನಾಯಕಿ ವಿಜಿತಾ ಹೆರಾತ್ ಅವರನ್ನು ವಿದೇಶಾಂಗ ಸಚಿವರಾಗಿ ಮರು ನೇಮಕ ಮಾಡಲಾಗಿದೆ. ಜೆವಿಪಿ ನಾಯಕ ಕೆ.ಡಿ.ಲಲಕಂಠ ಅವರಿಗೆ ಕೃಷಿ ಸಚಿವಾಲಯದ ಉಸ್ತುವಾರಿ ವಹಿಸಲಾಗಿದೆ. ದಿಸ್ಸಾನಾಯಕೆ ಅವರು ರಕ್ಷಣಾ ಮತ್ತು ಹಣಕಾಸು ಮುಂತಾದ ಪ್ರಮುಖ ಖಾತೆಗಳನ್ನ ಉಳಿಸಿಕೊಂಡಿದ್ದಾರೆ ಎಂದು ವರದಿಯಾಗಿದೆ.

## ಎಐಎಡಿಎಂಕೆಯೊಂದಿಗೆ ಮೈತ್ರಿ ಸಂಪೂರ್ಣ ಸುಳ್ಳು- ಟಿವಿಕೆ ಸ್ಪಷ್ಟನೆ

**ಚೆನ್ನೈ:** ನಟ ದಳಪತಿ ವಿಜಯ್ ಅವರ ರಾಜಕೀಯ ಪಕ್ಷವಾದ ತಮಿಳಗ ವೆಟ್ರಿ ಕಳಗಂ (ಖಿಗಿಏ), ಸೋಮವಾರ ಎಐಎಡಿಎಂಕೆ ಜೊತೆಗಿನ ಮೈತ್ರಿಯ ವದಂತಿಗಳನ್ನು ಸ್ಪಷ್ಟವಾಗಿ ನಿರಾಕರಿಸಿದೆ. ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧೆ ಮಾಡಲು ವಿಜಯ್ ಅವರ ಟಿವಿಕೆ, ಎಐಎಡಿಎಂಕೆ ಜೊತೆ ಒಪ್ಪಂದ ಮಾಡಿಕೊಂಡಿದೆ. ಎರಡೂ ಪಕ್ಷಗಳು ಒಟ್ಟಾಗಿ ಚುನಾವಣೆ ಎದುರಿಸಲಿವೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ವದಂತಿ ಹಬ್ಬಿತ್ತು. ಈ ಬಗ್ಗೆ ಸೋಮವಾರ ಟಿವಿಕೆ ಸ್ಪಷ್ಟನೆ ನೀಡಿದೆ. ಈ ಬಗ್ಗೆ ಎಕ್ಸ್‌ನಲ್ಲಿಪ ಪೋಸ್ಟ್‌ನಲ್ಲಿ ತಿಳಿಸಿರುವ ಟಿವಿಕೆ, ಈ ಎಲ್ಲ ವರದಿ, ಚರ್ಚೆಗಳು ಸುಳ್ಳು. ತಮಿಳುನಾಡಿನ ಅಭಿವೃದ್ಧಿಗಾಗಿ ಟಿವಿಕೆ ಬದ್ಧವಾಗಿದೆ. ಚುನಾವಣೆಯಲ್ಲಿ ಏಕಾಂಗಿಯಾಗಿ ಸ್ಪರ್ಧೆ ಮಾಡಿ ಬಹುಮತ ಸಾಧಿಸುವ ಮೂಲಕ ಜನರ ಸೇವೆ ಮಾಡುವ ಗುರಿ ಹೊಂದಿದೆ ಎಂದು ತಿಳಿಸಿದೆ. ತಮಿಳಗ ವೆಟ್ರಿ ಕಳಗಂ ಮತ್ತು ಎಐಎಡಿಎಂಕೆ ನಡುವೆ ಮೈತ್ರಿ ಏರ್ಪಟ್ಟಿದೆ ಎಂಬ ವರದಿಗಳಿವೆ. ಇದು ಸುಳ್ಳು ಮತ್ತು ವದಂತಿ. ಈ ಸುದ್ದಿಗೆ ಯಾವುದೇ ಆಧಾರ ಮತ್ತು ಪುರಾವೆಗಳಿಲ್ಲ. ಸಾಮಾಜಿಕ ಮಾಧ್ಯಮಗಳಲ್ಲಿ ರಾಜಕೀಯ ವಿಶ್ಲೇಷಕರ ಹೆಸರಿನಲ್ಲಿ ಈ ವದಂತಿ ಹಬ್ಬಿಸಲಾಗುತ್ತಿದೆ. ತಮಿಳುನಾಡು ಜನರು ಇಂತಹ ಸುಳ್ಳು ಸುದ್ದಿಗಳನ್ನು ತಿರಸ್ಕರಿಸುತ್ತಾರೆ ಎಂದು ಟಿವಿಕೆ ಪ್ರಧಾನ ಕಾರ್ಯದರ್ಶಿ ಎನ್‌ಆನಂದ್ ತಿಳಿಸಿದ್ದಾರೆ.



# ಖರ್ಗೆ ಹಿಂದೂಗಳ ನರಮೇಧಕ್ಕೆ ಕರೆ ನೀಡುತ್ತಿದ್ದಾರೆ :ಬಿಜೆಪಿ



**ನವದೆಹಲಿ:** ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾನುವಾರ ಭಾರತೀಯ ಜನತಾ ಪಕ್ಷ (ಬಿಜೆಪಿ) ಮತ್ತು ರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು (ಆರ್‌ಎಸ್‌ಎಸ್) ವಿಷ ಸರ್ಪಕ್ಕೆ ಹೋಲಿಸಿ, ಅವೆರಡೂ ಭಾರತದಲ್ಲಿ ರಾಜಕೀಯವಾಗಿ ಅತ್ಯಂತ ಅಪಾಯಕಾರಿ ಘಟಕಗಳು ಎಂದು ವಿವಾದಾತ್ಮಕವಾಗಿ ಹೇಳಿಕೆ ನೀಡಿದ್ದಾರೆ.

ಈ ಹೇಳಿಕೆಗೆ ಕೆಂಡಾಮಂಡಲವಾಗಿರುವ ಬಿಜೆಪಿ ಡಿಎಂಕೆ ಬಳಿಕ ಇದೀಗ ಮಲ್ಲಿಕಾರ್ಜುನ ಖರ್ಗೆ ಅವರು ಹಿಂದೂಗಳ ನರಮೇಧಕ್ಕೆ ಕರೆ ನೀಡುತ್ತಿದ್ದಾರೆ ಎಂದು ಆರೋಪಿಸಿದೆ.

ಭಾರತದಲ್ಲಿ ರಾಜಕೀಯವಾಗಿ ಅತ್ಯಂತ ಅಪಾಯಕಾರಿ ಏನಾದರೂ ಇದ್ದರೆ ಅದು ಬಿಜೆಪಿ ಮತ್ತು ಆರ್‌ಎಸ್‌ಎಸ್. ಅವರು ವಿಷ ಇದ್ದಂತೆ. ಹಾವು ಕಚ್ಚಿದರೆ ವ್ಯಕ್ತಿ ಸಾಯುತ್ತಾನೆ. ಅಂತಹ ವಿಷಕಾರಿ ಹಾವನ್ನು ಕೊಲ್ಲಬೇಕು ಎಂದು ಮಹಾರಾಷ್ಟ್ರದ ಸಾಂಗ್ಲಿಯಲ್ಲಿ ನಡೆದ ರ್ಯಾಲಿಯಲ್ಲಿ ಖರ್ಗೆ ಹೇಳಿದ್ದಾರೆ.

ಇದಕ್ಕೆ ಎಕ್ಸ್‌ನಲ್ಲಿ ವಾಗ್ದಾಳಿ ನಡೆಸಿರುವ ಬಿಜೆಪಿ, ಕಾಂಗ್ರೆಸ್ನ ಮಿತ್ರ ಪಕ್ಷವಾದ ಡಿಎಂಕೆ ಬಹಿರಂಗವಾಗಿ ಹಿಂದೂ ನರಮೇಧಕ್ಕೆ ಕರೆ ನೀಡಿದ್ದರು. ಈಗ ಕಾಂಗ್ರೆಸ್ ಅಧ್ಯಕ್ಷ ಖರ್ಗೆ ಅವರು ಕೂಡಾ ಬಿಜೆಪಿ ಮತ್ತು ಆರ್‌ಎಸ್‌ಎಸ್ ಕಾರ್ಯಕರ್ತರ ನರಮೇಧಕ್ಕೆ ಕರೆ ನೀಡುತ್ತಿದ್ದಾರೆ. ಈ ಸಿದ್ಧಾಂತವು ಐಸಿಸ್ ಭಯೋತ್ಪಾದಕರಿಂದ ಹೇಗೆ ಭಿನ್ನವಾಗಿಲ್ಲ. ಅವರು ತಮ್ಮ ನಂಬಿಕೆಗಳೊಂದಿಗೆ ಹೊಂದಿಕೆಯಾಗದ ಯಾರನ್ನೇ ಆದರೂ ನಿರ್ಮೂಲನೆ ಮಾಡುತ್ತಾರೆ.

ಖರ್ಗೆಯವರೆ, ನೀವು ಹಿಂದೂ ಎಂಬ ಕಾರಣಕ್ಕೆ ನಿಮ್ಮ ಕುಟುಂಬವನ್ನು ನಾಶಪಡಿಸಿದ ರಜಾಕಾರರನ್ನು ಏಕೆ ಖಂಡಿಸಲಿಲ್ಲ? ಬದಲಾಗಿ ನೀವು ಬಿಜೆಪಿ ಮತ್ತು ಆರ್‌ಎಸ್‌ಎಸ್, ರಾಷ್ಟ್ರ ನಿರ್ಮಾಣ ಮತ್ತು ಸಾರ್ವಜನಿಕ ಸೇವೆಗೆ ಮೀಸಲಾಗಿರುವ ಸಂಸ್ಥೆಗಳ ವಿರುದ್ಧ ಇಂತಹ ಹೇಳಿಕೆಗಳನ್ನು ನೀಡಲು ಯಾಕೆ ನಿರ್ಧರಿಸಿದಿರಿ? ಕಾಂಗ್ರೆಸ್ ಹಿಂದೂಗಳ ಮೇಲಿನ ಈ ದ್ವೇಷವನ್ನು ಎಂದಿಗೂ ಕಡಿಮೆ ಮಾಡುವುದಿಲ್ಲ. ಒಡೆದು ಆಳುವ ರಾಜಕಾರಣಕ್ಕೆ ಯಾವಾಗಲೂ ಹಿನ್ನಡೆಯಾಗುತ್ತದೆ. ಆ ದಿನಕ್ಕಾಗಿ ಕಾಯುತ್ತಿರಿ ಎಂದು ಬಿಜೆಪಿ ಎಕ್ಸ್ ಪೋಸ್ಟ್‌ನಲ್ಲಿ ಬರೆದಿದೆ.

# ಬ್ರೆಜಿಲ್‌ನಲ್ಲಿ ಪ್ರಧಾನಿ ಮೋದಿಗೆ ವೇದಮಂತ್ರಗಳ ಪಠಿಸಿ ಸ್ವಾಗತ

**ಬ್ರೆಜಿಲ್:** ಪ್ರವಾಸದ ಬಳಿಕ ಪ್ರಧಾನಿ ನರೇಂದ್ರ ಮೋದಿ ಬ್ರೆಜಿಲ್‌ಗೆ ಭೇಟಿ ತೆರಳಿದ್ದಾರೆ. ಜಿ20 ಶೃಂಗಸಭೆಯಲ್ಲಿ ಭಾಗವಹಿಸಲು ಬ್ರೆಜಿಲ್ನ ರಿಯೊ ಡಿ ಜನೈರೊಗೆ ಬಂದಿಳಿದಿರುವ ಅವರನ್ನು ಚಲ್ಲಿರುವ ಭಾರತೀಯ ರಾಯಭಾರಿ ಸುರೇಶ್ ರೆಡ್ಡಿ ಸೇರಿದಂತೆ ಭಾರತೀಯ ಅಧಿಕಾರಿಗಳು ಬರಮಾಡಿಕೊಂಡರು.

ಈ ವೇಳೆ ಪ್ರಧಾನಿ ಮೋದಿ ಅವರಿಗೆ ಸಂಸ್ಕೃತದ ವೇದ ಮಂತ್ರಗಳ ಘೋಷಣೆ ಮೂಲಕ ಸ್ವಾಗತ ಕೋರಲಾಯಿತು. ಇದಲ್ಲದೇ ಹೋಟೆಲ್ನಲ್ಲಿ ದಾಂಡಿಯಾ ನೃತ್ಯ ಪ್ರದರ್ಶಿಸಲಾಯಿತು. ಸಾಂಪ್ರದಾಯಿಕ ಗುಜರಾತಿ ಉಡುಪಿನಲ್ಲಿ ನೃತ್ಯಗಾರರು ಅತ್ಯುತ್ಸಾಹದಿಂದ ಮೋದಿಯವರನ್ನು ಬರಮಾಡಿಕೊಂಡಿದ್ದು, ಈ ಸಂದರ್ಭದಲ್ಲಿ ವೇದ ಮಂತ್ರಗಳನ್ನು ಪಠಿಸಿದ್ದು ವಿಶೇಷವಾಗಿತ್ತು. ಡಯಾಸ್ಪೊರಾ ಪ್ರಧಾನಿ ಮೋದಿಗೆ ಉಡುಗೊರೆಗಳನ್ನು ನೀಡಿದರು. ತಮ್ಮ ಪ್ರವಾಸದ ಅಂತಿಮ ಹಂತದಲ್ಲಿ ಮೋದಿ ನ.19 ರಿಂದ 21 ರವರೆಗೆ ಗಯಾನಾಗೆ ಭೇಟಿ ನೀಡಲಿದ್ದಾರೆ. 50 ವರ್ಷಗಳ ನಂತರ ಗಯಾನಾಕ್ಕೆ ಭಾರತೀಯ ಪ್ರಧಾನಿಯ ಮೊದಲ ಭೇಟಿಯಾಗಿರಲಿದೆ.



## ಜೋ ಬೈಡನ್ ಭೇಟಿ ಅತ್ಯಂತ ಖುಷಿ ನೀಡುತ್ತೆ :ಪ್ರಧಾನಿ ಮೋದಿ



**ನವದೆಹಲಿ:** ಜಿ20 ಶೃಂಗಸಭೆಯ ನಿಮಿತ್ತ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಅಮೆರಿಕ ಅಧ್ಯಕ್ಷ ಜೋ ಬಿಡೆನ್ ಅವರನ್ನು ಭೇಟಿಯಾದರು. ಈ ಕುರಿತು ಟ್ವೀಟ್ ಮಾಡಿರುವ ಅವರು, ಅಮೆರಿಕದ ಅಧ್ಯಕ್ಷರನ್ನು ಭೇಟಿಯು ಯಾವಾಗಲೂ ಖುಷಿಯ ಸಂಗತಿ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಇಂದು ಬೆಳಗ್ಗೆ ಪ್ರಧಾನಿ ಅವರು ಸಿಂಗಾಪುರದ ಕೌಂಟರ್ಪಾರ್ಟ್ ಲಾರೆನ್ಸ್ ವಾಂಗ್, ಯುಎನ್ ಸೆಕ್ರೆಟರಿ ಜನರಲ್ ಆಂಟೋನಿಯೊ ಗುಟೆರೆಸ್ ಮತ್ತು ಬ್ರೆಜಿಲ್ ಅಧ್ಯಕ್ಷ ಲುಲಾ ಡಾ ಸಿಲ್ವಾ ಅವರನ್ನು ಭೇಟಿಯಾದರು. ನಂತರದಲ್ಲಿ ಬ್ರೆಜಿಲ್ಗೆ ಆಗಮಿಸಿದ್ದ ಅವರು, ಅಧ್ಯಕ್ಷ ಬೋಲಾ ಅಹ್ಮದ್ ಟಿನುಬು ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ನೈಜೀರಿಯಾ, ಬ್ರೆಜಿಲ್ ಮತ್ತು ಗಯಾನ ರಾಷ್ಟ್ರಗಳಿಗೆ ಐದು ದಿನಗಳ ಕಾಲ ಪ್ರಧಾನಿ ಮೋದಿ ಅವರು ಪ್ರವಾಸ ಕೈಗೊಂಡಿದ್ದಾರೆ.

## ಮರಣದಂಡನೆಗೆ ಗುರಿಯಾದ ರಾಜೋನಾ ಕಮಾದಾನ ಅರ್ಜಿ 2 ವಾರದಲ್ಲೇ ಇತ್ಯರ್ಥಗೊಳಿಸಿ

**ನವದೆಹಲಿ:** ಪಂಜಾಬ್‌ನ ಮಾಜಿ ಸಿಎಂ ಬಿಯಾಂತ್ ಸಿಂಗ್ ಹತ್ಯೆ ಪ್ರಕರಣದಲ್ಲಿ ಗಲ್ಲು ಶಿಕ್ಷೆಗೆ ಗುರಿಯಾಗಿರುವ ಅಪರಾಧಿ ಬಲ್ವಂತ್ ಸಿಂಗ್ ರಾಜೋನಾ ಸಲ್ಲಿಸಿರುವ ಕ್ಷಮಾದಾನ ಅರ್ಜಿಯನ್ನು ಕೂಡಲೇ ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ರಾಷ್ಟ್ರಪತಿಗಳ ಕಾರ್ಯದರ್ಶಿಗೆ ಸೂಚಿಸಿದೆ. ಬಲ್ವಂತ್ ಸಿಂಗ್ ರಾಜೋನಾ ಸಲ್ಲಿಸಿರುವ ಕ್ಷಮಾದಾನ ಅರ್ಜಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಮುಂದೆ ಮಂಡಿಸಿ, ಎರಡು ವಾರಗಳಲ್ಲಿ ಅರ್ಜಿಯನ್ನು ಇತ್ಯರ್ಥಗೊಳಿಸಬೇಕು ಎಂದು ರಾಷ್ಟ್ರಪತಿಗಳ ಕಾರ್ಯದರ್ಶಿಗೆ ಕೋರ್ಟ್ ನಿರ್ದೇಶಿಸಿದೆ. 90ರ ದಶಕದಲ್ಲಿ ಪಂಜಾಬ್‌ನಲ್ಲಿ ಖಾಲಿಸ್ತಾನಿ ಉಗ್ರರ ಉಪಟಳ ಹೆಚ್ಚಾಗಿದ್ದಾಗ, ಕಡಿವಾಣ ಹಾಕಲು ಬಿಯಾಂತ್ ಸಿಂಗ್ ಸರ್ಕಾರ ದಿಟ್ಟ ಕಾರ್ಯಾಚರಣೆ ಕೈಗೊಂಡಿತ್ತು. ಇದಕ್ಕೆ ಪ್ರತೀಕಾರವಾಗಿ 1995ರ ಆಗಸ್ಟ್ 31ರಂದು ಪಂಜಾಬ್ ಸಚಿವಾಲಯದ ಹೊರಭಾಗದಲ್ಲಿ ನಡೆದ ಬಾಂಬ್ ದಾಳಿಯಲ್ಲಿ ಬಿಯಾಂತ್ ಸೇರಿದಂತೆ 16 ಜನರು ಮೃತಪಟ್ಟಿದ್ದರು.ಈ ಪ್ರಕರಣದಲ್ಲಿ 2007ರಲ್ಲಿಯೇ ಬಲ್ವಂತ್ ಸಿಂಗ್‌ಗೆ ಮರಣದಂಡನೆ ಶಿಕ್ಷೆ ವಿಧಿಸಲಾಗಿತ್ತು. ಇದನ್ನು ರದ್ದುಪಡಿಸುವಂತೆ ಕೋರಿ ಆತ ಸಲ್ಲಿಸಿದ್ದ ಕ್ಷಮಾದಾನ ಅರ್ಜಿಯು ಹಲವು ವರ್ಷಗಳಿಂದ ಇತ್ಯರ್ಥಗೊಂಡಿಲ್ಲ. ಹಾಗಾಗಿ, ಮಾನವೀಯ ನೆಲಗಟ್ಟಿನ ಮೇಲೆ ತನಗೆ ವಿಧಿಸಿರುವ ಮರಣದಂಡನೆಯನ್ನು ಜೀವಾವಧಿ ಶಿಕ್ಷೆಯಾಗಿ ಮಾರ್ಪಡಿಸಬೇಕು ಎಂದು ಆತ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದ. 2023ರ ಮೇ 3ರಂದು ವಿಚಾರಣೆ ನಡೆಸಿದ್ದ ಕೋರ್ಟ್, ಬಲ್ವಂತ್ ಸಿಂಗ್ ಅರ್ಜಿಯನ್ನು ವಜಾಗೊಳಿಸಿತ್ತು.

## ಗ್ಯಾಂಗ್‌ಸ್ಟರ್ ಲಾರೆನ್ ಬಿಷ್ಣೋಯ್‌ನ ಕಿರಿಯ ಸಹೋದರ ಅನ್ಮೋಲ್ ಅರೆಸ್ಟ್?

**ದೆಹಲಿ:** ಕುಖ್ಯಾತ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ನ ಕಿರಿಯ ಸಹೋದರ ಅನ್ಮೋಲ್ ಬಿಷ್ಣೋಯ್ನನ್ನು ಅಮೆರಿಕದಲ್ಲಿ ಬಂಧಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. 2022 ರಲ್ಲಿ ನಡೆದ ಪಂಜಾಬಿ ಗಾಯಕ ಸಿಧು ಮೂಸೆವಾಲಾ ಹತ್ಯೆ, ಕಳೆದ ತಿಂಗಳು ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕ್ ಅವರ ಹತ್ಯೆ ಸೇರಿದಂತೆ ನಟ ಸಲ್ಮಾನ್ ಖಾನ್ ಅವರ ನಿವಾಸದ ಹೊರಗೆ ನಡೆದ ಗುಂಡಿನ ದಾಳಿ ಸೇರಿದಂತೆ ಹಲವು ಪ್ರಮುಖ ಪ್ರಕರಣಗಳಲ್ಲಿ ಅನ್ಮೋಲ್ ಬೇಕಾಗಿದ್ದಾನೆ. ಸೋಮವಾರ ಮುಂಜಾನೆ ಆತನನ್ನು ಬಂಧಿಸಲಾಗಿದೆ ಎಂದು ವರದಿಯಾಗಿದೆ. ಈ ತಿಂಗಳ ಆರಂಭದಲ್ಲಿ ಮುಂಬೈ ಪೊಲೀಸರ ಅಪರಾಧ ವಿಭಾಗವು ಅನ್ಮೋಲ್ನನ್ನು ಯುಎಸ್ನಿಂದ ಮರಳಿ ಕರೆತರಲು ಹಸ್ತಾಂತರ ಪ್ರಕ್ರಿಯೆಯನ್ನು ಪ್ರಾರಂಭಿಸಿತ್ತು. ಆತನ ಬಂಧನಕ್ಕೆ ಮಹಾರಾಷ್ಟ್ರದ ವಿಶೇಷ ನ್ಯಾಯಾಲಯ ಜಾಮೀನು ರಹಿತ ವಾರೆಂಟ್ ಸಹ ಜಾರಿ ಮಾಡಿದೆ. ಜಾಗತಿಕ ಕಾನೂನು ಜಾರಿ ಸಂಸ್ಥೆ ಇಂಟರ್‌ಪೋಲ್ ರೆಡ್ ಕಾರ್ನರ್ ನೋಟಿಸ್ ಸಹ ಜಾರಿ ಮಾಡಿದೆ.ಪಂಜಾಬ್‌ನ ಫಾಜಿಲ್ಕಾ ಮೂಲದ ಅನ್ಮೋಲ್ ಬಿಷ್ಣೋಯ್, ನಕಲಿ ಪಾಸ್‌ಪೋರ್ಟ್ ಬಳಸಿ ಭಾರತದಿಂದ ಪಲಾಯನ ಮಾಡಿದ ನಂತರ ಕೆನಡಾದಲ್ಲಿದ್ದ ಎಂದು ಈ ಹಿಂದೆ ನಂಬಲಾಗಿತ್ತು. ಆತ ರಾಷ್ಟ್ರೀಯ ತನಿಖಾ ಸಂಸ್ಥೆ ದಾಖಲಿಸಿದ ಎರಡು ಪ್ರಕರಣಗಳನ್ನು ಎದುರಿಸುತ್ತಿದ್ದಾನೆ. ಎನ್‌ಐಎ ಆತನನ್ನು ಮೋಸ್ಟ್ ವಾಂಟೆಡ್ ಪಟ್ಟಿಗೆ ಸೇರಿಸಿದ್ದು, ಆತನ ಬಂಧನಕ್ಕೆ 10 ಲಕ್ಷ ರೂ. ಬಹುಮಾನ ಘೋಷಿಸಿತ್ತು.



# ಮಣಿಪುರ ಹಿಂಸಾಚಾರ: ಉನ್ನತ ಮಟ್ಟದ ಸಭೆ ನಡೆಸಿದ ಅಮಿತ್ ಶಾ!

**ನವದೆಹಲಿ:** ಮಣಿಪುರದಲ್ಲಿ ಹಿಂಸಾಚಾರ ಮತ್ತೆ ಭುಗಿಲೆದ್ದಿದ್ದು ಪರಿಸ್ಥಿತಿ ಗಂಭೀರವಾಗಿರುವ ಪರಿಣಾಮ, ಈ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಉನ್ನತ ಮಟ್ಟದ ಸಭೆ ನಡೆಸಿದ್ದಾರೆ. ಮಣಿಪುರದಲ್ಲಿ ಪರಿಸ್ಥಿತಿ ನಿಭಾಯಿಸಲು ಗೃಹ ಸಚಿವಾಲಯ 50 ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗಳನ್ನು (ಅಂಕಈ) ಮಣಿಪುರಕ್ಕೆ ಕಳುಹಿಸಲು ನಿರ್ಧರಿಸಿದೆ.

ಮಣಿಪುರದಲ್ಲಿ ಭದ್ರತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಗಮನದಲ್ಲಿಟ್ಟುಕೊಂಡು, ಹೆಚ್ಚುವರಿ 5,000 ಕ್ಕೂ ಹೆಚ್ಚು ಸಿಬ್ಬಂದಿಗಳನ್ನು ಒಳಗೊಂಡ 50 ತುಕಡಿಗಳನ್ನು ಮಣಿಪುರಕ್ಕೆ ಕಳುಹಿಸಲು ಕೇಂದ್ರ ನಿರ್ಧರಿಸಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಮಣಿಪುರದ ಜಿರಿಬಾಮ್ ಜಿಲ್ಲೆಯಲ್ಲಿ ಹಿಂಸಾಚಾರ ಭುಗಿಲೆದ್ದು ಇತರ ಸ್ಥಳಗಳಿಗೆ ಹರಡಿದ ನಂತರ ನವೆಂಬರ್ 12 ರಂದು ಹೊರಡಿಸಿದ ಆದೇಶದ ನಂತರ ಗೃಹ ವ್ಯವಹಾರಗಳ ಸಚಿವಾಲಯ (ಒಊಂ) 20 ಹೆಚ್ಚುವರಿ ಅಂಕಈ, ಸಿಆರ್ಪಿಎಫ್ನಿಂದ 15 ಮತ್ತು ಬಿಎಸ್‌ಎಫ್ನಿಂದ ಐದು ಪಡೆಗಳನ್ನು ಮಣಿಪುರಕ್ಕೆ ರವಾನಿಸಲಾಗಿತ್ತು.





# ಎಚ್‌ಐವಿಗೆ ಶೀಘ್ರದಲ್ಲೇ ಲಸಿಕೆ

**ಹಾಂಗ್‌ಕಾಂಗ್:** ಹಾಂಗ್‌ಕಾಂಗ್‌ನ ಬಯೋಟೆಕ್ ಸ್ಟಾರ್ಟ್‌ಅಪ್ ಕಂಪನಿ ಇಮ್ಯುನೊಕ್ಯೂರ್, ಜಗತ್ತನ್ನು ತಲ್ಲಣಗೊಳಿಸುತ್ತಿರುವ ಏಡ್ಸ್‌ಗೆ ಕಾರಣವಾಗುವ ಎಚ್‌ಐವಿ ವೈರಸ್ ಗುಣಪಡಿಸಲು ಲಸಿಕೆ ಅಭಿವೃದ್ಧಿಪಡಿಸಿದೆ ಎಂದು ಘೋಷಿಸಿದೆ.

ಈ ಲಸಿಕೆಯ ಕಾರ್ಯಕ್ಷಮತೆ ಉತ್ತಮವಾಗಿದೆ ಮತ್ತು ಇತ್ತೀಚೆಗೆ ಅವರು ನಡೆಸಿದ ಕ್ಲಿನಿಕಲ್ ಪ್ರಯೋಗಗಳಲ್ಲಿ ಫಲಿತಾಂಶಗಳು ಕಂಡುಬಂದಿವೆ ಎಂದು ಹೇಳಲಾಗಿದೆ.

ಶೆನ್ಜೆನ್ ಥರ್ಡ್ ಪೀಪಲ್ಸ್ ಆಸ್ಪತ್ರೆಯಲ್ಲಿ 45 ರೋಗಿಗಳಿಗೆ ಈ ಪರೀಕ್ಷೆಗಳನ್ನು ಮಾಡಲಾಗಿದೆ ಎಂದು ಅದು ವಿವರಿಸಿದೆ. ಸಾಂಪ್ರದಾಯಿಕ ಲಸಿಕೆಗಳು ತಡೆಗಟ್ಟುವ ಕ್ರಮವಾಗಿ ಉಪಯುಕ್ತವಾಗಿವೆ ಮತ್ತು ಅವರು ಚಿಕಿತ್ಸಕ ಲಸಿಕೆಯನ್ನು ಅಭಿವೃದ್ಧಿಪಡಿಸಿದ್ದಾರೆ ಎಂದು ತಿಳಿಸಲಾಗಿದೆ.

ಎಚ್‌ಐವಿ ಸೋಂಕಿಗೆ ಒಳಗಾದ ನಂತರ ತಮ್ಮ ಚಿಕಿತ್ಸಕ ಲಸಿಕೆಯನ್ನು ನೀಡುವ ಮೂಲಕ ಏಡ್ಸ್ ಅನ್ನು ಗುಣಪಡಿಸಬಹುದು ಎಂದು ಕಂಪನಿಯು ಬಹಿರಂಗಪಡಿಸಿದೆ.




# ಪಂಜಾಬ್: ಹುಲ್ಲಿಗೆ ಬೆಂಕಿ ಹಚ್ಚಿದ 1,251 ರೈತರ ವಿರುದ್ಧ ಕೇಸ್ ದಾಖಲು

**ನವದೆಹಲಿ:** ತೀವ್ರ ವಾಯುಮಾಲಿನ್ಯವು ರಾಷ್ಟ್ರ ರಾಜಧಾನಿ ದೆಹಲಿಯನ್ನು ಉಸಿರುಗಟ್ಟಿಸುತ್ತಿದ್ದಂತೆ ಪಂಜಾಬ್ ಸೋಮವಾರ 1,250 ಗದ್ದೆಯಲ್ಲಿ ಹುಲ್ಲು ಸುಡುವ ಪ್ರಕರಣಗಳನ್ನು ವರದಿ ಮಾಡಿದೆ.

ಇದು ಒಂದೇ ದಿನದಲ್ಲಿ ಸೀಸನ್ನ ಅತಿ ಹೆಚ್ಚು ಹುಲ್ಲು, ಕಸ, ಕಡ್ಡಿ, ಕೋಲು-ಸುಡುವಿಕೆಯ ಸಂಖ್ಯೆಯನ್ನು ಸೂಚಿಸುತ್ತದೆ.

ಇದರೊಂದಿಗೆ ರಾಜ್ಯದಲ್ಲಿ ಹುಲ್ಲು ಸುಡುವ ಪ್ರಕರಣಗಳ ಒಟ್ಟು ಸಂಖ್ಯೆ 9,655 ಕ್ಕೆ ತಲುಪಿದೆ.

ರಾಷ್ಟ್ರ ರಾಜಧಾನಿಯಲ್ಲಿ ವಾಯು ಮಾಲಿನ್ಯಕ್ಕೆ ಗದ್ದೆಯಲ್ಲಿ ಹುಲ್ಲು ಸುಡುವಿಕೆ ಪ್ರಮುಖ ಕಾರಣಗಳಲ್ಲಿ ಒಂದಾಗಿದೆ. ನವೆಂಬರ್ 6 ರಂದು ಕೇಂದ್ರ ಸರ್ಕಾರವು ಬೆಳೆ ಅವಶೇಷಗಳನ್ನು ಸುಡುವ ರೈತರಿಗೆ ದಂಡವನ್ನು ದ್ವಿಗುಣಗೊಳಿಸಿದೆ. ಐದು ಎಕರೆಗಿಂತ ಹೆಚ್ಚು ಜಮೀನು ಹೊಂದಿರುವವರಿಗೆ ದಂಡವನ್ನು 30,000 ರೂ., ಎರಡು ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ರೈತರು 2,500 ರೂ.ನಿಂದ 5,000 ರೂ.ಗಳ ಪರಿಸರ ಪರಿಹಾರವನ್ನು ಪಾವತಿಸಬೇಕಾಗುತ್ತದೆ. ಇವತ್ತು ಒಂದೇ ದಿನ 1250 ಹುಲ್ಲು ಸುಟ್ಟವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.



# ಸೌದಿ ಅರೇಬಿಯಾದಲ್ಲಿ ದಾಖಲೆಯ ಮರಣದಂಡನೆ

**ಸೌದಿ ಅರೇಬಿಯಾ:** 2024ರ ಮೊದಲಾರ್ಧದಲ್ಲಿ ಸೌದಿ ಅರೇಬಿಯಾ 100 ಕ್ಕೂ ಹೆಚ್ಚು ವಿದೇಶಿ ಪ್ರಜೆಗಳನ್ನು ಗಲ್ಲಿಗೇರಿಸಿದೆ, ಇದು ನಾಗರಿಕರಲ್ಲದವರಿಗೆ ಮರಣದಂಡನೆ ಬಳಕೆಯಲ್ಲಿ ಭಾರೀ ಏರಿಕೆಯನ್ನು ಸೂಚಿಸುತ್ತದೆ. ಈ ಅಂಕಿ ಅಂಶವು ಈಗಾಗಲೇ 2022 ಮತ್ತು 2023 ರಲ್ಲಿ ಒಟ್ಟು ವಿದೇಶಿ ಮರಣದಂಡನೆಗಳ ಸಂಖ್ಯೆಯನ್ನು ಮೀರಿದೆ.

ಇತ್ತೀಚಿನ ಮರಣದಂಡನೆಯು ಮಾದಕವಸ್ತು ಕಳ್ಳಸಾಗಣೆಗಾಗಿ ಶಿಕ್ಷೆಗೊಳಗಾದ ಯೆಮೆನ್ ಪ್ರಜೆಯನ್ನು ಒಳಗೊಂಡಿದೆ, ಇದು ಮಾದಕವಸ್ತು ಅಪರಾಧಗಳ ಬಗ್ಗೆ ರಾಜ್ಯದ ಕಠಿಣ ನಿಲುವನ್ನು ಮತ್ತಷ್ಟು ಎತ್ತಿ ತೋರಿಸುತ್ತದೆ. ಯುರೋಪಿಯನ್-ಸೌದಿ ಆರ್ಗನೈಸೇಶನ್ ಫಾರ್ ಹ್ಯೂಮನ್ ರೈಟ್ಸ್ (ಇಎಸ್‌ಒಎಚ್‌ಆರ್) ವರದಿಗಳ ಪ್ರಕಾರ, ಈ ವರ್ಷದ ಒಟ್ಟು 101 ವಿದೇಶಿ ಮರಣದಂಡನೆಗಳು ಒಂದೇ ವರ್ಷದಲ್ಲಿ ಸೌದಿ ಅಧಿಕಾರಿಗಳು ದಾಖಲಿಸಿದ ಅತ್ಯಧಿಕ ಸಂಖ್ಯೆಯನ್ನು ಪ್ರತಿನಿಧಿಸುತ್ತವೆ.

ಮರಣದಂಡನೆಗಳ ಈ ಹೆಚ್ಚಳವನ್ನು ಮಾನವ ಹಕ್ಕುಗಳ ಸಂಘಟನೆಗಳು ಖಂಡಿಸಿದ್ದು, ಸೌದಿ ಅರೇಬಿಯಾ ತನ್ನ ಅಧಿಕಾರವನ್ನು ಕಾರ್ಯಗತಗೊಳಿಸಲು ಅತಿಯಾಗಿ ಇದನ್ನು ಬಳಸುತ್ತಿದೆ ಎಂದು ಆರೋಪಿಸಿವೆ. ಅಮ್ನೆಸ್ಟಿ ಇಂಟರ್ನ್ಯಾಷನಲ್ ಇತ್ತೀಚಿನ ವರದಿ ಪ್ರಕಾರ ಮರಣದಂಡನೆಗಳ ಸಂಖ್ಯೆಯಲ್ಲಿ ಸೌದಿ ಅರೇಬಿಯಾ ಜಾಗತಿಕವಾಗಿ ಮೂರನೇ ಸ್ಥಾನದಲ್ಲಿದೆ, ಚೀನಾ ಮತ್ತು ಇರಾನ್ ನಂತರದ ಸ್ಥಾನದಲ್ಲಿ ಇದು ಇದೆ.

ಸೆಪ್ಟೆಂಬರ್ 2024 ರ ಹೊತ್ತಿಗೆ, ಸೌದಿ ಅರೇಬಿಯಾ ಮೂರು ದಶಕಗಳಲ್ಲಿ ಅತಿ ಹೆಚ್ಚು ಮರಣದಂಡನೆಗಳನ್ನು ನಡೆಸಿದೆ ಎಂದು ವರದಿ ಬಹಿರಂಗಪಡಿಸಿದೆ. ಐತಿಹಾಸಿಕ ಅಂಕಿಅಂಶಗಳ ಪ್ರಕಾರ, 1995 ರಲ್ಲಿ, ಸೌದಿ ಅರೇಬಿಯಾ 192 ವ್ಯಕ್ತಿಗಳನ್ನು ಗಲ್ಲಿಗೇರಿಸಿದ್ದರೆ, 2022 ರಲ್ಲಿ ಈ ಸಂಖ್ಯೆ 196 ಕ್ಕೆ ಏರಿದೆ. ಇದಕ್ಕೆ ವ್ಯತಿರಿಕ್ತವಾಗಿ, ಈ ವರ್ಷ ಮಾತ್ರ ವಿವಿಧ ರಾಷ್ಟ್ರಗಳಲ್ಲಿ ಒಟ್ಟು 274 ಮರಣದಂಡನೆಗಳನ್ನು ಕಂಡಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ದರ್ಶನ್ ನಟನೆಯ 'ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ' ಚಿತ್ರ ನ.22ಕ್ಕೆ ರೀ ರಿಲೀಸ್



ದರ್ಶನ್ ನಟನೆಯ 'ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ' ಸಿನಿಮಾ ಮತ್ತೆ ಮರು ಬಿಡುಗಡೆಗೆ ಸಿದ್ಧವಾಗಿದೆ. ಇದೇ ನ.22ರಂದು ದರ್ಶನ್ ನಟಿಸಿರುವ ಸಿನಿಮಾ ರಿಲೀಸ್ ಆಗಲಿದೆ.

ನಾಗಣ್ಣ ನಿರ್ದೇಶನದ 'ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ' ಸಿನಿಮಾದಲ್ಲಿ ಜಯಪ್ರಧ, ನಿಕಿತಾ, ಉಮಾಶ್ರೀ ಸೇರಿದಂತೆ ಅನೇಕರು ನಟಿಸಿದರು. 2012ರಲ್ಲಿ ತೆರೆಕಂಡ ಈ ಸಿನಿಮಾವನ್ನು ಆನಂದ್ ಬಿ. ಅಪ್ಪುಗೋಳ್ ನಿರ್ಮಾಣ ಮಾಡಿದ್ದರು. ಇದೀಗ ಸಂಗೊಳ್ಳಿ ರಾಯಣ್ಣ ಜೀವನ ಚರಿತ್ರೆ ಆಧರಿಸಿದ ಸಿನಿಮಾ ಮತ್ತೆ ರಿಲೀಸ್‌ಗೆ ಸಿದ್ಧವಾಗಿದೆ.

ಈಗಾಗಲೇ ದರ್ಶನ್ ಅಭಿನಯಿಸಿದ್ದ ಶಾಸ್ತ್ರಿ, ಕರಿಯ, ನವಗ್ರಹ, ಪೊರ್ಕಿ ಸಿನಿಮಾಗಳು ಇದೇ ವರ್ಷ ರೀ ರಿಲೀಸ್ ಆಗಿತ್ತು. ಇದೀಗ ಆಧುನಿಕ ತಂತ್ರಜ್ಞಾನ ಸ್ಪರ್ಷದೊಂದಿಗೆ ಐತಿಹಾಸಿಕ ಸಿನಿಮಾ 'ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ' ಮರು ಬಿಡುಗಡೆಗೆ ಸಜ್ಜಾಗಿದೆ. ಶಾಲಾ ರಜಾ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಚಿತ್ರಮಂದಿರದ ಪ್ರವೇಶ ದರದಲ್ಲಿ ಶೇ. 50% ರಿಯಾಯಿತಿ ಸಹ ಇರಲಿದೆ. ಈ ಚಿತ್ರವನ್ನು ಎಸ್ ಜಿಕೆ ಫಿಲಂಸ್ ಮೂಲಕ ಕೆ.ಬಸವರಾಜ್ ರಾಜ್ಯಾದ್ಯಂತ ಬಿಡುಗಡೆ ಮಾಡುತ್ತಿದ್ದಾರೆ.

### ಡಿ.4ರಂದು ನಾಗಚೈತನ್ಯ, ಶೋಭಿತಾ ಮದುವೆ

## ಆಮಂತ್ರಣ ಪತ್ರಿಕೆ ವೈರಲ್

ಟಾಲಿವುಡ್ ನಟ ನಾಗಚೈತನ್ಯ ಮತ್ತು ಶೋಭಿತಾ ಧುಲಿಪಾಲ್ ಹಸೆಮಣೆ ಏರೋಕೆ ರೆಡಿಯಾಗಿದ್ದಾರೆ. ಡಿ.4ರಂದು ನಾಗಚೈತನ್ಯ ಮದುವೆ ಡೇಟ್ ನಿಗದಿಯಾಗಿದೆ. ಸೋಷಿಯಲ್ ಮೀಡಿಯಾದಲ್ಲಿ ಆಮಂತ್ರಣ ಪತ್ರಿಕೆ ವೈರಲ್ ಆಗಿದೆ. ಸಮಂತಾ ಮಾಜಿ ಪತಿ ನಾಗಚೈತನ್ಯ ಅವರು ಶೋಭಿತಾ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಡಲು ರೆಡಿಯಾಗಿದ್ದಾರೆ. ಇದೇ ಡಿಸೆಂಬರ್ 4ರಂದು ಬಂಜಾರಾ ಹಿಲ್ಸ್‌ನಲ್ಲಿರುವ ಅನುಪಮಾ ಸ್ಟುಡಿಯೋದಲ್ಲಿ ಮದುವೆಯಾಗುತ್ತಿದ್ದಾರೆ. ಇದು ನಾಗಾರ್ಜುನ ಅಕ್ಕಿನೇನಿ ಅವರ ಒಡೆತನದಲ್ಲಿದೆ. ಈ ಮದುವೆಗೆ ಸೆಲೆಬ್ರಿಟಿಗಳು, ರಾಜಕೀಯ ಗಣ್ಯರಿಗೆ ಆಹ್ವಾನ ನೀಡಲಾಗಿದೆ.

ಅಂದಹಾಗೆ, ನಟಿ ಸಮಂತಾ ಜೊತೆ ನಾಗಚೈತನ್ಯ 2017ರಲ್ಲಿ ಮದುವೆಯಾದರು. 2021ರಲ್ಲಿ ಇಬ್ಬರೂ ಡಿವೋರ್ಸ್ ಘೋಷಿಸಿದರು. ಹಲವು ವರ್ಷಗಳು ಪ್ರೀತಿ, ಮದುವೆಯ ಮುದ್ರೆ ಒತ್ತಿದ್ದ ಜೋಡಿ ಆ ನಂತರ ಡಿವೋರ್ಸ್ ಮೂಲಕ ವೈವಾಹಿಕ ಬದುಕಿಗೆ ಪೂರ್ಣ ವಿರಾಮವಿಟ್ಟರು.



## ನಿಶಾ ರವಿಕೃಷ್ಣನ್ ಕನ್ನಡದವರಲ್ಲ!

ನಿಶಾ ರವಿಕೃಷ್ಣನ್ ಅವರು ಧಾರಾವಾಹಿಗಳಲ್ಲಿ ನಟಿಸಿ ಫೇಮಸ್ ಆಗಿದ್ದಾರೆ. ಅವರಿಗೆ ದೊಡ್ಡ ಅಭಿಮಾನಿ ಬಳಗ ಸೃಷ್ಟಿ ಆಗಿದೆ. ಈ ಮೊದಲು ಅವರು 'ಗಟ್ಟಿಮೇಳ' ಧಾರಾವಾಹಿಯಲ್ಲಿ ನಟಿಸುತ್ತಿದ್ದರು. ಈಗ 'ಅಣ್ಣಯ್ಯ' ಹೆಸರಿನ ಧಾರಾವಾಹಿ ಮಾಡುತ್ತಿದ್ದಾರೆ. ಅವರು ಸ್ಪಷ್ಟವಾಗಿ ಕನ್ನಡ ಮಾತನಾಡುತ್ತಾರೆ. ಆದರೆ, ಅವರು ಕನ್ನಡದವರು ಅಲ್ಲ ಎನ್ನುವ ವಿಚಾರ ನಿಮಗೆ ಗೊತ್ತೇ? ಆ ಬಗ್ಗೆ ನಾವು ನಿಮಗೆ ಹೇಳುತ್ತಿದ್ದೇವೆ ಕೇಳಿ.



ನಿಶಾ ರವಿಕೃಷ್ಣನ್ ಅವರು ನಿಶಾ ಮಿಲನ್ ಎಂದು ಕೂಡ ಜನಪ್ರಿಯತೆ ಪಡೆದವರು. ಅವರು 2018ರಲ್ಲಿ ಬಣ್ಣದ ಲೋಕಕ್ಕೆ ಕಾಲಿಟ್ಟರು. 'ಸರ್ವಮಂಗಲ ಮಾಂಗಲ್ಯೆ' ಅವರು ನಟಿಸಿದ ಮೊದಲ ಧಾರಾವಾಹಿ. ಈ ಧಾರಾವಾಹಿ 2018ರಿಂದ 2019ರವರೆಗೆ ಪ್ರಸಾರ ಕಂಡಿತು. ಸ್ಟಾರ್ ಸುವರ್ಣದಲ್ಲಿ ಈ ಧಾರಾವಾಹಿ ಪ್ರಸಾರ ಕಾಣುತ್ತಿತ್ತು. 2019ರಲ್ಲಿ ಅವರಿಗೆ ಸಿಕ್ಕಿದ್ದೇ 'ಗಟ್ಟಿಮೇಳ' ಧಾರಾವಾಹಿ.

ಜೀ ಕನ್ನಡದಲ್ಲಿ ಪ್ರಸಾರ ಕಂಡ 'ಗಟ್ಟಿಮೇಳ' ಧಾರಾವಾಹಿಯಲ್ಲಿ ನಿಶಾ ಅವರು ಅಮೂಲ್ಯ ಹೆಸರಿನ ಪಾತ್ರ ಮಾಡಿದರು. ಈ ಧಾರಾವಾಹಿ ಮೂಲಕ ರೌಡಿ ಬೇಬಿ ಎಂದೇ ಫೇಮಸ್ ಆದರು. ಕಥಾ ನಾಯಕನ ಜೊತೆಗಿನ ಕೆಮಿಸ್ಟ್ರಿ ಕಾರಣಕ್ಕೆ ಅವರು ಸಾಕಷ್ಟು ಸುದ್ದಿ ಆದರು. ಈ ಧಾರಾವಾಹಿ 2019ರಿಂದ 2024ರವರೆಗೆ ಪ್ರಸಾರ ಕಂಡಿತು. ಈ ವರ್ಷ ಧಾರಾವಾಹಿ ಪ್ರಸಾರವನ್ನು ಅಂತ್ಯ ಮಾಡಿದೆ. ಆ ಬಳಿಕ ಒಂದು ತೆಲುಗು ಧಾರಾವಾಹಿಯಲ್ಲಿ ನಟಿಸಿದ್ದರು.

ಸದ್ಯ ನಿಶಾ ಅವರು 'ಅಮ್ಮಯ್ಯಿಗಾರು' ಹೆಸರಿನ ತೆಲುಗು ಧಾರಾವಾಹಿ ಹಾಗೂ 'ಅಣ್ಣಯ್ಯ' ಹೆಸರಿನ ಕನ್ನಡದ ಧಾರಾವಾಹಿಯಲ್ಲಿ ನಟಿಸುತ್ತಿದ್ದಾರೆ. ವಿಶೇಷ ಎಂದರೆ ಅವರು ಮೂಲ ಮಲಯಾಳಿ. ನಿಶಾ ಅವರ ಕುಟುಂಬ ಮಲಯಾಳಿ ಹಿನ್ನೆಲೆ ಹೊಂದಿದೆ. ಆದರೆ, ಹುಟ್ಟಿದ್ದು ಬೆಂಗಳೂರೇ ಆಗಿದ್ದರಿಂದ ಅವರನ್ನು ಎಲ್ಲರೂ ಕನ್ನಡವರು ಎಂದು ಗುರುತಿಸುತ್ತಾರೆ. ಅಲ್ಲದೆ, ಅವರಿಗೆ ಕನ್ನಡ ಸ್ಪಷ್ಟವಾಗಿ ಮಾತನಾಡಲು ಬರುತ್ತದೆ.

'ಅಣ್ಣಯ್ಯ' ಧಾರಾವಾಹಿಗೆ ಪ್ರಮೋದ್ ಶೆಟ್ಟಿ ನಿರ್ಮಾಣ ಇದೆ. ಈ ಧಾರಾವಾಹಿಯಲ್ಲಿ ಅವರು ಡಾ. ಪಾರ್ವತಿ ಹೆಸರಿನ ಪಾತ್ರ ಮಾಡಿದ್ದಾರೆ. ಈ ಧಾರಾವಾಹಿ ಕೆಲವೊಮ್ಮೆ ಟಾಪ್ ಐದರಲ್ಲಿ ಸ್ಥಾನ ಪಡೆದುಕೊಳ್ಳುತ್ತಿದೆ.

## ಕತ್ತಿ ಹಿಡಿದು ಉಗ್ರಾವತಾರ ತಾಳಿದ ನಯನತಾರಾ



ಕಾಲಿವುಡ್ ಲೇಡಿ ಸೂಪರ್ ಸ್ಟಾರ್ ನಯನತಾರಾಗೆ ಹುಟ್ಟುಹಬ್ಬದ ಸಂಭ್ರಮ. ಹಾಗಾಗಿ ಅಭಿಮಾನಿಗಳಿಗೆ ಹೊಸ ಅಪ್‌ಡೇಟ್ ಹಂಚಿಕೊಂಡಿದ್ದಾರೆ. 'ರಕ್ಕಯಿ' ಆಗಿ ಕತ್ತಿ ಹಿಡಿದು ಅಖಾಡಕ್ಕೆ ಇಳಿದಿದ್ದಾರೆ. ನಯನತಾರಾ ನಟನೆಯ ರಕ್ಕಯಿ ಸಿನಿಮಾದ ಟ್ರೈಲರ್ ರಿಲೀಸ್ ಆಗಿದೆ.

'ರಕ್ಕಯಿ' ಸಿನಿಮಾದ ಟೈಟಲ್ ಟೀಸರ್ ಅನ್ನು ಅನಾವರಣ ಮಾಡಲಾಗಿದೆ. ಅಳುವ ಮಗುವನ್ನು ಸಂತೈಸುವ ತಾಯಿಯಾಗಿ, ದುಷ್ಟರಿಗೆ ಸೆದೆಬಡೆಯುವ ಗಟ್ಟಿಗಿತ್ತಿಯಾಗಿ ನಯನತಾರಾ ಕಾಣಿಸಿಕೊಂಡಿದ್ದಾರೆ. ಅಳುವ ಮಗುವನ್ನು ಸಂತೈಸುವ ತಾಯಿಯಾಗಿ, ದುಷ್ಟರ ಮುಂದೆ ನಟಿ ಉಗ್ರಾವತಾರ ತಾಳಿದ್ದಾರೆ.

ಕತ್ತಿಯನ್ನು ಹಿಡಿದು ತನ್ನ ಮಗುವಿನ ತಂಟೆಗೆ ಬರುವ ದುಷ್ಟರ ಗುಂಪನ್ನು ಸಂಹಾರ ಮಾಡುವ ರೌದ್ರವತಾರಾ ತಾಳಿದ್ದಾರೆ ನಟಿ. ಇದೊಂದು ತಾಯಿ ಸೆಂಟಿಮೆಂಟ್ ಇರುವ ಮಾಸ್ ಸಿನಿಮಾ ಆಗಿದೆ.

ಇನ್ನೂ ನಯನತಾರಾ ಮದುವೆ ಸಾಕ್ಷ್ಯಚಿತ್ರದಲ್ಲಿ 3 ಸೆಕೆಂಡ್ ವಿಡಿಯೋದಲ್ಲಿ ಧನುಷ್ ನಿರ್ಮಾಣ ಮಾಡಿದ್ದ 'ನಾನೂ ರೌಡಿ ಧಾನ್' ಚಿತ್ರದ ತುಣುಕು ಬಳಸಿದಕ್ಕೆ ಧನುಷ್ ಲೀಗಲ್ ನೋಟಿಸ್ ಕಳುಹಿಸಿದ್ದರು. ನಯನತಾರಾ ಮತ್ತು ಧನುಷ್ ಕಾಂಟ್ರವರ್ಸಿ ನಡುವೆ ಈಗ ರಕ್ಕಯಿ ಸಿನಿಮಾದಲ್ಲಿ ನಟಿ ಉಗ್ರವತಾರಾ ತಾಳಿರೋದು ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.



# ಆಸ್ಟ್ರೇಲಿಯಾದಲ್ಲಿ ಕಪಿಲ್ ದೇವ್ ದಾಖಲೆ ಮುರಿಯಲು ಸಜ್ಜಾದ ಬುಮ್ರಾ

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯ ನವೆಂಬರ್ 22 ರಿಂದ ಪರ್ತ್‌ನಲ್ಲಿ ಪ್ರಾರಂಭವಾಗಲಿದೆ. ಮೊದಲ ಟೆಸ್ಟ್ ಪಂದ್ಯಕ್ಕೆ ಖಾಯಂ ನಾಯಕ ರೋಹಿತ್ ಶರ್ಮಾ ಅಲಭ್ಯರಾಗಿರುವ ಕಾರಣ, ತಂಡದ ಉಪನಾಯಕ ಜಸ್ಪ್ರೀತ್ ಬುಮ್ರಾ, ಭಾರತ ತಂಡವನ್ನು ಮುನ್ನಡೆಸಲಿದ್ದಾರೆ.

ಟೆಸ್ಟ್ ನಾಯಕನಾಗಿ ಇದುವರೆಗೂ ಒಂದೇ ಒಂದು ಗೆಲುವು ಕಂಡಿರದ ಬುಮ್ರಾಗೆ ಆಸೀಸ್ ವಿರುದ್ಧದ ಈ ಮೊದಲ ಪಂದ್ಯ ಅತ್ಯಂತ ಮುಖ್ಯವಾಗಿದೆ. ಇದರ ಜೊತೆಗೆ ಆಟಗಾರನಾಗಿಯೂ ಬುಮ್ರಾಗೆ ದಾಖಲೆ ಮುರಿಯುವ ಅವಕಾಶವಿದ್ದು, ಕಾಂಗರೂಗಳ ನಾಡಲ್ಲಿ ತಂಡದ ಮಾಜಿ ನಾಯಕ ಕಪಿಲ್ ದೇವ್ ಅವರ ದಾಖಲೆ ಮುರಿಯಲು ಬುಮ್ರಾ ಸಜ್ಜಾಗಿದ್ದಾರೆ.

ವಾಸ್ತವವಾಗಿ ಆಸ್ಟ್ರೇಲಿಯಾ ನೆಲದಲ್ಲಿ ಅತಿ ಹೆಚ್ಚು ವಿಕೆಟ್ ಪಡೆದ ಭಾರತೀಯ ಆಟಗಾರ ಪೈಕಿ ತಂಡದ ಮಾಜಿ ನಾಯಕ ಕಪಿಲ್ ದೇವ್ ಅಗ್ರಸ್ಥಾನದಲ್ಲಿದ್ದಾರೆ. ಆದರೆ ಈಗ ಜಸ್ಪ್ರೀತ್ ಬುಮ್ರಾ, ಈ ದಾಖಲೆಯನ್ನು ಮುರಿಯಲು ಕೆಲವೇ ಹೆಜ್ಜೆಗಳ ಅಂತರದಲ್ಲಿದ್ದಾರೆ.

ಕಪಿಲ್ ದೇವ್ ತಮ್ಮ ಟೆಸ್ಟ್ ವೃತ್ತಿಜೀವನದಲ್ಲಿ 11 ಟೆಸ್ಟ್ ಪಂದ್ಯಗಳನ್ನು ಆಸ್ಟ್ರೇಲಿಯಾದಲ್ಲಿ ಆಡಿದ್ದು, ಇದರಲ್ಲಿ ಒಟ್ಟು 51 ವಿಕೆಟ್ ಪಡೆದಿದ್ದಾರೆ. ಆದರೆ ಜಸ್ಪ್ರೀತ್ ಬುಮ್ರಾ ಆಸ್ಟ್ರೇಲಿಯಾ ನೆಲದಲ್ಲಿ ಇದುವರೆಗೆ ಕೇವಲ 7 ಪಂದ್ಯಗಳನ್ನಾಡಿದ್ದು, 32 ವಿಕೆಟ್ ಪಡೆದಿದ್ದಾರೆ. ಹೀಗಾಗಿ ಬುಮ್ರಾ, ಕಪಿಲ್ ದೇವ್ ಅವರ ದಾಖಲೆಯನ್ನು ಮುರಿಯಲು ಕೇವಲ 20 ವಿಕೆಟ್‌ಗಳ ಅಂತರದಲ್ಲಿದ್ದಾರೆ.



ಮುಂಬರುವ ಬಾರ್ಡರ್ ಗವಾಸ್ಕರ್ ಟ್ರೋಫಿಯಲ್ಲಿ ಒಟ್ಟು 5 ಟೆಸ್ಟ್ ಪಂದ್ಯಗಳು ನಡೆಯಲಿವೆ. ಇಂತಹ ಪರಿಸ್ಥಿತಿಯಲ್ಲಿ ಬುಮ್ರಾ 10 ಇನ್ನಿಂಗ್ಸ್‌ಗಳಲ್ಲಿ 20 ವಿಕೆಟ್ ಕಬಳಿಸುವ ಮೂಲಕ ಇತಿಹಾಸದ ಪುಟಗಳಲ್ಲಿ ತಮ್ಮ ಹೆಸರನ್ನು ಚಿರಸ್ಥಾಯಿಯಾಗಿಸಿಕೊಳ್ಳಲಿದ್ದಾರೆ. ಇದಕ್ಕೆ ಪೂರಕವಾಗಿ ಆಸ್ಟ್ರೇಲಿಯಾದ ಪಿಚ್‌ಗಳಲ್ಲಿ ವೇಗದ ಬೌಲರ್‌ಗಳು ಮೇಲುಗೈ ಸಾಧಿಸುವುದರಿಂದ ಬುಮ್ರಾಗೆ ಈ ದಾಖಲೆ ಮಾಡಲು ಅಷ್ಟು ಕಷ್ಟವಾಗದು.

ಕಾಂಗರೂಗಳ ನಾಡಲ್ಲಿ ಅಧಿಕ ವಿಕೆಟ್ ಪಡೆದವರ ಪೈಕಿ ಕಪಿಲ್ ದೇವ್ 51 ವಿಕೆಟ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದ್ದರೆ, ಅನಿಲ್ ಕುಂಬ್ಳೆ 49 ವಿಕೆಟ್‌ಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ಮೂರನೇ ಸ್ಥಾನದಲ್ಲಿ ಆಸ್ಟ್ರೇಲಿಯಾ ನೆಲದಲ್ಲಿ ಇದುವರೆಗೆ 39 ವಿಕೆಟ್ ಪಡೆದಿರುವ ಆರ್ ಅಶ್ವಿನ್ ಇದ್ದು, ಬಿಶನ್ ಸಿಂಗ್ ಬೇಡಿ 35 ವಿಕೆಟ್‌ಗಳೊಂದಿಗೆ ನಾಲ್ಕನೇ ಸ್ಥಾನದಲ್ಲಿದ್ದಾರೆ. ಬುಮ್ರಾ 32 ವಿಕೆಟ್‌ಗಳೊಂದಿಗೆ ಐದನೇ ಸ್ಥಾನದಲ್ಲಿದ್ದಾರೆ.

## ಟೀಮ್ ಇಂಡಿಯಾದಲ್ಲಿ ಸದ್ಯಕ್ಕಿಲ್ಲ ಮೊಹಮ್ಮದ್ ಶಮಿಗೆ ಚಾನ್ಸ್

ರಣಜಿ ಟೂರ್ನಿ ಪಂದ್ಯದ ಮೂಲಕ ಸ್ಪರ್ಧಾತ್ಮಕ ಕ್ರಿಕೆಟ್?ಗೆ ಮರಳಿರುವ ಮೊಹಮ್ಮದ್ ಶಮಿ ಸದ್ಯಕ್ಕೆ ಟೀಮ್ ಇಂಡಿಯಾದಲ್ಲಿ ಕಾಣಿಸಿಕೊಳ್ಳುವುದಿಲ್ಲ. ಬದಲಾಗಿ ಮುಂಬರುವ ಸೈಯ್ಯದ್ ಮುಷ್ತಾಕ್ ಅಲಿ ಟಿ20 ಟೂರ್ನಿಯಲ್ಲಿ ಬಂಗಾಳ ಪರ ಕಣಕ್ಕಿಳಿಯಲಿದ್ದಾರೆ.

ಕಳೆದ ಒಂದು ವರ್ಷದಿಂದ ಟೀಮ್ ಇಂಡಿಯಾದಿಂದ ಹೊರಗುಳಿದಿರುವ ಶಮಿ ಇತ್ತೀಚೆಗೆ ನಡೆದ ಮಧ್ಯಪ್ರದೇಶ್ ವಿರುದ್ಧದ ಪಂದ್ಯದ ಮೂಲಕ ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಮರಳಿದ್ದರು. ಈ ಪಂದ್ಯದಲ್ಲಿ ಬಂಗಾಳ ಪರ ಕಣಕ್ಕಿಳಿದಿದ್ದ ಶಮಿ ಒಟ್ಟು 7 ವಿಕೆಟ್ ಕಬಳಿಸಿ ಮಿಂಚಿದ್ದರು.

ಈ ಮೂಲಕ ತಮ್ಮ ಫಿಟ್‌ನೆಸ್ ಹಾಗೂ ಕಾರ್ಯಕ್ಷಮತೆಯನ್ನು ಪ್ರದರ್ಶಿಸಿದ್ದ ಅವರನ್ನು ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್ ಸರಣಿಗೆ ಪರಿಗಣಿಸಲಾಗುತ್ತದೆ ಎಂದು ವರದಿಗಳಾಗಿದ್ದವು.



ಆದರೀಗ ಇನ್ನೊಂದಷ್ಟು ಪಂದ್ಯಗಳನ್ನಾಡುವಂತೆ ಬಿಸಿಸಿಐ ಮೊಹಮ್ಮದ್ ಶಮಿಗೆ ಸೂಚಿಸಿದೆ. ಅದರಂತೆ ಮುಂಬರುವ ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯಲ್ಲಿ ಶಮಿ ಬಂಗಾಳ ಪರ ಕಣಕ್ಕಿಳಿಯಲಿದ್ದಾರೆ.

ಹೀಗಾಗಿ ಮೊಹಮ್ಮದ್ ಶಮಿ ಅವರು ಮತ್ತೆ ಟೀಮ್ ಇಂಡಿಯಾದಲ್ಲಿ ಕಾಣಿಸಿಕೊಳ್ಳುವುದು ಮತ್ತಷ್ಟು ವಿಳಂಬವಾಗುವುದು ಖಚಿತವಾಗಿದೆ. ಇನ್ನು ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯಲ್ಲೂ ಭರ್ಜರಿ ಪ್ರದರ್ಶನ ನೀಡಿದರೆ ಮಾತ್ರ ಅವರನ್ನು ಆಸ್ಟ್ರೇಲಿಯಾ ವಿರುದ್ಧದ ಸರಣಿಗೆ ಪರಿಗಣಿಸಬಹುದು. ಅದರಂತೆ ಅವರು ಮೂರನೇ ಟೆಸ್ಟ್ ಪಂದ್ಯದ ವೇಳೆ ಟೀಮ್ ಇಂಡಿಯಾವನ್ನು ಕೂಡಿಕೊಳ್ಳುವ ಸಾಧ್ಯತೆಯಿದೆ.

2023 ರ ಏಕದಿನ ವಿಶ್ವಕಪ್ ವೇಳೆ ಮೊಹಮ್ಮದ್ ಶಮಿ ಅವರ ಪಾದದಲ್ಲಿ ನೋವು ಕಾಣಿಸಿಕೊಂಡಿತ್ತು. ಅಲ್ಲದೆ ವಿಶ್ವಕಪ್ ಬಳಿಕ ಅವರು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಇದೇ ಕಾರಣದಿಂದಾಗಿ ಅವರು ಒಂದು ವರ್ಷಗಳ ಕಾಲ ಯಾವುದೇ ಸ್ಪರ್ಧಾತ್ಮಕ ಪಂದ್ಯವಾಡಿರಲಿಲ್ಲ. ಇದೀಗ ರಣಜಿ ಟೂರ್ನಿಯ ಮೂಲಕ ಕಂಬ್ಯಾಕ್ ಮಾಡಿರುವ ಶಮಿ, ಮುಂಬರುವ ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯಲ್ಲೂ ಕಾಣಿಸಿಕೊಳ್ಳಲಿದ್ದಾರೆ.

### ಅಧಿಕಾರ ದಾಹಕ್ಕಾಗಿ ಏನು ಮಾಡಲು ಹಿಂಜರಿಯದವರು

# ಅಂದ್ರೆ, ಅದು ಬಿಜೆಪಿಯವರು

**ಬೀದರ್:** ಅಧಿಕಾರ ದಾಹಕ್ಕಾಗಿ ಏನು ಮಾಡಲು ಹಿಂಜರಿಯದವರು ಎಂದರೆ ಅದು ಬಿಜೆಪಿಯವರು ಎಂದು ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಕಾಂಗ್ರೆಸ್ ಶಾಸಕರಿಗೆ ಬಿಜೆಪಿ 100 ಕೋಟಿ ರೂ. ಆಫರ್ ವಿಚಾರವಾಗಿ ಮಾತನಾಡಿದ ಅವರು, ಅಧಿಕಾರದ ದಾಹಕ್ಕಾಗಿ ಏನು ಮಾಡಲು ಹಿಂಜರಿಯದವರು ಬಿಜೆಪಿಯವರು. ಯಾವ ಮಟ್ಟಕ್ಕೂ ಇಳಿಯಲು ತಯಾರಾಗಿರುತ್ತಾರೆ. ಈ ರಾಜ್ಯದ ಜನರಿಗೆ ಬಿಜೆಪಿ ನಾಯಕರು ಉತ್ತರ ನೀಡಲಿ. 15 ಜನ ಶಾಸಕರನ್ನು ಖರೀದಿ ಮಾಡಿದ್ದು ಎಲ್ಲರಿಗೂ ಗೊತ್ತಿದೆ. ಸಿಎಂ ಆಗಲು 2500 ಕೋಟಿ ರೂ. ಕೊಡಬೇಕು ಎಂದು ಸ್ವತಃ ಯತ್ನಾಳ್ ಹೇಳಿದ್ದರು. ಇನ್ನೂ ಸಚಿವರಾಗಲು 500 ಕೋಟಿ ಕೊಡಬೇಕು ಎಂದು ಹೇಳಿದ್ದರು. ಯತ್ನಾಳ್ ಬಿಜೆಪಿ ವಿರುದ್ಧ ಏನೇ ಹೇಳಿದ್ದರೂ ಅದು ನೂರಕ್ಕೆ ನೂರು ಸತ್ಯವಿದೆ. ಯತ್ನಾಳ್‌ಗೆ ಏನಾದರೂ ಇಲ್ಲಿಯವರೆಗೆ ನೋಟಿಸ್ ಬಂದಿದೆಯಾ? ಎಂದು ಯತ್ನಾಳ್ ಪರ ಬ್ಯಾಟ್ ಬೀಸಿದ್ದಾರೆ.



**ಬಿಜೆಪಿ ಕಾರ್ಡ್ ರದ್ದು ವಿಚಾರ:** ಬಿಜೆಪಿ ಕಾರ್ಡ್ ರದ್ದು ವಿಚಾರವಾಗಿ ಬಹಳಷ್ಟು ದೂರುಗಳಿವೆ. ಸಾಹುಕಾರರು, ಮನೆ ಇದ್ದವರು, ಸರ್ಕಾರಿ ನೌಕರರು, ಟ್ಯಾಕ್ಸ್ ಕಟ್ಟುವವರು ಬಿಪಿಎಲ್ ಕಾರ್ಡ್ ತೆಗೆದುಕೊಂಡಿದ್ದಾರೆ. ಬಡತನ ರೇಖೆಗಿಂತ ಕೆಳಗಿದ್ದವರಿಗೆ ಬಿಜೆಪಿ ಕೊಡಬೇಕು ಎಂಬ ನಿಯಮವಿದೆ. ಒಂದೊಂದು ಜಿಲ್ಲೆಯಲ್ಲಿ ಶೇ.95 ರಷ್ಟು ಬಿಪಿಎಲ್ ಕಾರ್ಡ್ ಪಡೆದಿದ್ದಾರೆ. ನೈಜವಾಗಿ ಯಾರು ಬಡತನದಲ್ಲಿ ಇದ್ದು, ಬಿಪಿಎಲ್ ಕಾರ್ಡ್ ಪಡೆದಿದ್ದರೆ ಅವರಿಗೆ ಯಾವುದೇ ವಂಚನೆಯಗುವುದಿಲ್ಲ ಎಂದರು.

**ವರಿಷ್ಠರ ತೀರ್ಮಾನ:** ಕೇಂದ್ರ ಸಚಿವ ಹೆಚ್‌ಡಿಕೆಗೆ ಸಚಿವ ಜಮೀರ್ ಖಾನ್ ಕರಿಯಾ ಎಂಬ ಪದ ಬಳಕೆ ಪಕ್ಷಕ್ಕೆ ಡ್ಯಾಮೇಜ್ ಆಗಿದೀಯಾ ಎನ್ನುವ ವಿಚಾರವಾಗಿ ಈಗಾಗಲೇ ಸಿಎಂ, ಡಿಸಿಎಂ ಹಾಗೂ ಪರಮೇಶ್ವರ್ ಹೇಳಿಕೆ ನೀಡಿದ್ದಾರೆ. ನಮ್ಮ ಪಕ್ಷದಲ್ಲಿ ಒಂದು ವ್ಯವಸ್ಥೆ ಇದೆ. ಅವರ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳಬೇಕಾ? ಶಿಸ್ತು ಪಾಲನಾ ಸಮಿತಿಗೆ ನೀಡಬೇಕಾ ಎಂದು ವರಿಷ್ಠರು ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು.

**ಬಿಜೆಪಿ ಅವಧಿಯಲ್ಲೇ ನೋಟಿಸ್:** ಬಿಜೆಪಿಯಲ್ಲಿ ಒಂದು ಮನೆ ನೂರು ಬಾಗಿಲು ಆಗಿವೆ. ಪಶ್ಚಾತ್ತಾಪ ಮಾಡಿಕೊಳ್ಳಲು ಬಿಜೆಪಿಯವರು ಪಾದಯಾತ್ರೆ ಮಾಡಲಿ. ವಕ್ಫ್ ವಿವಾದ ಹುಟ್ಟು ಹಾಕಿದ್ದು, ಮೊದಲು ನೋಟಿಸ್ ನೀಡಿದ್ದು ಬಿಜೆಪಿಯವರು. ಅಪರಾಧ ಮಾಡುವವರು, ದೂರು ನೀಡುವವರು, ವಿಚಾರಣೆ ಮಾಡುವವರು, ತೀರ್ಪು ನೀಡುವವರು ಎಲ್ಲವೂ ಬಿಜೆಪಿಯವರೇ. ಇದನ್ನೂ ಜನ ಅರ್ಥ ಮಾಡಿಕೊಳ್ಳುತ್ತಾರೆ. ಬಿಜೆಪಿ ಮುಗಿದ ಅಧ್ಯಾಯ, ಚರ್ಚೆ ಮಾಡಿ ಸಮಯ ಹಾಳು ಮಾಡಲಿ ಎಂದು ವ್ಯಂಗ್ಯವಾಡಿದರು.

### ನೀವು ಮುಡಾದಲ್ಲಿ ತಪ್ಪು ಮಾಡಿಬಿಟ್ರಿ ಎಂದ ಸೋಮಣ್ಣ

# ನಾನು ದೇವರನ್ನ ನಂಬಲ್ಲ ಎಂದ ಸಿದ್ದರಾಮಯ್ಯ

**ಬೆಂಗಳೂರು:** ಮುಡಾ ಹಗರಣ ವಿವಾದದಲ್ಲಿ ಸಿಲುಕಿರುವ ಸಿಎಂ ಸಿದ್ದರಾಮಯ್ಯ ಅವರಿಗೆ ಇದೀಗ ಸಂಕಷ್ಟ ಎದುರಾಗಿದೆ. ಮುಡಾ ವಿವಾದ ಆರಂಭವಾದಾಗ ಬಿಜೆಪಿಯಲ್ಲಿನ ಕೆಲವು ಸಿದ್ದರಾಮಯ್ಯ ಅವರ ಸ್ನೇಹಿತರು ಸೈಟ್ ವಾಪಸ್ ನೀಡುವಂತೆ ಸಲಹೆ ನೀಡಿದ್ದರು. ಅಂತವರಲ್ಲಿ ಸಂಸದ ವಿ. ಸೋಮಣ್ಣ ಕೂಡ ಒಬ್ಬರು. ಇಂದು ಸಿಎಂ ಸಿದ್ದರಾಮಯ್ಯ ಹಾಗೂ ಸಂಸದ ವಿ. ಸೋಮಣ್ಣ ಮುಖಾಮುಖಿಯಾದಾಗ ಮುಡಾ ವಿಚಾರ ಪ್ರಸ್ತಾಪವಾಗಿದೆ.

**ತಪ್ಪು ಮಾಡಿಬಿಟ್ರಿ, ಸಿದ್ದಣ್ಣ:** ಬೆಂಗಳೂರಿನ ಕಾರ್ಯಕ್ರಮದವೊಂದರಲ್ಲಿ ಉಭಯ ನಾಯಕರು ಆಕಸ್ಮಿಕವಾಗಿ ಎದುರುಬದುರಾದರು. ಈ ವೇಳೆ ಕುಶಲೋಪಾರಿ ಮಾತುಕತೆ ನಡೆಸಿದ ವೇಳೆ ಮೂಡಾ ವಿವಾದ ಉಲ್ಲೇಖ ಮಾಡಿದ ವಿ ಸೋಮಣ್ಣ, ತಪ್ಪು ಮಾಡಿಬಿಟ್ರಿ, ಸಿದ್ದಣ್ಣ, ಸಣ್ಣ ವಿಚಾರ ಇಷ್ಟೆಲ್ಲಾ ಆಗಿಹೋಯ್ತು? ಸೈಟ್ ವಾಪಸ್ ಕೊಡಿ ಎಂದು ನಾನು ಮೊದಲೇ ಹೇಳಿದ್ದೆ, ಸೈಟನ್ನು ಅಂದೇ ವಾಪಸ್ ಮಾಡಿದ್ದರೆ ಈ ಸಮಸ್ಯೆ ಉದ್ಭವವಾಗುತ್ತಿರಲಿಲ್ಲ ಎಂದರು..



ಸಿದ್ದರಾಮಯ್ಯ ಬಗ್ಗೆ ನಾನು ಎದುರುಗಡೆ ಏನಿದ್ದರೂ ಹೇಳುವವನು. ಬೇರೆಯವರ ಹಾಗೆ ಹಿಂದುಗಡೆ ಕುತಂತ್ರ ಮಾಡುವುದು ಗೊತ್ತಿಲ್ಲ. ನನ್ನ ಮಾತು ಕೇಳಿದ್ದರೆ ಹೀಗೆ ಆಗುತ್ತಿಲಿಲ್ಲ ಎಂದು ಸಿದ್ದರಾಮಯ್ಯ ಅವರ ಕೈ ಹಿಡಿದುಕೊಂಡು ಸೋಮಣ್ಣ ಹೇಳಿದರು.

ಅದು ಯಾವುದೋ ಒಂದು ಸಣ್ಣದು. ಅದನ್ನು ಅವತ್ತೇ ಸರೆಂಡರ್ ಮಾಡಿದ್ದರೆ ಚನ್ನಾಗಿತ್ತು. ಅದೊಂದು ಯಾಕೆ ಮಾಡಿದ್ದರೆ. ಅಂದೇ ಸರಿ ಮಾಡಿದ್ದರೆ ಇನ್ನೂ ಹೈಕ್ಲಾಸ್ ಇತ್ತು ಎಂದು ಸಲಹೆ ನೀಡಿದರು. ಸದನದಲ್ಲಿ ಏಕೆ ಇಷ್ಟು ಕೋಟಿ ಅಲ್ಲ, ಅಷ್ಟು ಕೋಟಿ ಎಂದು ಏಕೆ ಹೇಳಿದ್ರಿ. ನಾವು ಹೇಳಿದ್ವಾ ನಿಮಗೆ ಹೇಳೋಕೆ? ನಾನೇನು ಸದನದಲ್ಲಿ ಇದ್ನಾ? ಎಂದೂ ಪ್ರೀತಿಯಿಂದಲೇ ಸಿದ್ದರಾಮಯ್ಯ ನಡೆಗೆ ಆಕ್ಷೇಪ ವ್ಯಕ್ತಪಡಿಸಿದರು.

ಸೋಮಣ್ಣ ಮಾತಿಗೆ ನಗುನಗುತ್ತಲೇ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು, ನೀನು ದೇವರ ಮೇಲೆ ನಂಬಿಕೆ ಇಟ್ಕೊಂಡಿದೀಯಾ.. ನಾನು ದೇವರನ್ನ ನಂಬಲ್ಲ, ಏಯ್ ಗೊತ್ತಿಲ್ಲದೆ ಏನೆಲ್ಲಾ ಮಾತನಾಡ್ತೀಯಾ. ಹಾಗಲ್ಲಾ ನನ್ನ ಮಾತು ಕೇಳು ಎಂದು ಪ್ರಕರಣದ ಬಗ್ಗೆ ಸಮಜಾಯಿಷಿ ನೀಡಿದರು. ಲ್ಯಾಂಡ್ ಗ್ರಾಬಿಂಗ್ ಆಕ್ಟ್ ಬಗ್ಗೆ ನೀಡಿದ ಸಿಎಂ ಯಾವ ರೀತಿಯಲ್ಲಿ ಮೂಡಾದಿಂದ ಪ್ರಕ್ರಿಯೆಯಲ್ಲಿ ಸಮಸ್ಯೆ ಆಗಿದೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com